ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಸೆಪ್ಟೆಂಬರ್ 23 ಶನಿವಾರ 2023


₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 44 | ಸಂಚಿಕೆ: 158 | ಪುಟಗಳು: 12

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

ರಕ್ತದಾನದ ಬಗ್ಗೆ ಜಾಗೃತಿ ಅಗತ್ಯ: ದಿನೇಶ್ ಗುಂಡೂರಾವ್



ಮೈಸೂರು, ಸೆ. 22–ಇಂದಿನ ಯುವ ಪೀಳಿಗೆಯಲ್ಲಿ ರಕ್ತದಾನದ ಬಗ್ಗೆ ತಪ್ಪು ಕಲ್ಪನೆಗಳಿದ್ದು, ಅದನ್ನು ಹೋಗಲಾಡಿಸಿ ರಕ್ತದಾನ ಮಹತ್ವದ ಕುರಿತು ಜಾಗೃತಿ ಮೂಡಿಸಬೇಕಾದ ಅಗತ್ಯವಿದೆ ಎಂದು ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ನಗರದ ಬನ್ನಿಮಂಟಪದಲ್ಲಿರುವ ಜೆಎಸ್‌ಎಸ್ ಮೆಡಿಕಲ್ ಕಾಲೇಜಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜೀವದಾರ ರಕ್ತ ನಿಧಿ ಕೇಂದ್ರದ ರಕ್ತದಾನದ ಜಾಗೃತಿ ಫಲಕವನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಇಂದಿನ ನಮ್ಮ ಮಾರುಕಟ್ಟೆಯಲ್ಲಿ ಎಲ್ಲವೂ ಸಿಗುತ್ತದೆ. ಆದರೆ, ಪ್ರಾಣ ಉಳಿಸುವ ರಕ್ತ ಸಿಗುವುದು ಕಷ್ಟವಾಗಿದೆ. ಆದುದರಿಂದಾಗಿ, ರಕ್ತದಾನಕ್ಕೆ ಯುವ ಜನಾಂಗ ರಾಯಭಾರಿಗಳಾಗುವ ಮೂಲಕ ಹೆಚ್ಚಿನ ಪ್ರಮಾಣದಲ್ಲಿ ರಕ್ತದಾನ ಮಾಡುವ ಮೂಲಕ ಪ್ರಾಣಾಪಾಯದಲ್ಲಿರುವವರನ್ನು ಬದುಕಿಸಲು ಮುಂದಾಗಬೇಕು. ರಕ್ತದಾನದ ಬಗ್ಗೆ ಇರುವ ತಪ್ಪು ಕಲ್ಪನೆಗಳನ್ನು ತೊಲಗಿಸಬೇಕು ಎಂದು ಹೇಳಿದರು.

ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್ ಮಾತನಾಡಿ, ದಸರಾ ಸಂದರ್ಭದಲ್ಲಿ ಲಕ್ಷಾಂತರ ಜನ ಪ್ರವಾಸಿಗರು ಮೈಸೂರಿಗೆ ಆಗಮಿಸಲಿದ್ದು, ಸಾರ್ವಜನಿಕ ಸ್ಥಳಗಳಲ್ಲಿ ರಕ್ತದಾನದ ಜಾಗೃತಿ ನಾಮಫಲಕಗಳನ್ನು ಅಳವಡಿಸುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಗುವುದು, ಹಾಗೆಯೇ ಮುಂದಿನ ದಿನಗಳಲ್ಲಿ ರಕ್ತದಾನಿಗಳ ಅನುಕೂಲಕ್ಕಾಗಿ ಸಂಚಾರಿ ರಕ್ತ ನಿಧಿ ವಾಹನವನ್ನು ಒದಗಿಸಲು ಮುಂದಾಗುತ್ತೇವೆ. ಈಗಾಗಲೇ ಹೆಚ್ಚು ಹೆಚ್ಚು ಸಂಘ ಸಂಸ್ಥೆಗಳು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಲು ಉತ್ಸಾಹದಿಂದ ಬರುತ್ತಿರುವುದು ಶ್ಲಾಘನೀಯ ಎಂದರು.

ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಕುಮಾರಸ್ವಾಮಿ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಅಧಿಕಾರಿ ಡಾ. ಶಿರಾಜ್ ಅಹಮದ್, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕರಾದ ಗಿರೀಶ್ ಹಾಗೂ ಮುತ್ತಣ್ಣ, ಅಹಿಂದ ಸಂಘಟನೆಯ ನಜರ್‌ಬಾದ್ ನಟರಾಜ್, ವಿನಯ್ ಕಣಗಾಲ್, ಡಾ.ಸುಜಾತಾ ರಾವ್, ಲತಾ ಮೋಹನ್, ಜೀವಧಾರ ರಕ್ತ ನಿಧಿ ಕೇಂದ್ರದ ಸಿಬ್ಬಂದಿ ವರ್ಗ ಇನ್ನಿತರರು ಹಾಜರಿದ್ದರು.

ಎಕ್ಸ್‌ಪ್ರೆಸ್ ವೇನಲ್ಲಿ ದರೋಡೆ: ಇಬ್ಬರ ಬಂಧನ

ಮಂಡ್ಯ, ಸೆ.22– ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇನಲ್ಲಿ ಪೊಲೀಸರ ಸೋಗಿನಲ್ಲಿ ವಾಹನ ಚಾಲಕರನ್ನು ಹೆದರಿಸಿ ಸುಲಿಗೆ ಮಾಡುತ್ತಿದ್ದ ಇಬ್ಬರು ದರೋಡೆಕೋರರನ್ನು ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸರು ಬಂಧಿಸಿದ್ದಾರೆ.

ಆ.13ರಂದು ತಡರಾತ್ರಿ 12.30ರಲ್ಲಿ ಶ್ರೀರಂಗಪಟ್ಟಣದ ಗೌರಿಪುರದ ಬಳಿ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇನ ಸರ್ವೀಸ್ ರಸ್ತೆಯಲ್ಲಿ ಕಾರು ನಿಲ್ಲಿಸಿಕೊಂಡು ವಿಶ್ರಾಂತಿ ಪಡೆಯುತ್ತಿದ್ದ ಸಂದರ್ಭ ಪೊಲೀಸರ ಸೋಗಿನಲ್ಲಿ ಬಂದ ಇಬ್ಬರು ದರೋಡೆಕೋರರು ಕಾರ್‌ನಲ್ಲಿದ್ದ ಶಿವಪ್ರಸಾದ್ ಹಾಗೂ ಅವರ ಪತ್ನಿಯನ್ನು ಹೆದರಿಸಿ ಚಿನ್ನಾಭರಣ ದೋಚಿ, ಪರಾರಿಯಾಗಿದ್ದರು. ಈ ಸಂಬಂಧ ಶಿವಪ್ರಸಾದ್ ಶ್ರೀರಂಗಪಟ್ಟಣ ಗ್ರಾಮಾಂತರ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಆರೋಪಿಗಳ ಬಂಧನಕ್ಕೆ ಬಲೆ ಬೀಸಿದ್ದ ಪೊಲೀಸರು ಸೆ.20ರಂದು ಇಬ್ಬರು ಆರೋಪಿಗಳನ್ನು ಬಂಧಿಸಿ, ಬಂಧಿತರಿಂದ 92 ಗ್ರಾಂ ಚಿನ್ನ, ನಂಬರ್ ಪ್ಲೇಟ್ ಇಲ್ಲದ ಎರಡು ಡಿಯೋ ಸ್ಕೂಟರ್, ಎರಡು ಹೆಲ್ಮೆಟ್, ಎರಡು ಡ್ರ್ಯಾಗನ್ ಅನ್ನು ವಶಕ್ಕೆ ಪಡೆದಿದ್ದಾರೆ. ಶ್ರೀರಂಗಪಟ್ಟಣ ಗ್ರಾಮಾಂತರ ಠಾಣೆ ಪೊಲೀಸರ ಈ ಕಾರ್ಯಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಜಾನಪದ ಹಾಡುಗಳು, ಹಾಸ್ಯ ಕಾರ್ಯಕ್ರಮ

ಮೈಸೂರು, ಸೆ. 22– ಮೈಸೂರಿನ ಅಭಿರುಚಿ ಬಳಗ, ಎನ್.ವ್ಹಿ. ರಮೇಶ್ ಕಲಾಬಳಗ, ಆಸಕ್ತಿ ಪ್ರಕಾಶನ ಹಾಗೂ ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತಿನ ಮೈಸೂರು ವಿಭಾಗದ ವತಿಯಿಂದ ಸೆ. 26 ರಂದು ಮಧ್ಯಾಹ್ನ 2.30 ಗಂಟೆಗೆ ಕೃಷ್ಣಮೂರ್ತಿಪುರಂ 2ನೇ ಕ್ರಾಸ್‌ನಲ್ಲಿರುವ ನಮನ ಕಲಾ ಮಂಟಪದಲ್ಲಿ ಎನ್.ವ್ಹಿ. ರಮೇಶ್ ಅವರ ಪುಸ್ತಕ ಬಿಡುಗಡೆ, ರಾಜೇಂದ್ರ ಪ್ರಸಾದ್ ಅವರಿಂದ ಜಾನಪದ ಹಾಡುಗಳು, ಜಿ.ಕೆ. ಕುಲಕರ್ಣಿ ಅವರಿಂದ ಹಾಸ್ಯ ಕಾರ್ಯಕ್ರಮ ಹಾಗೂ ನೋಂದಾಯಿಸಿದ ಕವಿಗಳಿಂದ ಕವಿಗೋಷ್ಠಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಡಾ.ಸಿ.ಜಿ. ಉಷಾದೇವಿ ಅವರು ಎನ್.ವ್ಹಿ. ರಮೇಶ್ ಅವರ 'ಅಲ್ಲಲ್ಲಿ ಆಗಾಗ' ಎಂಬ ಸಾಂದರ್ಭಿಕ ಹಾಗೂ ಸಕಾಲಿಕ ಅಂಕಣಗಳ ಸಂಕಲನ ಪುಸ್ತಕದ ಲೋಕಾರ್ಪಣೆ ಮಾಡುವರು.

ನಿಧನ



ಶಬೀರ್ ಅಹಮದ್

ಮೈಸೂರು, ಸೆ. 22– ಮೈಸೂರಿನ ಉದಯಗಿರಿಯ ಕೆಇಬಿ ಕಾಲೋನಿ ನಿವಾಸಿ ಶಬೀರ್ ಅಹಮದ್ (56) ಶುಕ್ರವಾರ ಬೆಳಗ್ಗೆ ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಜೀಜ್ ಸೇಠ್ ಜೋಡಿ ರಸ್ತೆಯಲ್ಲಿರುವ ಮಸೀದಿ ಸಾದಿಕ್ ಉಲ್ ಅಮೀರಿಯಲ್ಲಿ ನಮಾಜ್–ಇ–ಜನಾಜ ನಡೆದ ನಂತರ ಮುಸ್ಲಿಂ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೊಹಮ್ಮದ್ ಬಾಷಾ



ಮೈಸೂರು, ಸೆ. 22– ಮೈಸೂರಿನ ಉದಯಗಿರಿಯ ಕ್ಯೂಬಾ ಮಸೀದಿ ಸಮೀಪದ ನಿವಾಸಿ ಮೊಹಮ್ಮದ್ ಬಾಷಾ (78) ಗುರುವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಅಂತ್ಯಕ್ರಿಯೆ ಟಿಪ್ಪು ಸರ್ಕಲ್‌ನಲ್ಲಿರುವ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರೆ.ಕೆ.ಜಾಜಿ ಚೀರನ್



ಮೈಸೂರು, ಸೆ. 22– ಮೈಸೂರಿನ ಜೆ.ಪಿ.ನಗರದಲ್ಲಿರುವ ಇಮ್ಯಾನ್ಯುಯಲ್ ಎಜಿ ಚರ್ಚ್‌ನ ಪಾಸ್ಟರ್ ಹಾಗೂ ಶ್ರೀರಾಂಪುರ ನಿವಾಸಿ ರೆ.ಕೆ. ಜಾಜಿ ಚೀರನ್ (53) ಗುರುವಾರ ಸಂಜೆ ನಿಧನರಾದರು.

ಮೃತರು ಪತ್ನಿ ಶೀಬಾ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತಿಮ ಸೇವಾ ಕಾರ್ಯ ಜೆ.ಪಿ.ನಗರದ ರಿಂಗ್ ರಸ್ತೆಯಲ್ಲಿರುವ ಎಜಿ ವರ್ಷಿಪ್ ಸೆಂಟರ್‌ನಲ್ಲಿ ನಾಳೆ (ಸೆ.23) ಬೆಳಗ್ಗೆ 9.30ಕ್ಕೆ ನಡೆದ ನಂತರ ನಂಜನಗೂಡು ರಸ್ತೆಯಲ್ಲಿರುವ ಬೆನ್ಸನ್ ಸಿಮೆಟ್ರಿಯಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಂಜುಂಡ ನಾಯಕ



ಸುತ್ತೂರು: ಹಿರಿಯ ಕಾಂಗ್ರೆಸ್ ಮುಖಂಡ ಮತ್ತು ನಂಜನಗೂಡು ತಾಲೂಕಿನ ಸುತ್ತೂರು ಗ್ರಾಮದ ನಿವಾಸಿ ನಂಜುಂಡ ನಾಯಕ (72) ಗುರುವಾರ ಸುತ್ತೂರಿನಲ್ಲಿ ನಿಧನರಾದರು.

ಮೃತರು ಅಪಾರ ಬಂಧು ಬಳಗ ಮತ್ತು ಸ್ನೇಹಿತರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಗುರುವಾರ ಸುತ್ತೂರಿನಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಹೆಚ್.ಎನ್.ಶ್ರೀನಿವಾಸಮೂರ್ತಿ

ಮೈಸೂರು, ಸೆ. 22–ಮೂಲತಃ ಹೆಗ್ಗಡದೇವನಕೋಟೆಯವರಾದ, ಮೈಸೂರು ಶ್ರೀರಾಂಪುರ ಎಲ್‌ಐಸಿ ಕಾಲೋನಿ ನಿವಾಸಿ, ನಿವೃತ್ತ ಶಿಕ್ಷಕ ಹೆಚ್.ಎನ್.ಶ್ರೀನಿವಾಸಮೂರ್ತಿ ಅವರು ಶುಕ್ರವಾರ ಮಧ್ಯಾಹ್ನ ನಿಧನರಾದರು. ಅವರಿಗೆ 85 ವರ್ಷ ವಯಸ್ಸಾಗಿತ್ತು. ಮೃತರು ಪತ್ನಿ ಸುಲೋಚನಮ್ಮ (ಪಾಪಕ್ಕ), ಓರ್ವ ಪುತ್ರ, ಮೂವರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶನಿವಾರ ಬೆಳಗ್ಗೆ 11 ಗಂಟೆಗೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ತಮಿಳುನಾಡಿಗೆ ನೀರು ಬಿಡುವುದನ್ನು ವಿರೋಧಿಸಿ

ನೂತನ ಜಿಲ್ಲಾಧಿಕಾರಿ ಕಚೇರಿ ಎದುರು ಕರವೇ ಪ್ರತಿಭಟನೆ

ಸಂಸದರು ದೆಹಲಿಯಲ್ಲಿ ಪ್ರತಿಭಟನೆ ನಡೆಸಿ, ರಾಜೀನಾಮೆಗೆ ಸಿದ್ಧರಾಗಿ



ಮೈಸೂರು, ಸೆ.22(ಜಿಎ)–ಕಾವೇರಿ ವಿಚಾರದಲ್ಲಿ ರಾಜ್ಯದ ಎಲ್ಲಾ ಸಂಸದರು ದೆಹಲಿಯಲ್ಲಿ ಧರಣಿ ನಡೆಸಿ, ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬೇಕು, ರಾಜೀನಾಮೆಗೆ ಸಿದ್ಧರಿರಬೇಕು. ಯಾವುದೇ ಕಾರಣಕ್ಕೂ ರಾಜ್ಯ ಸರ್ಕಾರ ಕಾವೇರಿ ಪ್ರಾಧಿಕಾರದ ಆದೇಶವನ್ನು ಪಾಲಿಸಬಾರದು ಎಂದು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆಯ ಮೈಸೂರು ಘಟಕ ಪ್ರತಿಭಟನೆ ನಡೆಸಿತು.

ನಗರದ ಸಿದ್ದಾರ್ಥ ಬಡಾವಣೆಯಲ್ಲಿರುವ ನೂತನ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದ ಕರ್ನಾಟಕ ರಕ್ಷಣಾ ವೇದಿಕೆಯ ಮೈಸೂರು ಘಟಕದ ಪದಾಧಿಕಾರಿಗಳು ತಮಿಳುನಾಡು ಸರ್ಕಾರ ಮತ್ತು ಕಾವೇರಿ ಪ್ರಾಧಿಕಾರದ ವಿರುದ್ಧ ವಿವಿಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಇತ್ತೀಚಿನ ವರ್ಷಗಳಲ್ಲಿ ಎಂದೂ ಕಾಣದಷ್ಟು ಬರಗಾಲ ಸ್ಥಿತಿ ನಿರ್ಮಾಣವಾಗಿದೆ. ವಾಡಿಕೆಯಂತೆ ಮಳೆ ಆಗಿಲ್ಲ. ಈಗಾಗಲೇ 236 ತಾಲೂಕುಗಳ ಪೈಕಿ 192 ತಾಲ್ಲೂಕುಗಳು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ. ವಿಶೇಷವಾಗಿ ಕಾವೇರಿ ಕಣಿವೆ ಭಾಗದಲ್ಲಿ ತೀವ್ರ ಸ್ವರೂಪದ ಬರದ ಸ್ಥಿತಿ ನಿರ್ಮಾಣವಾಗಿದೆ. ಕೆಆರ್‌ಎಸ್‌ನಲ್ಲಿ ಉಳಿದಿರುವುದು ಕೇವಲ 20 ಟಿಎಂಸಿ ನೀರು ಮಾತ್ರ ಅದರಲ್ಲಿ ಬಳಕೆಗೆ ಸಿಗುವುದು ಕೇವಲ 15 ಟಿಎಂಸಿ ನೀರು ಮಾತ್ರ. ಇಂತಹ ಸಂದರ್ಭದಲ್ಲಿ ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರ ಸುಮಾರು 7 ಟಿಎಂಸಿಯಷ್ಟು ನೀರು ಹರಿಸಲು ಆದೇಶಿಸಿರುವುದು ಖಂಡನೀಯ ಎಂದರು.

ಬೆಂಗಳೂರಿಗೆ ಪ್ರತಿ ತಿಂಗಳು ಕುಡಿಯುವ ನೀರಿಗೆ ಒಂದೂವರೆ ಟಿಎಂಸಿ ನೀರು ಬೇಕು. ಕಾವೇರಿ ಕಣಿವೆಯ ರೈತರ ಹೊಲ, ಗದ್ದೆಗಳಿಗೆ ನೀರಿಲ್ಲ. ಕೈಗಾರಿಕೆಗಳಿಗೆ ಕೊಡಬೇಕಾದ ನೀರು ಇಲ್ಲ. ಹೀಗಿರುವಾಗ 7 ಟಿಎಂಸಿ ನೀರು ಎಲ್ಲಿಂದ ತರಲು ಸಾಧ್ಯ. ಮಂಡ್ಯ ಭಾಗದ ರೈತರು ನೀರಿಗಾಗಿ ಏನು ಮಾಡಬೇಕು.

ಬೆಂಗಳೂರಿನ ಒಂದೂವರೆ ಕೋಟಿ ಜನರು ಕುಡಿಯುವ ನೀರಿಲ್ಲದ ಸಾಯಬೇಕೆ. ಕಾವೇರಿ ಪ್ರಾಧಿಕಾರದ ಆದೇಶವನ್ನು ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ಪಾಲಿಸಬಾರದು. ನಾಡಿನ ಜನರ ಜೀವಕ್ಕಿಂತ ಯಾವುದೋ ಪ್ರಾಧಿಕಾರದ ಆದೇಶ ದೊಡ್ಡದಾಗಲು ಹೇಗೆ ಸಾಧ್ಯ. ಈ ಪ್ರಾಧಿಕಾರದ ಆದೇಶವನ್ನು ಪಾಲಿಸಲು ಹೋಗಿ, ಅವರು ಹೇಳಿದಷ್ಟು ನೀರನ್ನು ಬಿಟ್ಟು ಈಗಾಗಲೇ ಸರ್ಕಾರ ದೊಡ್ಡ ತಪ್ಪನ್ನು ಮಾಡಿದೆ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದ ಎಲ್ಲಾ ಸಂಸದರು ದೆಹಲಿಯಲ್ಲಿ ಧರಣಿ ನಡೆಸಿ, ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬೇಕು, ರಾಜೀನಾಮೆ ನೀಡಲು ಸಿದ್ಧರಿರಬೇಕು. ಯಾವುದೇ ಕಾರಣಕ್ಕೂ ರಾಜ್ಯ ಸರ್ಕಾರ ಪ್ರಾಧಿಕಾರದ ಆದೇಶವನ್ನು ಪಾಲಿಸಬಾರದು. ತಮಿಳುನಾಡಿಗೆ ಮತ್ತೆ ನೀರನ್ನು ಹರಿಸಿದರೆ, ಕರವೇಯಿಂದ ಉಗ್ರ ಸ್ವರೂಪದ ಹೋರಾಟ ನಡೆಸಲಾಗುತ್ತದೆ ಎಂದು ಎಚ್ಚರಿಸಿ ದರು. ಪ್ರತಿಭಟನೆಯಲ್ಲಿ ಕರವೇ ಜಿಲ್ಲಾ ಧ್ಯಕ್ಷ ಪ್ರವೀಣ್ ಕುಮಾರ್, ಲೋಕೇಶ್ ಕುಮಾರ್, ಗಾಯತ್ರಿ ವಿಜಯೇಂದ್ರ, ಹೇಮಂತ್ ಗೌಡ, ಸುನಂದ್, ರಫೀಕ್, ಅಪ್ರೋಜ್, ಅಸ್ಲಂ, ಶರತ್, ಲಾಲು ಮತ್ತು ಮದುವೇಶ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಸುಯೋಗ್ ಆಸ್ಪತ್ರೆಯ 6ನೇ ವಾರ್ಷಿಕೋತ್ಸವ ಆಚರಣೆ



ಮೈಸೂರು, ಸೆ. 22–ಮೈಸೂರಿನ ಪ್ರತಿಷ್ಠಿತ ಆಸ್ಪತ್ರೆಗಳಲ್ಲಿ ಒಂದಾದ ಸುಯೋಗ್ ಆಸ್ಪತ್ರೆಯು ಗುರುವಾರ ಬೆಳಗ್ಗೆ ತನ್ನ 6ನೇ ವರ್ಷದ ವಾರ್ಷಿಕೋತ್ಸವವನ್ನು ಆಸ್ಪತ್ರೆಯ ಸಭಾಂಗಣದಲ್ಲಿ ಸರಳವಾಗಿ ಆಚರಿಸಿಕೊಂಡಿತು. ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಆಸ್ಪತ್ರೆಯ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ, ಸುಯೋಗ್ ಆಸ್ಪತ್ರೆಯು ಕಳೆದ 6 ವರ್ಷಗಳಲ್ಲಿ ಅದ್ವಿತೀಯ ಸಾಧನೆಗೈದಿದ್ದು, ಸುಮಾರು 50 ಸಾವಿರ ಹೊರ ರೋಗಿಗಳು ಹಾಗೂ 20 ಸಾವಿರ ಒಳರೋಗಿಗಳಿಗೆ ಚಿಕಿತ್ಸೆ ನೀಡಿದೆ ಎಂದರು. ವರ್ಷದಿಂದ ವರ್ಷಕ್ಕೆ ಇದರ ಪ್ರಗತಿ ಇನ್ನಿತರ ಆಸ್ಪತ್ರೆಗಳ ಸಾಧನೆಗಿಂತ ಶರವೇಗದಲ್ಲಿ ಸಾಗುತ್ತಿರುವುದಕ್ಕೆ ಮೆಚ್ಚುಗೆ ವ್ಯಕ್ತ ಪಡಿಸಿದರು.

ಸುಯೋಗ್ ಆಸ್ಪತ್ರೆ ಪ್ರಾರಂಭದಿಂದಲೂ ಎಲ್ಲ ಸೂಪರ್ ಸ್ಪೆಷಾಲಿಟಿ ವಿಭಾಗಗಳು ಆರಂಭಗೊಂಡಿದ್ದು, ತಜ್ಞ ವೈದ್ಯರು ಮತ್ತು ಸಿಬ್ಬಂದಿಯ ಸೇವೆಯನ್ನು ಸ್ಮರಿಸಿದರು. ಈ ಅವಧಿಯಲ್ಲಿ ಸುಮಾರು 400ಕ್ಕೂ ಹೆಚ್ಚು ಉಚಿತ ಆರೋಗ್ಯ ತಪಾಸಣಾ ಶಿಬಿರಗಳು ಮತ್ತು ಆಸ್ಪತ್ರೆಯೊಳಗೆ 200ಕ್ಕೂ ಹೆಚ್ಚು ವೈದ್ಯಕೀಯ ವಿಚಾರಸಂಕಿರಣಗಳನ್ನು ಏರ್ಪಡಿಸಿ, ಸಾರ್ವಜನಿಕರಲ್ಲಿ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುತ್ತಿರುವುದಕ್ಕೆ ಸಾರ್ವಜನಿಕರಿಂದ ಮೆಚ್ಚುಗೆ ಗಳಿಸಿದೆ ಎಂದರು. ಸುಯೋಗ್ ಆಸ್ಪತ್ರೆಯಲ್ಲಿ ಪ್ರಾರಂಭವಾಗಿರುವ ಸುಯೋಗ್ ಡಯಾಬಿಟಿಕ್ಸ್ ಹೆಲ್ತ್ ಕ್ಲಬ್ ಸಕ್ಕರೆ ಕಾಯಿಲೆ ರೋಗಿಗಳಿಗೆ ಆಶಾಕಿರಣವಾಗಿದೆ ಎಂದರು. ಆಸ್ಪತ್ರೆಯ ಕನಸು ಮತ್ತು ಕಾರ್ಯಗತ ಮಾಡಿದ ಮೈಲುಗಲ್ಲುಗಳನ್ನು ಸ್ಮರಿಸಿದ ಡಾ.ಯೋಗಣ್ಣ, ಇದೇ ಸಂದರ್ಭ ಸುಯೋಗ್ ಆಸ್ಪತ್ರೆ ಪ್ರಾರಂಭವಾದ ದಿನದಿಂದಲೂ ಸೇವೆ ಸಲ್ಲಿಸುತ್ತಿರುವ ರಾಘವೇಂದ್ರ, ಶ್ರೀನಿವಾಸ್, ಸಾಗರ್, ಅಂಬಿಕಾ ಮತ್ತಿತರ ಸಿಬ್ಬಂದಿ ವರ್ಗದವರನ್ನು ಸನ್ಮಾನಿಸಿದರು.

ಸುಯೋಗ್ ಆಸ್ಪತ್ರೆಯ ಟ್ರಸ್ಟಿ ಶ್ರೀಮತಿ ಸುಧಾ ಯೋಗಣ್ಣ, ವ್ಯವಸ್ಥಾಪಕ ನಿರ್ದೇಶಕರಾದ ಡಾ.ಸುಯೋಗ್ ಯೋಗಣ್ಣ, ವೈದ್ಯಕೀಯ ನಿರ್ದೇಶಕ ಡಾ.ರಾಜೇಂದ್ರಪ್ರಸಾದ್, ನಿರ್ದೇಶಕರಾದ ಡಾ.ಸೀಮಾ ಯೋಗಣ್ಣ, ಆಸ್ಪತ್ರೆಯ ಕಾರ್ಯ ನಿರ್ವಹಣಾಧಿಕಾರಿ ಡಾ.ಮಂಜುನಾಥ್ ಉಪಸ್ಥಿತರಿದ್ದರು.

ನೀರಿನ ಮಟ್ಟ

	ಕೆಆರ್‌ಎಸ್ ಅಣೆಕಟ್ಟು	ಕಬಿನಿ ಅಣೆಕಟ್ಟು	ಹಾರಂಗಿ ಅಣೆಕಟ್ಟು
ಗರಿಷ್ಠ ಮಟ್ಟ	124.80 ಅಡಿ	2,284.00 ಅಡಿ	2,859.00 ಅಡಿ
ಇಂದಿನ ಮಟ್ಟ	97.02 ಅಡಿ	2,275.36 ಅಡಿ	2,856.84 ಅಡಿ
ಹಿಂದಿನ ವರ್ಷದ ಮಟ್ಟ	124.34 ಅಡಿ	2,283.04 ಅಡಿ	2,857.82 ಅಡಿ
ನಿನ್ನೆಯ ಮಟ್ಟ	97.02 ಅಡಿ	2,275.70 ಅಡಿ	2,857.29 ಅಡಿ
ಇಂದಿನ ಒಳಹರಿವು	5,845 ಕ್ಯೂಸೆಕ್ಸ್	2,359 ಕ್ಯೂಸೆಕ್ಸ್	1,070 ಕ್ಯೂಸೆಕ್ಸ್
ಇಂದಿನ ಹೊರಹರಿವು	5,735 ಕ್ಯೂಸೆಕ್ಸ್	4,390 ಕ್ಯೂಸೆಕ್ಸ್	2,800 ಕ್ಯೂಸೆಕ್ಸ್

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

23.9.2023 ಶನಿವಾರ, ಮಳೆ ನಕ್ಷತ್ರ: ಉತ್ತರಾ 14.09.2023 ರಿಂದ 27.09.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಭಾದ್ರಪದ ಮಾಸ, ಶುಕ್ಲ ಪಕ್ಷ, ತಿಥಿ: ಅಷ್ಟಮಿ, ನಕ್ಷತ್ರ: ಮೂಲ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆಯ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7ರವರೆಗೆ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ವ್ಯಸನ ಮುಕ್ತಿ ಚಿಕಿತ್ಸಾ ಶಿಬಿರ, ಸ್ಥಳ : ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 10 ರಿಂದ.

■ **ಇಂಡಿಯನ್ ಥಿಯೇಟರ್ ಫೌಂಡೇಶನ್ :** ರಾಷ್ಟ್ರೀಯ ಮಕ್ಕಳ ರಂಗೋತ್ಸವ, ಬೆಳಗ್ಗೆ 10ಕ್ಕೆ ಕನ್ನಡದಲ್ಲಿ ಮಕ್ಕಳ ಸಾಹಿತ್ಯದ ಕುರಿತು ವಿಚಾರ ಸಂಕಿರಣ, ಉದ್ಘಾಟನೆ : ಕೆ. ಮರುಳಸಿದ್ದಪ್ಪ ಆಶಯ ನುಡಿ : ರಾಜೇಂದ್ರ ಜೆನ್ನಿ, ಸ್ಥಳ: ಭೂಮಿಗೀತ, ಬೆಳಗ್ಗೆ 10.30ಕ್ಕೆ. ಕಥೆ ಕೇಳೋಣ ಬನ್ನಿ ಕಾರ್ಯಕ್ರಮ, ಉದ್ಘಾಟನೆ : ಗೀತಾ ರಾಮಾನುಜನ್, ಅಧ್ಯಕ್ಷತೆ : ರಾಮೇಶ್ವರಿ ವರ್ಮಾ, ಸ್ಥಳ: ಶ್ರೀರಂಗ, ಮಧ್ಯಾಹ್ನ 3.30 ರಿಂದ. ತೊತ್ತೋ ಚಾನ್ (ಹಿಂದಿ), ದೂಪಹಾರ್ (ಹಿಂದಿ), ಸಂಜೆ 7ಕ್ಕೆ ಬರ್ತಡೇ ಚಾಕೋಲೇಟ್ ಮತ್ತು ಗೀತ್ ಕಾ ಕಮಲ್(ಹಿಂದಿ), ಲೆಟ್ಸ್ ಫೈಂಡ್ ಡೋಜೋ ಮೋಜೊ(ಗಿಬ್ರಿಷ್), ಸ್ಥಳ: ಕಿರು ರಂಗಮಂದಿರ.

■ **ಅಭಿವೃದ್ಧಿ ಆಯುಕ್ತರು (ಕೈಮಗ್ಗ), ಜವಳಿ ಮಂತ್ರಾಲಯ, ಕೈಮಗ್ಗ ಮತ್ತು ಜವಳಿ ಇಲಾಖೆ, ಕರ್ನಾಟಕ ರಾಜ್ಯ ಸಹಕಾರಿ ಕೈಮಗ್ಗ ನೇಕಾರರ ಮಹಾಮಂಡಳಿ ನಿಯಮಿತ, ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್:** ವಿಶೇಷ ಕೈಮಗ್ಗ ಮೇಳ, ಸಂಸ್ಕೃತಿ–ಹತ್‌ಕರ್ಗ–2023, ಕೈಮಗ್ಗ ಉತ್ಪನ್ನಗಳ ಬೃಹತ್ ಪ್ರದರ್ಶನ ಮತ್ತು ಮಾರಾಟ, ಸ್ಥಳ: ಜೆಎಸ್‌ಎಸ್ ಅರ್ಬನ್ ಹಾತ್, ರಿಂಗ್ ರೋಡ್, ಬೆಳಗ್ಗೆ 10 ರಿಂದ.

■ **ಹೊನ್ನುಸಿರಿ ವಿವಿದೋದ್ದೇಶ ಸಹಕಾರ ಸಂಘ :** ವಾರ್ಷಿಕ ಮಹಾಸಭೆ, ಸ್ಥಳ: ಶಿಕ್ಷಕರ ಭವನ, ತಿ. ನರಸೀಪುರ ರಸ್ತೆ, ಬೆಳಗ್ಗೆ 10ಕ್ಕೆ.

■ **ಎಟಿಎಂಇ ಇಂಜಿನಿಯರಿಂಗ್ ಕಾಲೇಜು :** ಫ್ರೆಶರ್ಸ್ ಡೇ, ಮುಖ್ಯ ಅತಿಥಿಗಳು : ಐಎಸ್‌ಟಿಇ, ಕರ್ನಾಟಕ ನಿರ್ದೇಶಕ, ಸಿಐಟಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್ ಅಧ್ಯಕ್ಷ ಡಾ. ಡಿ.ಎಸ್. ಸುರೇಶ್, ರಾಜೀವ್ ರಾಘವನ್, ಡಾ. ಸೈಯದ್ ಶಕೀಬ್ ಉರ್ ರೆಹಮಾನ್, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10ಕ್ಕೆ.

■ **ಕ್ರೆಸೆಂಟ್ ಬಳಕೆದಾರರ ಸಹಕಾರ ಸಂಘ :** ವಾರ್ಷಿಕ ಮಹಾಸಭೆ, ಅಧ್ಯಕ್ಷತೆ : ಅಲ್‌ಹಾಜ್ ಮೆಹಮೂಬ್ ಹಸನ್ ಸೇಠ್, ಸ್ಥಳ: ಸಂಘದ ಆವರಣ, ಉದಯಗಿರಿ, ಬೆಳಗ್ಗೆ 10.30ಕ್ಕೆ.

■ **ಭಾರತೀಯ ಜೀವ ವಿಮಾ ಪ್ರತಿನಿಧಿಗಳ ಪತ್ತಿನ ಸಹಕಾರ ಸಂಘ :** ವಾರ್ಷಿಕ ಮಹಾಸಭೆ, ಸ್ಥಳ: ಸಿರ್ವಿ ಸಮಾಜ ಚಾರಿಟೆಬಲ್ ಟ್ರಸ್ಟ್, ಗೋಕುಲಂ, ಬೆಳಗ್ಗೆ 11ಕ್ಕೆ.

■ **ಮೈಸೂರು ಜಿಲ್ಲಾ ಪತ್ರಕರ್ತರ ಅಭ್ಯುದಯ ಸಹಕಾರ ಸಂಘ :** ವಾರ್ಷಿಕ ಮಹಾಸಭೆ, ಅಧ್ಯಕ್ಷತೆ : ಸಂಘದ ಅಧ್ಯಕ್ಷ ಕೆ. ದೀಪಕ್, ಸ್ಥಳ: ಸಂಘದ ಆವರಣ, ತ್ಯಾಗರಾಜ ರಸ್ತೆ, ಬೆಳಗ್ಗೆ 11ಕ್ಕೆ.

■ **ಜೆಎಸ್‌ಎಸ್ ಮಹಾವಿದ್ಯಾಪೀಠ, ಜೆಎಸ್‌ಎಸ್ ತಾಂತ್ರಿಕ ಸಂಸ್ಥೆ :** ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಗಳ 108ನೇ ಜಯಂತಿ ಮಹೋತ್ಸವ, ಸಾನ್ನಿಧ್ಯ : ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಮುಖ್ಯ ಅತಿಥಿಗಳು : ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಶರೀಫ್, ಅಧ್ಯಕ್ಷತೆ : ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ಕುಲಪತಿ ಡಾ.ಎ.ಎನ್. ಸಂತೋಷ್ ಕುಮಾರ್, ಗೌರವ ಅತಿಥಿಗಳು : ಆಧ್ಯಾತ್ಮಿಕ ಚಿಂತಕ ಶಂಕರ್ ದೇವನೂರು, ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ವಿಭಾಗದ ಸಲಹೆಗಾರ ಪ್ರೊ. ಎಂ.ಹೆಚ್. ಧನಂಜಯ, ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ. ಬಿ. ಸುರೇಶ್, ಸ್ಥಳ: ಶ್ರೀ ಗಣಪತಿ ದೇವಸ್ಥಾನ, ಎಸ್‌ಜೆಸಿಇ ಆವರಣ, ಬೆಳಗ್ಗೆ 11ಕ್ಕೆ.

■ **ಜೆಎಸ್‌ಎಸ್ ಮಹಾವಿದ್ಯಾಪೀಠ, ಜೆಎಸ್‌ಎಸ್ ಮಹಿಳಾ ಶಿಕ್ಷಣ ಸಂಸ್ಥೆಗಳ ವಸತಿ ನಿಲಯಗಳು :** ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯವರ ಜಯಂತಿ ಮಹೋತ್ಸವ, ಅಧ್ಯಕ್ಷತೆ : ಮುಖ್ಯ ನಿಲಯಪಾಲಕರಾದ ಶ್ರೀಮತಿ ಮಮತಾ ಸುರೇಶ್, ಮುಖ್ಯ ಅತಿಥಿಗಳು : ನಿವೃತ್ತ ಕನ್ನಡ ಪ್ರಾಧ್ಯಾಪಕಿ ಡಾ.ಸಿ.ಜಿ. ಉಷಾದೇವಿ, ನುಡಿ ನಮನ: ನಿವೃತ್ತ ನಿರ್ದೇಶಕ ಡಾ. ಎಸ್. ಶಿವರಾಜಪ್ಪ, ಸ್ಥಳ: ನವಜ್ಯೋತಿ ಸಭಾಂಗಣ, ಜೆಎಸ್‌ಎಸ್ ಮಹಿಳಾ ಕಾಲೇಜು, ಬೆಳಗ್ಗೆ 11ಕ್ಕೆ.

■ **ಮಹಾರಾಜ ಶ್ರೀ ಜಯಚಾಮರಾಜ ಒಡೆಯರ್ ಪ್ರತಿಷ್ಠಾನ, ಬೆಂಗಳೂರು ಮತ್ತು ಸಂಸ್ಕೃತಿ ಬುಕ್ ಏಜೆನ್ಸೀಸ್** : 'ರಾಜರ್ಷಿ' ಶ್ರೀ ಮನ್ಮಹಾರಾಜ ಜಯಚಾಮರಾಜೇಂದ್ರ ಒಡೆಯರ್ ಬಹದ್ದೂರ್ –ಜೀವನ ಮತ್ತು ಸಾಧನೆಗಳು (1919–1974) ಕೃತಿ ಬಿಡುಗಡೆ ಸಮಾರಂಭ, ಅಧ್ಯಕ್ಷತೆ : ಮಹಾರಾಜರ ಅಳಿಯಂದಿರಾದ ಆರ್. ರಾಜಾಚಂದ್ರ, ಪುಸ್ತಕ ಬಿಡುಗಡೆ: ಮಹಾರಾಜಕುಮಾರಿ ಶ್ರೀಮತಿ ಕಾಮಾಕ್ಷಿದೇವಿ, ಮಹಾರಾಜಕುಮಾರಿ ಶ್ರೀಮತಿ ಇಂದ್ರಾಕ್ಷಿದೇವಿ, ಪುಸ್ತಕ ಪರಿಚಯ: ವಿದ್ವಾಂಸ ಡಾ. ಟಿ.ವಿ. ವೆಂಕಟಾ ಚಲಶಾಸ್ತ್ರಿ, ಲೇಖಕರ ನುಡಿ : ನಿವೃತ್ತ ಪ್ರಾಧ್ಯಾಪಕ ಡಾ. ಬಿ.ವಿ. ಸುಧಾಮಣಿ, ಪ್ರಕಾಶಕರ ನುಡಿ : ಬರಹಗಾರ ಸಂಸ್ಕೃತಿ ಸುಬ್ರಹ್ಮಣ್ಯ, ಸ್ಥಳ: ವಿಜ್ಞಾನ ಭವನ, ಮಾನಸಗಂಗೋತ್ರಿ, ಸಂಜೆ 5ಕ್ಕೆ.

■ **ಅನಾಥಾಲಯ:** ಎಂ. ವೆಂಕಟಕೃಷ್ಣಯ್ಯ (ತಾತಯ್ಯ)ನವರ 179ನೇ ಜಯಂತ್ಯುತ್ಸವದ ಸಂದರ್ಭದಲ್ಲಿ ನಡೆಸಿದ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಣೆ, ವಿದ್ಯಾರ್ಥಿ ವೇತನ ವಿತರಣಾ ಕಾರ್ಯಕ್ರಮ, ಅಧ್ಯಕ್ಷತೆ: ಅನಾಥಾಲಯ ಅಧ್ಯಕ್ಷ ಸಿ.ವಿ.ಗೋಪಿನಾಥ್, ಮುಖ್ಯ ಅತಿಥಿಗಳು: ಅನಾಥಾಲಯದ ಹಿರಿಯ ಸದಸ್ಯ ಡಾ. ಎನ್. ಶ್ರೀರಾಮ್, ಸ್ಥಳ: ತಾತಯ್ಯನವರ ಅನಾಥಾಲಯದ ಆವರಣ, ನಾರಾಯಣ ಶಾಸ್ತ್ರಿ ರಸ್ತೆ, ಸಂಜೆ 5.30 ರಿಂದ.

■ **ಮೈಸೂರು ವೀರಶೈವ ಸಜ್ಜನ ಸಂಘ :** 48ನೇ ವರ್ಷದ ಸ್ವರ್ಣಗೌರಿ ಹಾಗೂ ವರಸಿದ್ಧಿ ವಿನಾಯಕ ಪೂಜಾ ಮಹೋತ್ಸವ, ಸಂಜೆ 5.30 ರಿಂದ ಮನರಂಜನಾ ಕ್ರೀಡೆಗಳು, ಸಂಜೆ 6.30 ರಿಂದ ಎಂ.ವಿ.ಎಸ್.ಎಸ್. ಸೂಪರ್ ಫ್ಯಾಮಿಲಿ–2023, ಸ್ಥಳ:ಕಂಠಿ ಮಲ್ಲಣ್ಣನವರ ಕಲ್ಯಾಣ ಮಂದಿರ, ಕಬೀರ್ ರಸ್ತೆ.

■ **ಎಸ್‌ಪಿವಿಜಿಎಂಸಿ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ:** 62ನೇ ಪಾರಂಪರಿಕ ಸಂಗೀತೋತ್ಸವ, ಸಂಜೆ 5.30 ರಿಂದ ರಾಜಶೇಖರ ವಿಲಾಸ, ವಾಚನ: ಕು. ಧನ್ಯಾ, ವ್ಯಾಖ್ಯಾನ: ಮೊರಬದ ಮಲ್ಲಿಕಾರ್ಜುನ, ಸಂಜೆ 6.45 ರಿಂದ ವಿದ್ವಾನ್ ವಿಷ್ಣುದೇವ್ ನಂಬೂದರಿ ಅವರಿಂದ ಗಾಯನ, ವಿದ್ವಾನ್ ಕಾರ್ತಿಕ್ ನಾಗರಾಜ್–ಮಯೋಲಿನ್, ವಿದ್ವಾನ್ ರಾಮಣಮೂರ್ತಿ–ಮೃದಂಗ, ವಿದ್ವಾನ್ ಅಮೃತ್–ಖಂಜಿರ, ಸ್ಥಳ: 8ನೇ ಕ್ರಾಸ್, ವಿ.ವಿ.ಮೊಹಲ್ಲಾ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಇಷ್ಟನಾಥಾನಂದ ಅವರಿಂದ ಆತ್ಮಬೋಧ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಮೈಸೂರು ಧಾರ್ಮಿಕ ಪ್ರತಿಷ್ಠಾನ, ಮೈಸೂರು ಕಲಾ ಪ್ರತಿಷ್ಠಾನ:** ಮೈಸೂರು ಗಣೇಶ ಉತ್ಸವ–2023, ಸಂಜೆ 5.30 ರಿಂದ ಹರೀಶ್ ಪಾಂಡವ್ ಅವರಿಂದ ಸ್ಯಾಕ್ಸೋಫೋನ್, ಸಂಜೆ 6.45 ರಿಂದ ಗುರು ರೇವತಿ ನರಸಿಂಹನ್ ಶಿಷ್ಯೆಯರಿಂದ ಭರತನಾಟ್ಯ, ಸಂಜೆ 7.30 ರಿಂದ ಹಿರೇಮಗಳೂರು ಕಣ್ಣನ್ ಮತ್ತು ತಂಡದಿಂದ ಹರಿಕಥೆ, ಸ್ಥಳ: ಮಾಧವ ಕೃಪ

■ **ಕಟ್ಟೆ ಬಳಗ :** 8ನೇ ವರ್ಷದ ಗಣೇಶೋತ್ಸವ, ಶ್ರೀ ಮಹಾಗಣಪತಿ ಮೆರವಣಿಗೆ, ಪ್ರಸಾದ ವಿನಿಯೋಗ, ವಿಸರ್ಜನೆ, ಸ್ಥಳ: ಕೃಷ್ಣಮೂರ್ತಿಪುರಂ, ಸಂಜೆ 6.30ಕ್ಕೆ.

■ **ರತ್ನಾಕರ್ ಅಭಿಮಾನಿ ಬಳಗ :** ರತ್ನಾಕರ್ ನೆನಪು, ಉಪಸ್ಥಿತರು : ಮೇಯರ್ ಶಿವಕುಮಾರ್, ಶಾಸಕ ಟಿ.ಎಸ್. ಶ್ರೀವತ್ಸ, ಪಾಲಿಕೆ ಸದಸ್ಯರಾದ ಬಿ.ವಿ. ಮಂಜುನಾಥ್, ಮಾ.ವಿ. ರಾಮಪ್ರಸಾದ್, ವಿದ್ವಾನ್ ಎಂ. ನಾಗರಾಜ್, ಕೆ.ಆರ್. ಮೋಹನ್ ಕುಮಾರ್, ಟಿ.ಆರ್. ಹರೀಶ್‌ಪ್ರಸಾದ್, ಇಳೈ ಆಳ್ವಾರ್ ಸ್ವಾಮೀಜಿ, ಕೌಟಿಲ್ಯ ರಘು, ಮಂಡ್ಯ ರಮೇಶ್, ಡಾ. ಎಂ.ಡಿ. ಸುದರ್ಶನ್, ಮಡ್ಡೀಕೆರೆ ಗೋಪಾಲ್, ಚಂದ್ರಶೇಖರ್, ಆರ್. ಅನಂತರಾಮು, ರಘುರಾಂ ವಾಜಪೇಯಿ, ನಟರಾಜ ಜೋಯಿಸ್, ಎಂ.ಡಿ. ಪಾರ್ಥಸಾರಥಿ, ನಾ. ನಾಗಚಂದ್ರ, ಬಿ.ಎಂ. ರಾಮಚಂದ್ರ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ, ಸಂಜೆ 6ಕ್ಕೆ.

■ **ಶ್ರೀ ಶ್ರೀ ಶ್ರೀ 101 ಗಣಪತಿ ದೇವಸ್ಥಾನ ಟ್ರಸ್ಟ್ :** ಶ್ರೀ ಗೌರಿ–ಗಣೇಶ ಹಬ್ಬ ಮತ್ತು ಶ್ರೀ 101 ಗಣಪತಿ ಪ್ರತಿಷ್ಠಾನ, ಶ್ರೀಮತಿ ಪುಷ್ಪಲತಾ ನಾರಾಯಣ್ ವೃಂದದವರಿಂದ ಭಕ್ತಿಗೀತೆ, ಭಾವಗೀತೆ, ಸುಗಮ ಸಂಗೀತ, ಸ್ಥಳ:ದೇವಸ್ಥಾನ, ಕೆ.ಆರ್.ಮೊಹಲ್ಲಾ, ಸಂಜೆ 7ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಸಿಎಫ್‌ಟಿಆರ್‌ಐ ಶೋಧ ಅನುಶೋಧ–ಪ್ರಾಯೋಜಿತ ಕಾರ್ಯಕ್ರಮ, ಪ್ರಸ್ತುತಿ–ಡಾ. ಅಶ್ವಥ್‌ಕುಮಾರ್, 6.40 ಹಾಡು ಹೇಳಿದ ಕಥೆ, ಪ್ರಸ್ತುತಿ– ಡಾ. ಮೈಸೂರ್ ಉಮೇಶ್, 7.15 ಭಾವಗೀತೆಗಳು– ಮಂಜುಳಾ ಗುರುರಾಜ್, 8.30 ವಿಶಿಷ್ಟ ವ್ಯಕ್ತಿ – ವಿಶೇಷ ಯತ್ನ, ಬಾನುಲಿ ಸರಣಿ – ಆಯುರ್ವೇದ ವೈದ್ಯ ಮೈಸೂರಿನ ಡಾ. ನಾಗೇಶ್ ಎನ್ ಅವರೊಡನೆ ಸಂವಾದ ನಡೆಸಿಕೊಡುತ್ತಾರೆ ದಿವಾಕರ ಹೆಗಡೆ, 10.00 ಕೆ.ಪಿ. ನಾರಾಯಣ ಮತ್ತು ಸಂಗಡಿಗರು–ನಾಗಸ್ವರ ವಾದನ, 11.00 "ಸ್ವರಾಜ್"– ಭಾರತ ಸ್ವಾತಂತ್ಯ ಸಂಗ್ರಾಮದ ಸಮಗ್ರಗಾಥೆ

ಮಧ್ಯಾಹ್ನ: 12.30 ದೇವರನಾಮ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಕುರಿತ ಕಾರ್ಯಕ್ರಮ, 12.45 ಜನಪದಗೀತೆ, 1.20 ಭಾವಗೀತೆ –ಜಿ.ಎಸ್. ಧರಿತ್ರೀ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.30 ಮಕ್ಕಳ ಮಂಟಪ–ನಂದಗೋಕುಲ, ಪ್ರಸ್ತುತಿ–ಕೆ.ಬಿ. ಮೀನಾ, 4.00 ನಾಟಕ ಸಹದೇವನ ಗುಟ್ಟು, ಮೂಲಕಥೆ– ಮನು, ಬಾನುಲಿ ರೂಪಾಂತರ ಎಸ್.ಕೆ.ಸುಬ್ಬಣ್ಣ, ನಿರ್ಮಾಣ– ಪ್ರಭುಸ್ವಾಮಿ ಮಳಿಮಠ, 4.30 ನೆನಪಿನಂಗಳ–ಆಕಾಶವಾಣಿಯ ನಿವೃತ್ತ ನಿಲಯ ಕಲಾವಿದೆ, ಹಿರಿಯ ಶಾಸ್ತ್ರೀಯ ಹಾಡುಗಾರ್ತಿ ಟಿ. ನಾಗಮ್ಮ ಅವರೊಂದಿಗೆ ಜಿ. ರಾಜಲಕ್ಷ್ಮಿ ಶ್ರೀಧರ್ ಅವರು ನಡೆಸಿದ ಸಂವಾದ, 6.50 ಕೃಷಿರಂಗ–ತೋರಣ ಹೂರಣ, ವಾರದ ಗ್ರಾಮೀಣ ಕಾರ್ಯಕ್ರಮ, ಪ್ರಸ್ತುತಿ–ಎನ್. ಕೇಶವಮೂರ್ತಿ, ಡಾ. ಮೈಸೂರು ಉಮೇಶ್, ಆರ್. ಲೋಕೇಶ್ವರಿ, ಪರಾಗ–ಬೇಸಾಯದ ಬದುಕು ಸರಾಗ–ಬಾನುಲಿ ಸರಣಿ, 8.00 ಯುವವಾಣಿ, 9.00 ಮಹಿಳೆಯರಲ್ಲಿ ಉದ್ಯಮಶೀಲತೆ–ಉದ್ಯಮಿ ಪದ್ಮಾವತಿ ಭಟ್ ಅವರೊಂದಿಗೆ ಸಂದರ್ಶನ. ಸಂದರ್ಶಕರು– ದಿವಾಕರ ಹೆಗಡೆ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ, ಎನ್. ರವಿಕಿರಣ್–ಚಿತ್ರವೀಣಾ ವಾದನ

ವೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಸೆಪ್ಟೆಂಬರ್ 23 ಶನಿವಾರ 2023

ಸಂಪುಟ: 44 | ಸಂಚಿಕೆ: 158 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಕೇಂದ್ರ ಗೃಹ ಸಚಿವ ಅಮಿತ್ ಷಾ, ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾರೊಂದಿಗೆ ಜೆಡಿಎಸ್ ನಾಯಕರೂ ಆದ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಸುದೀರ್ಘ ಸಭೆ ಫಲಶ್ರುತಿ


ಜೆಡಿಎಸ್ ಈಗ ಎನ್‌ಡಿಎ ಬಳಗ

● ಬಿಜೆಪಿ–ಜೆಡಿಎಸ್ ಪ್ರಮುಖರ ಸಭೆ ಕರೆಯಲು ಶಾಗೆ ಹೆಚ್‌ಡಿಕೆ ಮನವಿ ● ದಸರಾ ಮುಗಿದ ತಕ್ಷಣ ರಾಜ್ಯದಲ್ಲಿ ಎನ್‌ಡಿಎ ಬೃಹತ್ ಸಮಾವೇಶ ● ಪರಸ್ಪರ ವಿಶ್ವಾಸದ ಮೇಲೆ ಮೈತ್ರಿ, ಸೀಟು ಹಂಚಿಕೆ ತೀರ್ಮಾನ ● ನಿಮ್ಮ ಪ್ರಾಬಲ್ಯವಿರುವಲ್ಲಿ ನಮ್ಮ ಸಹಕಾರ; ನಾವು ಪ್ರಬಲರಾಗಿರುವಲ್ಲಿ ನೀವು ಸಹಕರಿಸಿ: ಷಾ ಪ್ರತಿಪಾದನೆ

ಬೆಂಗಳೂರು, ಸೆ.22(ಕೆಎಂಶಿ)– ಜಾತ್ಯಾತೀತ ಜನತಾ ದಳ ಈಗ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಮೈತ್ರಿಕೂಟದ (ಎನ್‌ಡಿಎ) ಭಾಗವಾಗಿದೆ. ಇದರೊಂದಿಗೆ ಮುಂಬರುವ ಲೋಕಸಭಾ ಚುನಾವಣೆ ಸೇರಿದಂತೆ ಎಲ್ಲಾ ಹಂತದ ಚುನಾವಣೆಗಳಲ್ಲೂ ಕಾಂಗ್ರೆಸ್ ವಿರುದ್ಧ ಹೊಂದಾಣಿಕೆ ಮಾಡಿಕೊಂಡು ಚುನಾವಣಾ ಕಣಕ್ಕಿಳಿಯಲು ಬಿಜೆಪಿ ಹಾಗೂ ಜೆಡಿಎಸ್ ನಿರ್ಧರಿಸಿವೆ.


ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ದೆಹಲಿಯಲ್ಲಿಂದು ಕೇಂದ್ರ ಗೃಹಸಚಿವ ಅಮಿತ್ ಷಾ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರೊಂದಿಗೆ ಈ ಸಂಬಂಧ ನಡೆಸಿದ ಮಾತುಕತೆ ಯಶಸ್ವಿಯಾಗಿದೆ. ನಮ್ಮ ಪಕ್ಷದ ಹಿರಿಯ ನಾಯಕರು ಹಾಗೂ ಗೃಹ ಸಚಿವರಾದ ಅಮಿತ್ ಷಾ ಅವರ ಸಮ್ಮುಖದಲ್ಲಿ ಕರ್ನಾಟಕದ ಮಾಜಿ ಮುಖ್ಯಮಂತ್ರಿ ಹಾಗೂ ಜೆಡಿಎಸ್ ನಾಯಕ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿದ್ದು, ಜೆಡಿಎಸ್ ಪ್ರಜಾಸತ್ತಾತ್ಮಕ ಮೈತ್ರಿಕೂಟದ ಭಾಗವಾಗಲು ನಿರ್ಧರಿಸಿರುವುದು ಸಂತಸ ಉಂಟು ಮಾಡಿದೆ. ಅವರನ್ನು ಹಾರ್ದಿಕವಾಗಿ ಎನ್‌ಡಿಎಗೆ ಸ್ವಾಗತಿಸುತ್ತೇನೆ. ಇದರಿಂದ ಎನ್‌ಡಿಎ ಮತ್ತಷ್ಟು ಬಲಗೊಳ್ಳುವುದರೊಂದಿಗೆ ಹೊಸ ಭಾರತ, ಪ್ರಬಲ ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಉದ್ದೇಶ ಸಾಕಾರಗೊಳ್ಳಲು ಸಹಕಾರಿಯಾಗಲಿದೆ ಎಂದು ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ ಅಭಿಪ್ರಾಯಪಟ್ಟಿದ್ದಾರೆ.

ಮಾತುಕತೆ ವೇಳೆ ಕುಮಾರಸ್ವಾಮಿ, ದಸರಾ ಮುಗಿದ ಕೂಡಲೇ ರಾಜ್ಯದಲ್ಲಿ ಎನ್‌ಡಿಎ ವತಿಯಿಂದ ಬೃಹತ್ ಸಮಾವೇಶವನ್ನು ಏರ್ಪಡಿಸಿ, ಮೈತ್ರಿ ಸಂದೇಶವನ್ನು ನೀಡುವುದು ಹಾಗೂ ಬಿಜೆಪಿ–ಜೆಡಿಎಸ್ ಮುಖಂಡರ ಸಭೆ ಕರೆದು, ಮೈತ್ರಿ ಮನದಟ್ಟು ಮಾಡಿಕೊಡುವುದು ಸೂಕ್ತವೆಂದು ತಿಳಿಸಿದ್ದಾರೆ.



ಶುಕ್ರವಾರ ನವದೆಹಲಿಯಲ್ಲಿ ಗೃಹ ಸಚಿವ ಅಮಿತ್ ಶಾ, ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ ಅವರನ್ನು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಭೇಟಿಯಾಗಿ ಮೈತ್ರಿ ಮಾತುಕತೆ ನಡೆಸಿದರು. ಈ ವೇಳೆ (ಎಡದಿಂದ) ಮಾಜಿ ರಾಜ್ಯಸಭಾ ಸದಸ್ಯ ಕುಪೇಂದ್ರ ರೆಡ್ಡಿ, ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಇತರರಿದ್ದರು.

❝ ಎನ್‌ಡಿಎ–ಜೆಡಿಎಸ್ ಮೈತ್ರಿ ಸಂಬಂಧ ಪ್ರಧಾನಿ ನರೇಂದ್ರ ಮೋದಿಯವರು ಹಾಗೂ ನಮ್ಮ ಜೆಡಿಎಸ್ ರಾಷ್ಟ್ರಾಧ್ಯಕ್ಷರಾದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಒಮ್ಮತದ ತೀರ್ಮಾನ ಕೈಗೊಂಡಿದ್ದಾರೆ. ನಮ್ಮ ನಾಯಕರಾದ ಹೆಚ್.ಡಿ.ಕುಮಾರಸ್ವಾಮಿಯವರು ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರೊಂದಿಗೆ 40 ನಿಮಿಷಗಳ ಕಾಲ ಸುದೀರ್ಘ ಚರ್ಚೆ ನಡೆಸಿದ್ದಾರೆ. ಎನ್‌ಡಿಎ ಹಾಗೂ ಜೆಡಿಎಸ್ ಮೈತ್ರಿಯಿಂದ ಉಭಯ ಪಕ್ಷಗಳಿಗೂ ಅನುಕೂಲ. ಇದು ರಾಜ್ಯದ ಸರ್ವತೋಮುಖ ಅಭಿವೃದ್ಧಿಗೂ ಪೂರಕವಾಗಲಿದೆ. **–ಜಿ.ಟಿ.ದೇವೇಗೌಡರು, ಶಾಸಕರು ಹಾಗೂ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರು**



ಕಳೆದ ವಿಧಾನಸಭಾ ಚುನಾವಣೆಯಲ್ಲಿ ಉಭಯ ಪಕ್ಷಗಳು ಭಾರೀ ಸೋಲುಂಡ ನಂತರ ಎಚ್ಚೆತ್ತು ಮುಂದಿನ ದಿನಗಳಲ್ಲಿ ಕಾಂಗ್ರೆಸ್‌ಗೆ ಆಗುವ ಲಾಭವನ್ನು ತಪ್ಪಿಸಲು ಮೈತ್ರಿ ತೀರ್ಮಾನ ಕೈಗೊಂಡಿವೆ. ಮಾತುಕತೆಯ ಸಂದರ್ಭದಲ್ಲಿ ಮೈತ್ರಿಗೆ ಹೆಚ್ಚು ಒತ್ತು ಕೊಡಲಾಗಿದ್ದು, ಚುನಾವಣೆ ಸಂದರ್ಭದಲ್ಲಿ ಮಾಡಿಕೊಳ್ಳುವ ಕ್ಷೇತ್ರ ಹೊಂದಾಣಿಕೆ ವಿಚಾರದಲ್ಲಿ ಸರ್ವಸಮ್ಮತ ತೀರ್ಮಾನಕ್ಕೆ ಬಂದಿದ್ದಾರೆ. ಕುಮಾರಸ್ವಾಮಿ ಅವರೊಂದಿಗಿನ ಮಾತುಕತೆಯ ಆರಂಭದಲ್ಲೇ ಅಮಿತ್‌ಷಾ ನಮ್ಮ ಹೊಂದಾಣಿಕೆಯು ವಿಶ್ವಾಸದ ತಳಹದಿಯ ಮೇಲೆ ನಿಂತಿರಬೇಕು. ಇದರಲ್ಲಿ ಯಾರು ಮೇಲೂ ಎನ್ನುವ ಭಾವನೆ ಬೇಡ. ನೀವು ಎಲ್ಲಿ ಪ್ರಾಬಲ್ಯವಾಗಿದ್ದಿರೋ ಅಲ್ಲಿ ನೀವು ಕಾಂಗ್ರೆಸ್ ವಿರುದ್ಧ ಸೆಣಸಿ, ನಾವು ಪ್ರಾಬಲ್ಯವಿರುವ ಕಡೆಗಳಲ್ಲಿ ನಮಗೆ ನಿಮ್ಮ ಬೆಂಬಲವಿರಲಿ. ಮೈಸೂರು, ತುಮಕೂರು, ಚಾಮರಾಜನಗರ ● 6ನೇ ಪುಟಕ್ಕೆ

ನ್ಯಾಯಾಂಗ ನಿಂದನೆಯಿಂದ ಪಾರಾಗಲು ತಮಿಳ್ನಾಡಿಗೆ ನೀರು


ರಾಜ್ಯ ಸರ್ಕಾರ ನಿರ್ಧಾರ

ಬೆಂಗಳೂರು, ಸೆ.22– ನ್ಯಾಯಾಂಗ ನಿಂದನೆಯಿಂದ ಪಾರಾಗುವ ನಿಟ್ಟಿನಲ್ಲಿ ತಮಿಳುನಾಡಿಗೆ ಸೆ.26ರವರೆಗೂ ನೀರು ಹರಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಸಚಿವ ಸಂಪುಟ ಸಭೆ ಬಳಿಕ ಈ ವಿಷಯ ತಿಳಿಸಿದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ರಾಜಕಾರಣ ಮಾಡುವವರು ಮಾಡುತ್ತಲೇ ಇರಲಿ. ಕಾನೂನು ತಜ್ಞರು ಕ್ಯಾಬಿನೆಟ್‌ಗೆ ಬಂದು ಎಲ್ಲ ಕಾನೂನು ವಿವರ ನೀಡಿದ್ದಾರೆ. ಅದರಂತೆ ಸೆ.26ರ ವರೆಗೂ ನೀರು ಬಿಡಲಾಗುವುದು ಎಂದರು.

ನಿತ್ಯ 5 ಸಾವಿರ ಕ್ಯೂಸೆಕ್ ನೀರು ಬಿಡಲು ಹೇಳಿದ್ದಾರೆ. 7000 ಕ್ಯೂಸೆಕ್‌ನಷ್ಟು ಒಳ ಹರಿವಿದೆ. ಮೇಕೆದಾಟು ವಿಚಾರ ಕೂಡ ಕೋರ್ಟ್ ವಿಚಾರಣೆಯಲ್ಲಿ ಪ್ರಸ್ತಾಪ ಆಗಿದೆ. 177 ಟಿಎಂಸಿ ಕೊಟ್ಟೇ ಕೊಡ್ತಾರೆ. ಮೇಕೆದಾಟು ಕಟ್ಟಲಿ ಅಂತ ನ್ಯಾಯಾಧೀಶರು ಹೇಳಿದ್ದಾರೆ. ಮೇಕೆದಾಟುವಿಗೆ ಸಂಬಂಧಿಸಿದಂತೆ ನಾವು ಮುಂದಿನ ಪ್ರಸ್ತಾವನೆ ಸಲ್ಲಿಸುತ್ತೇವೆ ಎಂದು ಹೇಳಿದರು. ಎಲ್ಲ ರೈತರ ಹಿತವನ್ನೂ ● 6ನೇ ಪುಟಕ್ಕೆ

ಅ.1ರಿಂದ ಆಸ್ತಿ ಮಾರ್ಗಸೂಚಿ ದರ ಪರಿಷ್ಕರಣೆ ಹಿನ್ನೆಲೆ ಇಂದಿನಿಂದ ಸಬ್ ರಿಜಿಸ್ಟ್ರಾರ್ ಕಚೇರಿಗಳ ಕೆಲಸದ ಅವಧಿ ರಾತ್ರಿ 8 ಗಂಟೆ ತನಕ ವಿಸ್ತರಣೆ



ಮೈಸೂರು, ಸೆ.22(ಬಿಎಲ್‌ಯು)– ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು ಸೇರಿದಂತೆ ರಾಜ್ಯದ ಎಲ್ಲಾ ಉಪ ನೋಂದಣಾಧಿಕಾರಿ ಕಚೇರಿಗಳ ಕೆಲಸದ ಅವಧಿಯನ್ನು ಸೆಪ್ಟೆಂಬರ್ 23ರಿಂದ ಬೆಳಿಗ್ಗೆ 8 ಗಂಟೆಯಿಂದ ರಾತ್ರಿ 8 ಗಂಟೆವರೆಗೆ ವಿಸ್ತರಿಸಲಾಗಿದೆ.

ನೋಂದಣಿ ಮಹಾ ಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತೆ ಬಿ.ಆರ್. ಮಮತಾ ಈ ವಿಚಾರವನ್ನು ತಿಳಿಸಿದ್ದಾರೆ.

ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕೇಂದ್ರ ಮೌಲ್ಯಮಾಪನ ಸಮಿತಿಯ ಆದೇಶದಂತೆ ಸ್ಥಿರಾಸ್ತಿಗಳ ಮಾರುಕಟ್ಟೆ ಮೌಲ್ಯ ಮಾರ್ಗಸೂಚಿ ದರ ಪರಿಷ್ಕರಣೆ ಅಕ್ಟೋಬರ್ 1 ರಿಂದ ಜಾರಿ ಬರುತ್ತಿದೆ. ಇದರಿಂದ ● 6ನೇ ಪುಟಕ್ಕೆ

ಇಂದಿರಾ ಕ್ಯಾಂಟೀನ್‌ಗಳಲ್ಲಿ ಗುಣಮಟ್ಟದ ಆಹಾರ ನೀಡದ ಏಜೆನ್ಸಿಗಳ ಬ್ಲಾಕ್ ಲಿಸ್ಟ್‌ಗೆ ಸೇರಿಸಿ

ಜಿಲ್ಲಾಧಿಕಾರಿಗಳಿಗೆ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಆದೇಶ

● ಇಂದಿರಾ ಕ್ಯಾಂಟೀನ್‌ನಲ್ಲಿ ಲಾಭ, ನಷ್ಟದ ಲೆಕ್ಕಾಚಾರವಿಲ್ಲ ● ನೀರು ಪೂರೈಸಲು ಖಾಸಗಿ ಬೋರ್‌ವೆಲ್ ಬಾಡಿಗೆಗೆ ಪಡೆಯಿರಿ ● ಹೊಸ ಆರ್‌ಒ ಪ್ಲಾಂಟ್ ಅಳವಡಿಸಿಕೊಳ್ಳಿ ● ಪೌರಕಾರ್ಮಿಕರಿಗೆ ಸಕಾಲದಲ್ಲಿ ವೇತನ ನೀಡಿ



ಮೈಸೂರು, ಸೆ.22(ಬಿಎಲ್‌ಯು)– ಇಂದಿರಾ ಕ್ಯಾಂಟೀನ್‌ಗಳಲ್ಲಿ ಗುಣಮಟ್ಟದ ಆಹಾರ ನೀಡದ ಏಜೆನ್ಸಿಗಳನ್ನು ಬ್ಲಾಕ್ ಲಿಸ್ಟ್ ಗೆ ಸೇರಿಸಿ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಜಿಲ್ಲಾಧಿಕಾರಿಗಳಿಗೆ ಆದೇಶ ನೀಡಿದ್ದಾರೆ.

ಮೈಸೂರಿನ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಶುಕ್ರವಾರ ಮೈಸೂರು ವಿಭಾಗದ ಎಂಟು ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಇತರೆ ಹಿರಿಯ ಅಧಿಕಾರಿಗಳ ಸಭೆ ನಡೆಸಿ, ನಗರಾಭಿವೃದ್ಧಿ ಇಲಾಖೆ ಹಾಗೂ ಪೌರಾಡಳಿತ ಇಲಾಖೆಗಳ ಪ್ರಗತಿ ಪರಿಶೀಲಿಸಿದ ವೇಳೆ ಮಾತನಾಡಿದ ಅವರು, ಇಂದಿರಾ ಕ್ಯಾಂಟೀನ್‌ಗಳಲ್ಲಿ ಗುಣಮಟ್ಟದ ಆಹಾರ ನೀಡಲಾಗುತ್ತಿದೆಯೇ ಎಂದು ಆಗಾಗ್ಗೆ ಖುದ್ದು ಭೇಟಿ ನೀಡಿ ಪರಿಶೀಲನೆ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಇಂದಿರಾ ಕ್ಯಾಂಟೀನ್ ಕಾಂಗ್ರೆಸ್ ಸರ್ಕಾರದ ಕನಸಿನ ಯೋಜನೆಯಾಗಿದ್ದು, ಇದರಲ್ಲಿ ಲಾಭ, ನಷ್ಟದ ಲೆಕ್ಕಾಚಾರವಿಲ್ಲ ಎಂದು ಸ್ಪಷ್ಟಪಡಿಸಿದ ● 6ನೇ ಪುಟಕ್ಕೆ

ಮುಡಾದ ಸಾವಿರ ಕೋಟಿ ಹಗರಣದ ಬಗ್ಗೆ ಸಮಗ್ರ ತನಿಖೆ

● ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಭರವಸೆ ● ಸರ್ಕಾರದ ಒಂದಿಂಚು ಭೂಮಿ ಕೈ ತಪ್ಪದಂತೆ ಕ್ರಮ ● ಪಾಲಿಕೆ ವಾರ್ಡ್ ಮೀಸಲಾತಿ ನಿಗದಿ ಪ್ರಕ್ರಿಯೆ ಆರಂಭ ● ನಿಗದಿತ ಸಮಯಕ್ಕೆ ಪಾಲಿಕೆ ಚುನಾವಣೆ ● ಕುಡಿಯುವ ನೀರಿಗಾಗಿ ಪ್ರತಿ ಜಿಲ್ಲೆಗೆ 30 ಕೋಟಿ ಬಿಡುಗಡೆ

ಮೈಸೂರು, ಸೆ.22(ಬಿಎಲ್‌ಯು)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ನಡೆದಿದೆ ಎನ್ನಲಾದ 1000 ಕೋಟಿ ರೂ. ಹಗರಣದ ಬಗ್ಗೆ ಸಮಗ್ರ ತನಿಖೆ ನಡೆಸಲಾಗುವುದು ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಭರವಸೆ ನೀಡಿದರು.

ಮೈಸೂರಿನ ಜಿಲ್ಲಾ ಪಂಚಾಯತ್‌ನಲ್ಲಿ ಪತ್ರಕರ್ತರ ಜೊತೆ ಮಾತನಾಡಿದ ಅವರು, ಹಗರಣದ ಬಗ್ಗೆ ಈಗಷ್ಟೆ ನನಗೆ ಮಾಹಿತಿ ದೊರೆತಿದೆ. ಈ ಬಗ್ಗೆ ಮತ್ತಷ್ಟು ಮಾಹಿತಿ ಪಡೆಯುತ್ತೇನೆ. ತರುವಾಯ ಹಗರಣದ ಬಗ್ಗೆ ಸಮಗ್ರ ತನಿಖೆ ನಡೆಸಲಾಗುವುದು. ಇದರಲ್ಲಿ ಯಾರನ್ನು ರಕ್ಷಿಸುವ ಉದ್ದೇಶ ಸರ್ಕಾರಕ್ಕಿಲ್ಲ ಎಂದು ಸ್ಪಷ್ಟಪಡಿಸಿದರು. ಯಾವುದೇ ಅಕ್ರಮ ನಡೆದಿದ್ದರೂ ಸರ್ಕಾರ ಕಠಿಣ



ಕ್ರಮ ಕೈಗೊಳ್ಳಲಿದೆ. ಸರ್ಕಾರದ ಒಂದಿಂಚು ಭೂಮಿ ಕೈ ತಪ್ಪದಂತೆ ಹದ್ದಿನ ಕಣ್ಣಿಡುತ್ತೇವೆ. ಸರ್ಕಾರಿ ಭೂಮಿ ಖಾಸಗಿಯವರ ಸ್ವತ್ತಾಗಲು ಬಿಡುವುದಿಲ್ಲ ಎಂದು ಭೈರತಿ ಸುರೇಶ್ ಹೇಳಿದರು.

ನಿಗದಿತ ಸಮಯಕ್ಕೆ ಪಾಲಿಕೆ ಚುನಾವಣೆ: ಮೈಸೂರು ನಗರ ಪಾಲಿಕೆ ಚುನಾವಣೆಯ ವಾರ್ಡ್‌ಗಳ ಮೀಸಲಾತಿ ನಿಗದಿ ಪ್ರಕ್ರಿಯೆ ಆರಂಭವಾಗಿದೆ. ನಿಗದಿತ ಸಮಯದಲ್ಲಿ ಚುನಾವಣೆ ಮಾಡುತ್ತೇವೆ. ● 6ನೇ ಪುಟಕ್ಕೆ

ಮಂಡ್ಯದಲ್ಲಿ ತಾರಕಕ್ಕೇರಿದ ಕಾವೇರಿ ಹೋರಾಟ: ಚುಂಚಶ್ರೀಗಳು ಭಾಗಿ

● ರೈತರಿಗೆ ಆತ್ಮಸ್ಥೈರ್ಯ ತುಂಬಿದ ನಿರ್ಮಲಾನಂದನಾಥಶ್ರೀಗಳು ● ಹೋರಾಟದಲ್ಲಿ ಭಾಗಿಯಾದ ಮಹೇಶ್ ಜೋಷಿ, ಅಭಿಷೇಕ್ ಅಂಬರೀಷ್

ಇಂದು ಮಂಡ್ಯ ನಗರ ಬಂದ್

ಮಂಡ್ಯ: ತಮಿಳುನಾಡಿಗೆ ಕಾವೇರಿ ನೀರು ಬಿಡಲು ಸುಪ್ರೀಂಕೋರ್ಟ್ ಆದೇಶಿಸಿರುವ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ಶನಿವಾರ ಮಂಡ್ಯ ನಗರ ಬಂದ್‌ಗೆ ಕರೆ ನೀಡಿದ್ದು, ಅಂಗಡಿ ಮುಂಗಟ್ಟು ಮುಚ್ಚಿ ಬಂದ್‌ಗೆ ಬೆಂಬಲ ನೀಡಬೇಕೆಂದು ಮನವಿ ಮಾಡಿದ್ದಾರೆ.

ಬೆಳಗ್ಗೆ 8 ರಿಂದ ಸಂಜೆ 6 ರವರೆಗೆ ಬಂದ್ ಇರಲಿದ್ದು, ಹೋಟೆಲ್ ಮಾಲೀಕರು ಹಾಗೂ ವರ್ತಕರ ಸಂಘದವರು ಬೆಂಬಲ ನೀಡುವಂತೆ ಮನವಿ ಮಾಡಿದ್ದು, ಈಗಾಗಲೇ ಬಂದ್ ಸಂಬಂಧ ಹಲವು ವರ್ತಕರ ಸಂಘಟನೆಗಳೊಂದಿಗೆ ಸಮಿತಿ ಸಭೆ ನಡೆಸಿದೆ. ಖಾಸಗಿ ಬಸ್ ಮಾಲೀಕರ ಸಂಘ, ಆಟೋ ಚಾಲಕ, ಮಾಲೀಕರ ಸಂಘ ಸೇರಿ ಹಲವು ಸಂಘಟನೆಗಳಿಗೆ ಮನವಿ ಮಾಡಿದ್ದು, ಬಹುತೇಕ ಎಲ್ಲಾ ಸಂಘ ಸಂಸ್ಥೆಗಳು ರೈತರ ಹೋರಾಟಕ್ಕೆ ಸಾಥ್ ನೀಡುವ ಸಾಧ್ಯತೆ ಇದೆ. ಬೆಳಗ್ಗೆ 8 ಗಂಟೆಯಿಂದ ಮಂಡ್ಯ ನಗರದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಯಲಿದ್ದು, ಮಂಡ್ಯದ ವಿಶ್ವೇಶ್ವರಯ್ಯ ಪ್ರತಿಮೆಯಿಂದ ಜಯಚಾಮ ರಾಜೇಂದ್ರ ಒಡೆಯರ್ ವೃತ್ತ, ಮಹಾವೀರ ವೃತ್ತ, ವಿ.ವಿ.ರಸ್ತೆ, ವಿವೇಕಾನಂದ ರಸ್ತೆ, ನೂರಡಿ ರಸ್ತೆ ಸೇರಿದಂತೆ ನಗರದ ಹಲವು ರಸ್ತೆಗಳಲ್ಲಿ ಬೃಹತ್ ಬೈಕ್ ರ‍್ಯಾಲಿ ನಡೆಯಲಿದೆ.

ಮಂಡ್ಯದ ಎಲ್ಲಾ ಅಂಗಡಿಯವರು ಬಂದ್‌ಗೆ ಸಾಥ್ ನೀಡಲಿದ್ದು, ಆಟೋ ಸಂಚಾರ, ಖಾಸಗಿ ಬಸ್ ಸಂಚಾರ, ಬಹುತೇಕ ಶಾಲಾ–ಕಾಲೇಜುಗಳು ಬಂದ್ ಆಗಲಿದ್ದು, ಸರ್ಕಾರಿ ಕಚೇರಿಯನ್ನು ಬಂದ್ ಮಾಡುವಂತೆ ಮನವಿ ಮಾಡಲಾಗಿದೆ. ಮೆಡಿಕಲ್ ಸ್ಟೋರ್, ಆಸ್ಪತ್ರೆ, ಹಾಲಿನ ಬೂತ್ ಮಾತ್ರ ತೆರೆಯಲಿದ್ದು, ಪರಿಸ್ಥಿತಿ ನೋಡಿಕೊಂಡು ಕೆಎಸ್‌ಆರ್‌ಟಿಸಿ ಬಸ್‌ಗಳು ಸಂಚರಿಸಲಿವೆ.



ಮಂಡ್ಯ, ಸೆ.22(ಮೋಹನ್‌ರಾಜ್)– ಸಕ್ಕರೆ ನಾಡಲ್ಲಿ ಕಾವೇರಿ ಕಿಚ್ಚು ತಾರಕಕ್ಕೇರಿದ್ದು, ರೈತ ಹಿತರಕ್ಷಣಾ ಸಮಿತಿ ನಡೆಸುತ್ತಿರುವ ಕಾವೇರಿ ಹೋರಾಟದ ಅಖಾಡಕ್ಕೆ ಶುಕ್ರವಾರ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಧುಮುಕಿ, ರೈತರಿಗೆ ಆತ್ಮಸ್ಥೈರ್ಯ ತುಂಬಿದರು. ನಗರದ ಸರ್‌ಎಂವಿ ಪ್ರತಿಮೆ ಎದುರು ನಡೆಯುತ್ತಿರುವ ಪ್ರತಿಭಟನೆಯಲ್ಲಿ ಮಾಜಿ ಸಚಿವ ಸಿ.ಎಸ್. ಪುಟ್ಟರಾಜು, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ್ ಜೋಷಿ, ನಟ ಅಭಿಷೇಕ್ ಅಂಬರೀಶ್ ಸೇರಿದಂತೆ ಪ್ರಮುಖ ಪಕ್ಷಗಳ ಮುಖಂಡರು, ಪ್ರತಿಪರರು, ರೈತ ಮುಖಂಡರು ಪಾಲ್ಗೊಂಡು ತಮಿಳುನಾಡಿಗೆ ನೀರು ಬಿಡುತ್ತಿರುವ ಕ್ರಮ ಖಂಡಿಸಿದರು. ಬಳಿಕ ಬೆಂಗಳೂರು–ಮೈಸೂರು ಹೆದ್ದಾರಿ ತಡೆದು ರಾಜ್ಯ ಸರ್ಕಾರ, ತಮಿಳುನಾಡು ಸರ್ಕಾರ, ಪ್ರಾಧಿಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಆದಿಚುಂಚನಗಿರಿ ಪೀಠಾಧ್ಯಕ್ಷ ಶ್ರೀನಿರ್ಮಲಾನಂದನಾಥ ಸ್ವಾಮೀಜಿ ಮಾತನಾಡಿ, ಹಲವು ದಶಕಗಳಿಂದ ಕಾವೇರಿ ಸಮಸ್ಯೆ ಹಾಗೇ ಉಳಿದಿದೆ. ಆದ್ಯತೆ ಮೇರೆಗೆ ಕುಡಿಯುವ ನೀರು ಕೊಡಬೇಕು. ಆನಂತರ ವ್ಯವಸಾಯ, ಬಳಿಕ ಕೈಗಾರಿಕೆ ಮತ್ತು ಇತರೆ ಕೆಲಸಕ್ಕೆ ಬಳಕೆಯಾಗಬೇಕು. ಪ್ರತಿ ವರ್ಷ ತಮಿಳುನಾಡಿಗೆ 419 ಟಿಎಂಸಿ, ಕರ್ನಾಟಕಕ್ಕೆ 270 ಟಿಎಂಸಿ ನೀರು ● 6ನೇ ಪುಟಕ್ಕೆ

ಕಾವೇರಿ ಹೋರಾಟದಲ್ಲಿ ಇಂದು ಮಾಜಿ ಸಿಎಂ ಕುಮಾರಸ್ವಾಮಿ ಭಾಗಿ

ಬೆಂಗಳೂರು, ಸೆ.22(ಕೆಎಂಶಿ)– ತಮಿಳುನಾಡಿಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಕಾವೇರಿ ನೀರು ಹರಿಸುತ್ತಿರುವುದನ್ನು ವಿರೋಧಿಸಿ ಮಂಡ್ಯ ಜಿಲ್ಲೆಯ ಜನರು ನಡೆಸಲಿರುವ ಬಂದ್‌ಗೆ ಬೆಂಬಲ ವ್ಯಕ್ತಪಡಿಸುವ ಮೂಲಕ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ರಾಜ್ಯದ ಹಿತಕ್ಕಾಗಿ ಹೋರಾಟಕ್ಕಿಳಿಯಲಿದ್ದಾರೆ.



ಶನಿವಾರ ಬೆಳಗ್ಗೆ ದೆಹಲಿಯಿಂದ ಬೆಂಗಳೂರಿಗೆ ಅವರು ವಾಪಸ್ಸಾಗಲಿದ್ದು, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ನೇರವಾಗಿ ಮಂಡ್ಯಕ್ಕೆ ತೆರಳಲಿದ್ದಾರೆ. ಈ ಸಂಬಂಧ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸರ್ಕಾರದ ತಪ್ಪಿನಿಂದ ರಾಜ್ಯದ ಜನರು ದೊಡ್ಡ ಪ್ರಮಾಣದ ಜಲ ಸಂಕಷ್ಟಕ್ಕೆ ತುತ್ತಾಗಲಿದ್ದಾರೆ. ಈಗಾಗಲೇ ಭೀಕರ ಜಲಕ್ಷಾಮದ ಎಲ್ಲಾ ಲಕ್ಷಣಗಳು ಗೋಚರವಾಗುತ್ತಿವೆ. ಆದರೂ ಸರ್ಕಾರ ನಿರ್ಲಕ್ಷ್ಯ ಧೋರಣೆ ತಾಳಿದೆ. ಹೀಗಾಗಿ ಜನರು ಹೋರಾಟಕ್ಕೆ ಮುಂದಾಗಿದ್ದಾರೆ. ಜನರ ಜತೆ ನಿಲ್ಲುವುದು ನನ್ನ ಕರ್ತವ್ಯ. ಹೀಗಾಗಿ ಹೋರಾಟಕ್ಕೆ ನನ್ನ ಬೆಂಬಲವಿದೆ ಎಂದು ಅವರು ತಿಳಿಸಿದ್ದಾರೆ. ಈ ನಡುವೆ ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ರಾಜ್ಯವು ಎದುರಿಸುತ್ತಿರುವ ಕಾವೇರಿ ● 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಸುಬ್ಬಿ : "ನಿಂಗಿ, ಕರೆಂಟ್ ಹೋದರೆ ಎಲ್ಲರೂ ಮಾಡುವ ಮೊದಲ ಕೆಲಸ ಯಾವುದು?"

ನಿಂಗಿ : "ಮನೆಯಿಂದ ಹೊರಗೆ ಬಂದು ಪಕ್ಕದ ಮನೆಯಲ್ಲಿ ಕರೆಂಟ್ ಇದೆಯಾ ಎಂದು ನೋಡುವುದು!"

ಮೈಸೂರು ಮಿತ್ರ

ಶನಿವಾರ, 23 ಸೆಪ್ಟೆಂಬರ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಒಂದು ಉತ್ತಮ ಪುಸ್ತಕ ನೂರು ಒಳ್ಳೆಯ ಸ್ನೇಹಿತರಿಗೆ ಸಮ. ಆದರೆ ಒಬ್ಬ ಒಳ್ಳೆಯ ಸ್ನೇಹಿತ ಒಂದು ಗ್ರಂಥಾಲಯಕ್ಕೆ ಸಮ. –ಎಪಿಜೆ ಅಬ್ದುಲ್ ಕಲಾಂ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹುಚ್ಚನ ಮದುವೆಯಲ್ಲಿ ಉಂಡೋನೆ ಜಾಣ

ನಿಮ್ಮ ಪತ್ರಗಳು

ಗೃಹಲಕ್ಷ್ಮಿ ಎಂಬ ಮಾಯಾ ಜಿಂಕೆ

ಮಾನ್ಯರೆ,

ಗ್ಯಾರಂಟಿ ಅಸ್ತ್ರವನ್ನು ಮುಂದಿಟ್ಟುಕೊಂಡು ಅಧಿಕಾರಕ್ಕೆ ಬಂದ ಈ ಸರ್ಕಾರ, ಬಂದಾಗಿನಿಂದ ಕೇವಲ ಮುಖ್ಯಮಂತ್ರಿ ಬಿಟ್ಟರೆ, ಆ ಖಾತೆ ಯಾರಿಗೆ, ಈ ಖಾತೆ ಯಾರಿಗೆ ಎಂದು ಒಂದು ತಿಂಗಳು ಕಾಲ ಕಳೆಯಿತು.

ಅದಾದ ನಂತರ ಗ್ಯಾರಂಟಿ ಸ್ಕೀಂಗಳಿಗೆ ಬಂದರೆ ಒಂದೊಂದು ಸ್ಕೀಮ್ ಅನುಷ್ಠಾನ ಗೊಳಿಸಲು ಅದರದ್ದೇ ಆದ ಕೆಲವು ನ್ಯೂನತೆ ಹಾಗೂ ಸಿದ್ದತೆಗಳನ್ನು ಸರಿಯಾಗಿ ಮಾಡಲಾಗದೆ ಅಧಿಕಾರ ಮಂತ್ರ ಒಂದೇ ಮನಸ್ಸಿನಲ್ಲಿ ಇಟ್ಟುಕೊಂಡು ಈ ಉಚಿತಗಳ ಆಮಿಷ ತೋರಿಸಿ ಅಧಿಕಾರಕ್ಕೆ ಬಂದು ಈಗ ಅದನ್ನು ಅನುಷ್ಠಾನಕ್ಕೆ ತರಲು ಹರಸಾಹಸ ಪಡುತ್ತಿದೆ. ಹೇಗೋ ಮಹಿಳೆಯರಿಗೆ ಉಚಿತ ಬಸ್ ಸೇವೆ ಹಾಗೂ ಉಚಿತ ವಿದ್ಯುತ್ (ನಿಬಂಧನೆಗಳಿಗೆ ಒಳಪಟ್ಟಿರುತ್ತದೆ), ಉಚಿತ 10 ಕೆಜಿ ಅಕ್ಕಿ (ಕೇಂದ್ರದ 5 ಕೆಜಿ ಸೇರಿರುತ್ತದೆ ಎಂದು ಮೊದಲು ಹೇಳಿಲ್ಲ) ಕೊಟ್ಟು ವಿಶ್ರಾಂತಿ ತೆಗೆದುಕೊಳ್ಳುತ್ತಿರುವ ಹಾಗೆ ಕಾಣುತ್ತಿದೆ.

ಮತ್ತೆ ಗೃಹ ಲಕ್ಷ್ಮಿ ಎಲ್ಲಾ ಯೋಜನೆಗಿಂತ ಸ್ವಲ್ಪ ಮುಖ್ಯ ಯೋಜನೆ. ಇದರಲ್ಲೂ ಸಹ ಮೊದಲು ಎಲ್ಲಾ ರೀತಿಯ ಪಡಿತರ ಚೀಟಿ ಹೊಂದಿರುವ ಮಹಿಳೆಯರು ಅರ್ಹ ಎಂದು ಹೇಳಿ ಈಗ ಅದನ್ನು ಬಿಪಿಎಲ್ ಕಾರ್ಡ್‌ದಾರರಿಗೆ ಎಂದು ಬದಲಾಯಿಸ ಲಾಯಿತು. ಈಗ ಅದನ್ನು ಅನುಷ್ಠಾನ ಮಾಡುವ ಕೆಲಸ ಬಹಳ ಮಂದಗತಿಯಲ್ಲಿ ಸಾಗಿದೆ. ಸರಕಾರ ನೀಡುವ ಮಾಹಿತಿ ಪ್ರಕಾರ 1ಕೋಟಿ 20 ಲಕ್ಷ ಮಹಿಳೆಯರು ಇದಕ್ಕೆ ನೋಂದಣಿ ಮಾಡಿದ್ದಾರೆ. ಆದರೆ ವಿತರಣೆ ಆಗಿರುವುದು ಬೆರಳೆಣಿಕೆ ಜನಕ್ಕೆ ಮಾತ್ರ.. ಬಾಕಿ ಜನರ ಹಣ ವರ್ಗಾವಣೆ ಆಗದಿರಲು ಕಾರಣ ಬ್ಯಾಂಕ್ ಖಾತೆ ಸರಿ ಇಲ್ಲ, ಆಧಾರ್ ಜೋಡಣೆ ಆಗಿಲ್ಲ... ಹೀಗೆ ಹತ್ತು ಹಲವು ಕಾರಣಗಳು. ಅದೇ ಎಲ್ಲಾ ಸರಿ ಇದ್ದವರ ಖಾತೆಗೂ ಹಣ ಜಮಾವಣೆ ಆಗಿಲ್ಲ.

ಅಕ್ಕಿ ಹಣ ಖಾತೆಗೆ ಜಮೆ ಆಗಿದೆ. ಆದರೆ 2000 ಜಮಾ ಆಗಲು ಖಾತೆ ಸರಿ ಇಲ್ಲ ಎಂಬ ಉತ್ತರ. ಇದರ ಬಗ್ಗೆ ವಿಚಾರ ತಿಳಿದುಕೊಳ್ಳಲು ಯಾರನ್ನು ಸಂಪರ್ಕಿಸಬೇಕು ಎಂಬ ಮಾಹಿತಿ ಯಾರು ಕೊಡುತ್ತಿಲ್ಲ. ಕೇವಲ ಜನರನ್ನು ಅಲ್ಲಿ ಕೇಳಿ ಇಲ್ಲಿ ಕೇಳಿ ಎಂಬ ಉತ್ತರ. ಈಗ 2 ತಿಂಗಳಿಂದ ಗೃಹ ಲಕ್ಷ್ಮಿ ಹಣ ಖಾತೆಗೆ ಜಮೆ ಆಗಿಲ್ಲ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ದಿನಕ್ಕೊಂದು ದಿನಾಂಕ ಹೇಳುತ್ತಾ ಕಾಲ ಕಳೆಯುತ್ತಿದ್ದಾರೆ. ಈಗ ಬಡವರ ಬಂಧು ನಮ್ಮ ಮುಖ್ಯಮಂತ್ರಿಗಳು ಇದಕ್ಕೆ ಪ್ರತಿಕ್ರಿಯೆ ನೀಡುವ ಗೋಜಿಗೆ ಹೋಗುತ್ತಿಲ್ಲ.

ಇನ್ನು ಯುವನಿಧಿ ಬಗ್ಗೆ ಯಾರು ಸಹ ಕೇಳೋರು ಇಲ್ಲ. ಆಮಿಷಕ್ಕೆ ಒಳಗಾಗಿ ಮತ ಹಾಕಿದ ನಿರುದ್ಯೋಗಿಗಳ ಕೈಗೆ ಸಿಕ್ಕಿದ್ದು ಚೆಂಬು. ಈಗ ದಿನದಿಂದ ದಿನಕ್ಕೆ ಅಗತ್ಯ ವಸ್ತುಗಳ ಬೆಲೆ ಏರಿಕೆ ಕಂಡಿದೆ. ನೀವು 2000 ಕೊಡದಿದ್ದರೂ ಪರವಾಗಿಲ್ಲ ಯುವನಿಧಿ ಹಣ ಕೊಡದಿದ್ದರೂ ಪರ್ವಾಗಿಲ್ಲ. ಅಗತ್ಯ ವಸ್ತುಗಳ ಬೆಲೆ ನಿಯಂತ್ರಣ ಮಾಡಿ ಬಡ ಹಾಗೂ ಮಧ್ಯಮ ವರ್ಗದ ಜನರ ಜೀವನದ ಜೊತೆ ಆಟ ಆಡದೆ ಪರಿಸ್ಥಿತಿ ಅರ್ಥ ಮಾಡಿಕೊಂಡು ಇದಕ್ಕೆ ಪರಿಹಾರ ನೀಡಲು ವಿನಂತಿ ಮಾಡಿಕೊಳ್ಳುತ್ತೇನೆ.

–ರಾಘವೇಂದ್ರ, ಸಾಮಾಜಿಕ ಕಾರ್ಯಕರ್ತ

ಕಾವೇರಿ ಪ್ರಾಧಿಕಾರ ಪುನರ್‌ರಚನೆ ಅನಿವಾರ್ಯ

ಮಾನ್ಯರೆ,

ಕರ್ನಾಟಕ ಪಾಲಿಗೆ 'ಕಾವೇರಿ ನದಿ ಪ್ರಾಧಿಕಾರ'ದಿಂದ ತೀವ್ರ ಅನ್ಯಾಯ ವಾಗುತ್ತಿದ್ದು, ಪ್ರಾಧಿಕಾರ ವಾಸ್ತವ ಪರಿಸ್ಥಿತಿಯನ್ನು ಅರಿಯದೇ ಏಕಪಕ್ಷೀಯವಾಗಿ ತೀರ್ಪು ನೀಡುತ್ತಿರುವುದು ಕರ್ನಾಟಕದ ಪಾಲಿಗೆ ಮರಣ ಶಾಸನ ಬರೆಯುತ್ತಿದೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಕರ್ನಾಟಕಕ್ಕೆ ಇರುವ ಒಂದೇ ಮಾರ್ಗವೆಂದರೆ, ಪ್ರಾಧಿಕಾರವನ್ನೇ ಪುನರ್‌ರಚಿಸುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುವುದು. ಹೊಸ ಪ್ರಾಧಿಕಾರದಲ್ಲಿ ಕರ್ನಾಟಕ, ತಮಿಳುನಾಡು ಮತ್ತು ಪುದುಚೇರಿಯ ನೀರಾವರಿ ತಜ್ಞರು ಸೇರಿದಂತೆ ಕೇಂದ್ರ ಸರ್ಕಾರದ ನೀರಾವರಿ ಸಚಿವರು ಮತ್ತು ಈ ಮೂರು ರಾಜ್ಯಗಳ ಮುಖ್ಯಮಂತ್ರಿಗಳು, ನೀರಾವರಿ ಸಚಿವರು ಮತ್ತು ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳು ಸೇರಿದಂತೆ ಹೊಸ ಪ್ರಾಧಿಕಾರದ ರಚನೆಯಾದರೆ ಮಾತ್ರ ಈ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು.

ಮಳೆ ಬಾರದ ವರ್ಷಗಳಲ್ಲಿ ಏನು ಮಾಡಬೇಕು ಎಂಬ ಸಂಕಷ್ಟ ಪರಿಸ್ಥಿತಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ. ರಾಜ್ಯ ಸರ್ಕಾರ ಈ ಬಗ್ಗೆ ಯೋಚಿಸಲಿ.

–ಬೂಕನಕೆರೆ ವಿಜೇಂದ್ರ, ಲೇಖಕರು, ಕುವೆಂಪುನಗರ, ಮೈಸೂರು

ಕುಂಬಾರಕೊಪ್ಪಲಿಗೆ ಬಸ್ ಸೌಲಭ್ಯ ಕಲ್ಪಿಸಿ

ಮಾನ್ಯರೆ,

ಇತ್ತೀಚೆಗೆ ಮೈಸೂರು ಮಿತ್ರದಲ್ಲಿ ಕುಂಬಾರಕೊಪ್ಪಲು ಬಡಾವಣೆಯ ಬಸ್ ಸೌಲಭ್ಯದ ಕೊರತೆ ಬಗ್ಗೆ ಪತ್ರ ಬರೆಯಲಾಗಿತ್ತು. ಬಳಿಕ ಸ್ವಲ್ಪ ದಿನ ಬಸ್ ಸೌಲಭ್ಯ ನೀಡಲಾಗಿತ್ತು. ಆದರೆ ಮತ್ತೆ ಈ ಮಾರ್ಗದಲ್ಲಿ ಬಸ್ ಸಂಚಾರ ರದ್ದುಗೊಳಿಸಲಾಗಿದೆ. ಹಿರಿಯ ನಾಗರಿಕರು, ಮಹಿಳೆಯರು, ವಿದ್ಯಾರ್ಥಿಗಳು, ಕಾರ್ಮಿಕರು ಸ್ಯಾನಿಟೋರಿಯಂವರೆಗೂ ನಡೆದು ಬಸ್ ಹತ್ತುವ ಪರಿಸ್ಥಿತಿ ಇದೆ. ಈ ಭಾಗದಲ್ಲಿ ಅನೇಕ ಆಸ್ಪತ್ರೆಗಳು, ಶಾಲಾ–ಕಾಲೇಜುಗಳೂ ಇದೆ. ಈ ಭಾಗಕ್ಕೆ ನಿರಂತರವಾಗಿ ಬಸ್ ಸೌಲಭ್ಯ ಕಲ್ಪಿಸಿಕೊಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಲ್ಲಿ ಮನವಿ. –ನೊಂದ ನಾಗರಿಕರು, ಮೈಸೂರು.

ವಿದ್ಯಾರ್ಥಿಗಳು ಎಚ್ಚರಿಕೆಯಿಂದಿರಬೇಕು

ಮಾನ್ಯರೆ,

ಇಬ್ಬರು ಪಿಯುಸಿ ವಿದ್ಯಾರ್ಥಿಗಳ ನಡುವೆ ಇತ್ತೀಚೆಗೆ ಕ್ಷುಲಕ ಕಾರಣಕ್ಕಾಗಿ ನಡೆದ ಜಗಳ ಕೊಲೆಯಲ್ಲಿ ಪರ್ಯಾವಸನಗೊಂಡಿರುವುದು ಮೈಸೂರು ನಗರದ ಖಾಸಗಿ ಕಾಲೇಜೊಂದರಲ್ಲಿ ನಡೆದಿರುವುದು ಆತಂಕಕಾರಿಯಾಗಿದೆ. ಇತ್ತೀಚಿನ ವರ್ಷಗಳಲ್ಲಿ ಹದಿಹರೆಯದ ಹುಡುಗರಲ್ಲಿ ರೋಷ, ದ್ವೇಷ ನಿರ್ಮಾಣಗೊಳ್ಳುತ್ತಿದ್ದು, ಅನೇಕ ದುಷ್ಕಾರ್ಯಗಳಿಗೆ ಪ್ರೇರೇಪಣೆ ನೀಡುತ್ತಿದೆ. ವ್ಹೀಲಿಂಗ್, ರೀಲ್ಸ್ ಸೇರಿದಂತೆ ಇಂದಿನ ವಿದ್ಯಾರ್ಥಿಗಳು ಅನೇಕ ದುಷ್ಕಾರ್ಯಗಳಲ್ಲಿ ತೊಡಗಿಸಿಕೊಳ್ಳುತ್ತಿದ್ದಾರೆ.

ವ್ಹೀಲಿಂಗ್‌ನಿಂದಾಗಿ ಅನೇಕ ಅಮಾಯಕರು ಪ್ರಾಣ ಕಳೆದುಕೊಳ್ಳುತ್ತಿರುವುದು ಸಹ ಪ್ರತಿ ನಿತ್ಯ ಮಾಧ್ಯಮಗಳಲ್ಲಿ ವರದಿಯಾಗುತ್ತಿದೆ. ಸ್ನೇಹಿತರ ಸಹವಾಸ ಸುತ್ತ ಮುತ್ತಲಿನ ಪರಿಸರ, ತಂತ್ರಜ್ಞಾನದ ಮಿತಿ ಮೀರಿದ ಬೆಳವಣಿಗೆ, ಮೊಬೈಲ್ ವ್ಯಾಮೋಹ ಮುಂತಾದವುಗಳು ವಿದ್ಯಾರ್ಥಿಗಳ ಮೇಲೆ ತನ್ನದೇ ಆದ ಪ್ರಭಾವ ಬೀರುತ್ತಿದ್ದು, ಅನೇಕ ವಿದ್ಯಾರ್ಥಿಗಳು ಇಂದು ಮೊಬೈಲ್ ದಾಸರಾಗುತ್ತಿದ್ದಾರೆ. ದುಷ್ಪ್ರೇರಣೆ ಎಲ್ಲಿಂದ ಬೇಕಾದರೂ ಬರಬಹುದು. ಆದರೆ ನಮ್ಮ ನಮ್ಮ ಮಕ್ಕಳನ್ನು ಆದಷ್ಟು ಜಾಗ್ರತೆಯಿಂದ ನೋಡಿಕೊಳ್ಳಬೇಕು. ವಿದ್ಯಾರ್ಥಿಗಳು ತಮಗೆ ಬೇಡವಾದ ವಿಚಾರಗಳಿಗೆ ತಲೆಕೆಡಿಸಿಕೊಳ್ಳದೆ ತಮ್ಮ ಶೈಕ್ಷಣಿಕ ಚಟುವಟಿಕೆಗಳ ಬಗ್ಗೆ ಗಮನ ಹರಿಸಿ, ತಂದೆ ತಾಯಿಗಳಿಗೆ ಒಳ್ಳೆಯ ಮಕ್ಕಳಾಗಿ, ದೇಶದ ಸತ್ಪ್ರಜೆಗಳಾಗಿ ರೂಪುಗೊಳ್ಳಬೇಕಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು



ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ : 94815 33167

ಬಹುಮುಖಿ

ಪ್ರಜಾಪ್ರಭುತ್ವವಾದಿ ಜಯಚಾಮರಾಜ ಒಡೆಯರು

ನಮ್ಮ ಭಾರತದಲ್ಲಿ ಬೇಕಾದಷ್ಟು ರಾಜವಂಶಗಳು ತಲೆಯೆತ್ತಿ ಮೆರೆದು ಆಗಿ ಹೋಗಿವೆ. ದೇಶಕ್ಕೆ ಸ್ವಾತಂತ್ರ್ಯ ಬಂದಾಗ ಸುಮಾರು 550 ಸಂಸ್ಥಾನಗಳಿದ್ದವು. ಇವನ್ನು ರಾಜ ಮಹಾರಾಜರು, ನವಾಬರು, ಸುಲ್ತಾನರು, ಪಾಳೆಗಾರರು ಆಳುತ್ತಿದ್ದರು. ಆದರೆ ನಿಜವಾಗಿ ಪ್ರಜೆಗಳ ಹಿತರಕ್ಷಣೆಯನ್ನು ಕಾಯಕ ಮಾಡಿಕೊಂಡಿದ್ದ ಭಾರತದ ಏಕೈಕ ಸಂಸ್ಥಾನವೆಂದರೆ ಅದು ಕರ್ನಾಟಕದ ಯದು ಕುಲದ ಮೈಸೂರು ಸಂಸ್ಥಾನ ಮಾತ್ರವಾಗಿತ್ತು.

ಇದು 1399 ರಲ್ಲಿ ಯದುರಾಯನಿಂದ ಆರಂಭಗೊಂಡು 1947ರ ತನಕ ಐದೂವರೆ ಶತಕಗಳ ಕಾಲ ಈ ನಾಡನ್ನು ವೈಭವದಿಂದ ಆಳಿ, ಪ್ರಜಾಪಾಲಕರಾಗಿ ಮೆರೆದವರು ಯದುಕುಲದರಸರು. ಈ ಸುದೀರ್ಘ ಅವಧಿಯಲ್ಲಿ ಮೈಸೂರು ಅರಸೊತ್ತಿಗೆಯು ಇಪ್ಪತ್ತೈದು ಅರಸರನ್ನು ಕಂಡಿದೆ. ಇವರ ಪೈಕಿ ಶ್ರೀ ಜಯಚಾಮರಾಜ ಒಡೆಯರ್ ರವರೇ ಕೊನೆಯವರು. ಒಂದು ರೀತಿಯಲ್ಲಿ ಸತ್ಯ, ಧರ್ಮಗಳ ಕಾಲವೂ ಇವರ ಜೊತೆಯಲ್ಲಿಯೇ ಕೊನೆಗೊಂಡಿತೆಂದು ಹೇಳಬಹುದು. ಮೊದಲ ದೊರೆ ಯದುರಾಯನಿಂದ ಹಿಡಿದು ಎಲ್ಲಾ ದೊರೆಗಳೂ ತಮ್ಮದೇ ಆದ ಒಂದೊಂದು ವಿಶಿಷ್ಟ ವ್ಯಕ್ತಿತ್ವಗಳನ್ನು ಹೊಂದಿದ್ದು ತಮ್ಮ ನಿಸ್ಪೃಹ ಸೇವೆಯಿಂದ ತಾವೂ ಬೆಳಗಿ ನಾಡನ್ನೂ ಬೆಳಗಿಸಿದ್ದರು. ಪ್ರಜೆಗಳ ಕಷ್ಟ–ನಷ್ಟಗಳನ್ನು ಅರಿತು, ಅವರ ಸುಖ–ದುಃಖಗಳಲ್ಲಿ ಬೆರೆತು ಅವರ ಕಂಬನಿ ಒರೆಸುವಲ್ಲಿ ಮೈಸೂರು ಅರಸೊತ್ತಿಗೆ ಇಡೀ ವಿಶ್ವಕ್ಕೆ ಮಾದರಿಯಾಗಿತ್ತು.

ಬ್ರಿಟಿಷರು ನಮ್ಮನ್ನು ಆಳುತ್ತಿದ್ದ ಕಾಲದಲ್ಲಿಯೇ ಪ್ರಜಾತಂತ್ರ ವ್ಯವಸ್ಥೆಯನ್ನು ಜಾರಿಗೆ ತಂದವರಿವರು. ಇವರು ಅಂದು ಸ್ಥಾಪಿಸಿದ ಪ್ರಜಾಪ್ರತಿನಿಧಿ ಸಭೆಯೇ ಮುಂದೆ ಸ್ವತಂತ್ರ ಭಾರತದ ರಾಜಕೀಯಕ್ಕೆ ನಾಂದಿಯಾಯಿತು. ಪ್ರಜೆಗಳ ಪಾಲಿಗೆ ಪ್ರತ್ಯಕ್ಷ ದೈವದಂತೆಯೇ ಇದ್ದ ಶ್ರೀ ಜಯಚಾಮರಾಜ ಒಡೆಯರ್‌ರವರ ಕಾಲವೂ ಸಮೃದ್ಧವಾಗಿತ್ತು. ಹಿಂದಿನವರು ಅದನ್ನು ನೆನೆಸುತ್ತಲೇ ಈಗಿನವರಿಗೆ ಮಹಾರಾಜರಾಳ್ವಿಕೆಯ ಸಿಹಿಬುತ್ತಿಯನ್ನು ಬಿಚ್ಚಿ ಹಂಚುವುದನ್ನು ಕಂಡಾಗ ಅಬ್ಬಾ! ಆ ಕಾಲ ಎಷ್ಟೊಂದು ಸುಭಿಕ್ಷವಾಗಿತ್ತೆಂದು ಆಶ್ಚರ್ಯವಾಗುತ್ತದೆ.

ಮಹಾರಾಜರಾಗಷ್ಟೇ ಇರದೆ ಸ್ವತಃ ಸಾಹಿತಿಯೂ, ಕೀರ್ತನಕಾರರೂ, ಸಂಗೀತಗಾರರೂ, ವಾಗ್ಗೇಯಕಾರರೂ, ಸಂಸ್ಕೃತ ಪಂಡಿತರೂ, ಜ್ಯೋತಿಷ್ಯ ಶಾಸ್ತ್ರಜ್ಞರೂ, ಉಪನ್ಯಾಸಕರೂ, ಶಿಕ್ಷಣ ತಜ್ಞರೂ, ಛಾಯಾಚಿತ್ರಕಾರರೂ, ಸಂಶೋಧಕರೂ, ವೇದಾಂತಿಗಳೂ, ತತ್ವಜ್ಞಾನಿಗಳೂ, ದಾರ್ಶನಿಕರೂ ಆಗಿ ಒಟ್ಟಾರೆ ಮಹಾನ್ ಮಾನವತಾವಾದಿಯಾಗಿದ್ದ ಶ್ರೀಜಯ ಚಾಮರಾಜ ಒಡೆಯರ್ ಅವರ ಹುಟ್ಟು ಈ ನಾಡಿನ ಭಾಗ್ಯವೆಂದೇ ಹೇಳಬಹುದು. ಮಹಾರಾಜ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರ ಸಹೋದರ ಯುವರಾಜ ಕಂಠೀರವ ನರಸಿಂಹರಾಜ ಒಡೆಯರ್ ಹಾಗೂ ಯುವರಾಣಿ ಕೆಂಪು ಚೆಲುವಾಜಮ್ಮಣ್ಣಿಯವರ ಸುಪುತ್ರರಾಗಿ 1919ರ ಜುಲೈ 18 ರಂದು ಶ್ರೀ ಜಯಚಾಮರಾಜ ಒಡೆಯರ್ ಜನಿಸಿದಾಗ ಬಂಡಿ ಬಂಡಿಗಳಲ್ಲಿ ಮೂಟೆಗಟ್ಟಲೆ ತುಂಬಿದ ಸಕ್ಕರೆ ನಾಡಿನ ತುಂಬಾ ಊರು ಊರಿಗೆ, ಕೇರಿ ಕೇರಿಗೆ ಹಂಚಲ್ಪಟ್ಟಿದ್ದನ್ನು ಈಗಲೂ ಕಣ್ಣಿಗೆ ಕಟ್ಟಿದಂತೆ ಹಿರಿಯರು ನೆನಪಿಸಿಕೊಳ್ಳುತ್ತಾರೆ. ಒಡೆಯರ ಜನನ ಆಗ ಅಂಥ ಸಿಹಿ ಸಂಭ್ರಮವಾಗಿತ್ತು. ವಿಜಯಲಕ್ಷ್ಮಮ್ಮಣ್ಣಿ ಸುಜಯಕಾಂತಮ್ಮಣ್ಣಿ ಹಾಗೂ ಜಯಚಾಮುಂಡಮ್ಮಣ್ಣಿ ಅವರುಗಳು ಇವರ ಒಡಹುಟ್ಟಿದ ಸಹೋದರಿಯರು. ಕಿರಿಯ ಸಹೋದರಿ ಜಯಚಾಮುಂಡಮ್ಮಣ್ಣಿ ಭರತಪುರದ ರಾಜರಿಗೆ ಮದುವೆಯಾಗಿದ್ದು 1954 ಜುಲೈ 26ರಂದು ನಿಧನಹೊಂದಿದರು.

'ಬೆಳೆವ ಸಿರಿ ಮೊಳಕೆಯಲ್ಲೇ ನೋಡಾ' ಎಂಬಂತೆ ಬಾಲಚಂದ್ರನಂತೆ ಮುದ್ದು ಮುದ್ದಾಗಿದ್ದ ಬಾಲಕ ಜಯಚಾಮರಾಜ ಒಡೆಯರ್ ತಮ್ಮ ಬಾಲಲೀಲೆಗಳಲ್ಲೇ ಮುಂದಿನ ತಮ್ಮ ಭವಿಷ್ಯದ ಚಿತ್ತಾರಗಳನ್ನು ಬಿಡಿಸುವಂತೆ ಬಹಳ ಚೂಟಿಯಾಗಿದ್ದರು. ಹಾಗಾಗಿ ಬಾಲ್ಯದಿಂದಲೇ ಓದಿನೊಡನೆ ಕಲೆ, ಸಾಹಿತ್ಯ, ಸಂಗೀತ, ಕ್ರೀಡೆ, ಯೋಗ.... ಹೀಗೆ ಎಲ್ಲವನ್ನೂ ಕಲಿಯತೊಡಗಿದರು. ಯೋಗದಲ್ಲಿ ವಿಶೇಷ ಆಸಕ್ತಿ ಹೊಂದಿದ್ದ ಅವರಿಗೆ ವಿದ್ವಾನ್ ಕೃಷ್ಣಮಾಚಾರ್ಯರು ಯೋಗಾಸನದ ಗುರುಗಳಾಗಿದ್ದರು. ಹಾಗೆಯೇ ಸಂಗೀತ ಮತ್ತು ಆಧ್ಯಾತ್ಮದಲ್ಲಿ ಆಸಕ್ತಿ ಬೆಳೆಯಲು ತಾಯಿ ಕೆಂಪು ಚೆಲುವಾಜಮ್ಮಣ್ಣಿ ಕಾರಣವಾದರೆ ಮಾನವೀಯ ಮೌಲ್ಯಗಳ ಮಾರ್ಗದರ್ಶನ ಅವರಿಗೆ ಅಜ್ಜಿ ವಾಣಿವಿಲಾಸ ಸನ್ನಿಧಾನದ ಕೆಂಪನಂಜಮ್ಮಣ್ಣಿಯವರಿಂದ ಬಂದ ಬಳುವಳಿ ಯಾಗಿತ್ತು.

ರಾಜ ಪರಂಪರೆಯ ಪದ್ಧತಿಯಂತೆ ಅರಮನೆಯ ರಾಯಲ್ ಶಾಲೆಯಲ್ಲೇ ಎಸ್ಸೆಸ್ಸೆಲ್ಸಿ ತನಕ ಕಲಿತ ಜಯಚಾಮರಾಜ ಒಡೆಯರ್ ಇಂಗ್ಲೀಷ್, ಸಂಸ್ಕೃತದೊಂದಿಗೆ ಪ್ರೌಢ ವೇದಾಂತ ಗ್ರಂಥಗಳ ಜೊತೆಗೆ ಜ್ಯೋತಿಷ್ಯ ಶಾಸ್ತ್ರದ ಅಭ್ಯಾಸವನ್ನೂ ನಡೆಸಿದ್ದರು. ಆ ನಂತರ ರಾಜಪುತ್ರರೆಂಬ ಗತ್ತು, ದವಲತ್ತು, ಗಾಂಭೀರ್ಯ, ದೊಡ್ಡಸ್ತಿಕೆ ಇದಾವುದೂ ಇಲ್ಲದೆ ಸಾಮಾನ್ಯ ವಿದ್ಯಾರ್ಥಿಗಳ ಜೊತೆ ಬೆರೆತು, ಕಲಿತು ದೊಡ್ಡಪ್ಪ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರು ಸ್ಥಾಪಿಸಿದ್ದ ಮೈಸೂರು ವಿಶ್ವವಿದ್ಯಾನಿಲಯದಿಂದಲೇ ಕನ್ನಡ, ಇಂಗ್ಲೀಷ್, ಇತಿಹಾಸ, ರಾಜ್ಯಶಾಸ್ತ್ರದೊಂದಿಗೆ 1938 ರಲ್ಲಿ ಐದು ಚಿನ್ನದ ಪದಕಗಳ ಜೊತೆ ಬಿ.ಎ. ಪದವಿಗಳಿಸಿದರು. ಇದಕ್ಕೆ ಪೂರಕವಾಗಿ ಅವರಿಗೆ ಗುರುಗಳಾದ ರಾಲೋ, ವಾಡಿಂಯಾ, ಸತ್ಯಗಿರಿನಾಥನ್ ಅವರುಗಳಿಂದ ಉತ್ತಮ ಶಿಕ್ಷಣ ದೊರಕಿತ್ತು.

ದೊಡ್ಡಪ್ಪ ನಾಲ್ವಡಿಯವರ ಗರಡಿಯಲ್ಲೇ ರಾಜ್ಯಾಡಳಿತದ ಸಕಲ ಪಟ್ಟುಗಳನ್ನೂ ಕಲಿತ ಜಯಚಾಮರಾಜ ಒಡೆಯರ್ ರವರು ರಾಜಮನೆತನಕ್ಕೆ ಬೇಕಾದ ಎಲ್ಲಾ ಧೀರೋದಾತ್ತ ಗುಣಗಳನ್ನು ಅವರಿಂದಲೇ ಮೈಗೂಢಿಸಿಕೊಂಡಿದ್ದರು. ಅವರು ಅಪ್ಪಟ ಕನ್ನಡ ಪ್ರೇಮಿಯಾದರೂ ಜ್ಞಾನದ ಹಸಿವಿನಿಂದ ಇಂಗ್ಲೀಷ್, ಹಿಂದಿ, ತಮಿಳು, ತೆಲುಗು, ಮಲೆಯಾಳಿ ಹೀಗೆ ಭಾರತದ ಭಾಷೆಗಳಲ್ಲದೆ ದೇಶ ವಿದೇಶಗಳ ಬಹಳಷ್ಟು ಭಾಷೆಗಳನ್ನು ಕಲಿತು ಬಹುಭಾಷಾ ಪಂಡಿತದರು.

ಜಯಚಾಮರಾಜ ಒಡೆಯರ್ ಸಾಂಸಾರಿಕ ಜೀವನದಲ್ಲಿ ಐವರು ಪುತ್ರಿಯರು ಹಾಗೂ ಓರ್ವ ಪುತ್ರ ಸೇರಿದಂತೆ ಒಟ್ಟು ಆರು ಮಕ್ಕಳನ್ನು ಪಡೆದಿದ್ದರು. ಅವರುಗಳೆಂದರೆ ಗಾಯಿತ್ರಿದೇವಿ, ಮೀನಾಕ್ಷಿದೇವಿ, ಕಾಮಾಕ್ಷಿದೇವಿ, ವಿಶಾಲಾಕ್ಷಿದೇವಿ, ಇಂದ್ರಾಕ್ಷಿದೇವಿ ಮತ್ತು ಶ್ರೀಕಂಠದತ್ತ ನರಸಿಂಹರಾಜ ಒಡೆಯರು. ಹಿರಿಯ ರಾಜಕುಮಾರಿ ಗಾಯಿತ್ರಿದೇವಿ 1974 ಜೂನ್ 30ರಂದು ನಿಧನರಾದರು.

1940 ಮಾರ್ಚ್ 24ರಂದು ಭಾನುವಾರ ರಾತ್ರಿ ಇವರ ತಂದೆ ಕಂಠೀರವ ನರಸಿಂಹರಾಜ ಒಡೆಯರ್ ಮತ್ತು 1940 ಆಗಸ್ಟ್ 3ರ ಶನಿವಾರ ರಾತ್ರಿ ದೊಡ್ಡಪ್ಪ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ನಿಧನಾನಂತರ 1940ರ ಸೆಪ್ಟೆಂಬರ್ 8ರಂದು ವಿಕ್ರಮ ಸಂವತ್ಸರದ ಭಾದ್ರಪದ ಶುಕ್ಲ ಸಪ್ತಮಿಯಂದು 21 ವರ್ಷದ ಜಯಚಾಮರಾಜ ಒಡೆಯರ್ ಕರ್ನಾಟಕ ರತ್ನ ಸಿಂಹಾಸನಾಧೀಶರಾಗಿ ಪಟ್ಟಾಭಿಷಿಕ್ತರಾದರು. ಆ ಕಾಲಕ್ಕೆ 80 ಲಕ್ಷ ಮಹಾ ಪ್ರಜೆಗಳ ಕ್ಷೇಮಪಾಲನೆಯ ಜವಾಬ್ದಾರಿಯನ್ನು ಮಹಾಪ್ರಭುಗಳಾಗಿ ಅವರು ಹೊತ್ತಿದ್ದರು. ದೊಡ್ಡಪ್ಪ ನಾಲ್ವಡಿಯವರನ್ನು ಮಾದರಿಯನ್ನಾಗಿ ಮಾಡಿಕೊಂಡಿದ್ದ ಅವರು ತಮ್ಮ ದೊಡ್ಡಪ್ಪನಂತೆಯೇ ಪ್ರಜೆಗಳು ಮೆಚ್ಚಿದ ಪ್ರಭುವಾಗಿ ಎಲ್ಲದರಲ್ಲೂ ಸೈ ಎನಿಸಿಕೊಂಡರು.

ಜಯಚಾಮರಾಜ ಒಡೆಯರ್‌ರವರು ಸ್ವತಃ ಸಾಹಿತಿಯೂ ಆಗಿದ್ದು ಇವರು ಇಂಗ್ಲೀಷ್‌ನಲ್ಲಿ ರಚಿಸಿ ವಿಶ್ವಮಾನ್ಯತೆ ಗಳಿಸಿದ 'ದತ್ತಾತ್ರೇಯ ದ ವೇ ಅಂಡ್ ದ ಗೋಲ್' ಗೀತೆ ಮತ್ತು ಭಾರತ ಸಂಸ್ಕೃತಿ, ಮತ ಮತ್ತು ಮಾನವ, ಭಾರತೀಯ ಸೌಂದರ್ಯದ ಹಲವು ಮುಖಗಳು, ಆತ್ಮ ಮತ್ತು ಬ್ರಹ್ಮ, ಮತ ಮತ್ತು ಧ್ಯೇಯ ಮುಂತಾದ ಮೌಲಿಕ ಕೃತಿಗಳು ಇವರ ಪಾಂಡಿತ್ಯವನ್ನು ತೆರೆದಿಡುತ್ತವೆ. ಇವು ಆಗಿನ ಕಾಲದಲ್ಲೇ ದೇಶ–ವಿದೇಶಿಯರ ವಿದ್ವಜ್ಜನರ ಗಮನ ಸೆಳೆದು ಜಯಚಾಮರಾಜ ಒಡೆಯರ್ ಸಾಹಿತ್ಯ ಕೀರ್ತಿಯನ್ನು ಜಾಗತಿಕವಾಗಿಯೂ ಬೆಳಗಿದ್ದವು.

ಕವಿ, ಸಾಹಿತಿಗಳನ್ನು ಪ್ರೋತ್ಸಾಹಿಸಲೆಂದೇ ಜಯಚಾಮರಾಜ ಒಡೆಯರ್‌ರವರು 'ಜಯಚಾಮರಾಜ ಗ್ರಂಥ ಮಾಲ' ಎಂಬ ಪ್ರಕಾಶನ ಸಂಸ್ಥೆಯನ್ನು ಸ್ಥಾಪಿಸಿ, ಸಂಸ್ಕೃತ ರತ್ನ ಹೆಚ್.ಗಂಗಾಧರಶಾಸ್ತ್ರಿಗಳಂತಹ ಅನೇಕ ಪಂಡಿತರಿಂದ ಋಗ್ವೇದದ ವೇದಭಾಗದ ಮೂವತ್ತೈದು ವಿಭಾಗವನ್ನು ಕನ್ನಡಕ್ಕೆ ಅನುವಾದಿಸಿ ಪ್ರಕಟಿಸಿದ್ದಾರೆ. ಇಷ್ಟೇ ಅಲ್ಲದೆ ಸಂಸ್ಕೃತದ ಅನೇಕ ಉತ್ಕೃಷ್ಟ ಗ್ರಂಥಗಳನ್ನು ಮತ್ತು ಶ್ರೀ ಶಂಕರಾಚಾರ್ಯರ ಅನೇಕ ಸ್ತೋತ್ರಗಳನು ಅವರು ಕನ್ನಡಕ್ಕೆ ಅನುವಾದ ಮಾಡಿಸಿದ್ದಾರೆ. ಕಾಮಕಲ್ಪ ಕರುಸ್ತವ, ಮೂಕಪಂಚಶತೀ, ತ್ರಿಪುರ ಸುಂದರಿ ಮಾನಸಿಕ ಪೂಜಾ, ಶ್ರೀ ಗುರು ಗೀತಾ, ಶ್ರೀ ಶಿವಗೀತಾ ಮಹಾಮಸ್ತ ಪುರಶ್ಚರಣ ವಿಧಿ, ಶ್ರೀ ಭುವನೇಶ್ವರಿ ಪೂಜಾಕಲ್ಪ, ರುದ್ರಮಹಾ ವ್ಯಾಸ ಪ್ರಯೋಗ ಮತ್ತು ಅನೇಕ ಸೂಕ್ತಗಳನ್ನು ಹಾಗೂ ವಿಷ್ಣುಧರ್ಮೋತ್ತರ ಪುರಾಣ, ಅಷ್ಟಾದಶ ಪುರಾಣಗಳು ಸೇರಿದಂತೆ 200ಕ್ಕೂ ಹೆಚ್ಚು ವಿವಿಧ ಕೃತಿಗಳನ್ನು ಅವರು ತಮ್ಮ ಗ್ರಂಥಮಾಲೆಯಿಂದ ಪ್ರಕಟಿಸಿ ಕನ್ನಡ ಸಾಹಿತ್ಯ ಲೋಕಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್‌ನ ಅಭಿವೃದ್ಧಿಯಲ್ಲೂ ಇವರ ಕಾಣಿಕೆ ಗಣನೀಯವಾಗಿದೆ. ಇವರ ಆಸ್ಥಾನದಲ್ಲಿ ಒಡನಾಡಿಗಳಾಗಿದ್ದ ಪ್ರೊ. ಯಮುನಾಚಾರ್ಯ, ಪ್ರೊ.ಚಂದ್ರಶೇಖರ ಪಾಟಂಕರ್, ಪ್ರೊ.ಎನ್. ರಾಮಚಂದ್ರರಾಯರು, ವೇದಾಂತಿ ಕೆ.ಗುರುದತ್, ಡಾ. ಕೆ.ಕೃಷ್ಣಮೂರ್ತಿ ಮುಂತಾದವರ ಕೈಂಕರ್ಯ ಸಹ ಸ್ಮರಣೀಯವಾದುದು.

ಇಂದು (ಶನಿವಾರ) ಮೈಸೂರು ಸಂಸ್ಥಾನವನ್ನು ಆಳಿದ ಕೊನೆಯ ದೊರೆ ಶ್ರೀ ಜಯಚಾಮರಾಜ ಒಡೆಯರ್ ಅವರ ಪುಣ್ಯಸ್ಮರಣೆ ತನ್ನಿಮಿತ್ತ ಈ ಲೇಖನ.



ಇನ್ನು ಸಂಗೀತದ ವಿಷಯದಲ್ಲಂತೂ ಜಯಚಾಮರಾಜ ಒಡೆಯರ್ ಹೆಸರು ವಿಶ್ವಪ್ರಸಿದ್ಧಿಯೇ ಸರಿ. ಜಗತ್ಪ್ರಸಿದ್ಧ ಸಂಗೀತರತ್ನ ಪಿಟೀಲು ಟಿ. ಚೌಡಯ್ಯ ಸೇರಿದಂತೆ ಸಂಗೀತ ದಿಗ್ಗಜಗಳಾದ ಚೆನ್ನಕೇಶವಯ್ಯ, ತಿಟ್ಟೆ ಕೃಷ್ಣ ಅಯ್ಯಂಗಾರ್, ಡಾ. ದೇವೇಂದ್ರಪ್ಪ, ಎಸ್.ಎನ್.ಮರಿಯಪ್ಪ ಪಿಟೀಲು ಶಿವರುದ್ರಪ್ಪ ಎಂ.ಎಸ್. ಚಂದ್ರಶೇಖರಯ್ಯ, ಸ್ವರಮೂರ್ತಿ, ಮೃದಂಗ ವೆಂಕಟೇಶ ದೇವರು, ವೀಣೆ ದೊರೆಸ್ವಾಮಿ ಅಯ್ಯಂಗಾರ್, ಕೊಳಲು ದೇಶಿಕಾಚಾರ್ ಮುಂತಾದವರು ಇವರ ಆಸ್ಥಾನದಲ್ಲಿ ಬೆಳೆದು ಅರಳಿದ ಸಂಗೀತ ಪುಷ್ಪಗಳು. ಸ್ವತಃ ಸಂಗೀತಗಾರರೂ ಆಗಿದ್ದ ಒಡೆಯರ್‌ರವರಿಗೆ ಸಂಗೀತ ಲೋಕದ ರಸಋಷಿ ಎನಿಸಿದ್ದ ಮೈಸೂರು ವಾಸುದೇವಾಚಾರ್ಯರು ಗುರುಗಳು. ವಾಗ್ಗೇಯಕಾರರಾಗಿ ಒಡೆಯರ್ ಸಾಧನೆ ಅದ್ಭುತ. ಕರ್ನಾಟಕ ಸಂಗೀತದ 97 ಕೀರ್ತನೆಗಳ ಕರ್ತೃ ಇವರೆಂದರೆ ಇದು ಸಾಮಾನ್ಯ ವಿಷಯವಲ್ಲ. ಸಂಗೀತಗಾರರಲ್ಲಿ ಈಗಲೂ ಅವು ಮಧುರವಾಗಿ ಮಾರ್ದನಿಸುತ್ತಲೇ ಇವೆ.

ಕರ್ನಾಟಕ ಸಂಗೀತ ಮತ್ತು ಪಾಶ್ಚಾತ್ಯಸಂಗೀತಗಳೆರಡರಲ್ಲೂ ಪ್ರಭುತ್ವ ಸಾಧಿಸಿದ್ದ ಜಯಚಾಮರಾಜ ಒಡೆಯರ್ ಶ್ರೇಷ್ಠ ಪಿಯಾನೋ ವಾದಕರಾಗಿದ್ದರಷ್ಟೇ ಅಲ್ಲದೆ, ಪೈಪ್ ಆರ್ಗನ್ ನುಡಿಸುವುದರಲ್ಲಿ ನಿಸ್ಸೀಮರಾಗಿದ್ದರು. ಪಾಶ್ಚಾತ್ಯ ಸಂಗೀತದ ಘಟಾನುಘಟಿಗಳಾದ ವ್ಯಾಗ್ನರ್, ಮೆಹ್ಲರ್, ಬಾಚ್, ಬಿಥೋಮವನ್ ಮುಂತಾದವರ ಬಗ್ಗೆ ಒಲವು ಹೊಂದಿದ್ದ ಒಡೆಯರ್‌ರವರು 1937 ರಲ್ಲಿ ಲಂಡನ್‌ನ ಗಿಲ್‌ಹಾಲ್ ಸ್ಕೂಲ್ ಆಫ್ ಮ್ಯೂಸಿಕ್‌ನ ಲೈಸೆನ್ಸಿಯೇಟ್ ಪದವೀಧರರಾಗಿದ್ದು, 1945 ರಲ್ಲಿ ಕಾಲೇಜ್ ಆಫ್ ಮ್ಯೂಸಿಕ್‌ನಲ್ಲಿ ಲಂಡನ್‌ನ ಆನರರಿ ಫೆಲೋ ಪದವಿಗೆ ಪಾತ್ರರಾಗಿದ್ದರಲ್ಲದೆ, ಭಾರತದ ಕೇಂದ್ರ ಸಂಗೀತ ಮತ್ತು ನಾಟಕ ಅಕಾಡೆಮಿಯ ಮೊದಲ ಅಧ್ಯಕ್ಷರಾಗಿದ್ದ ಹೆಗ್ಗಳಿಕೆ ಇವರ ಹೆಸರಿನಲ್ಲಿದೆ. ಇವರ ಅಗಾಧವಾದ ಸಂಗೀತ ಪ್ರತಿಭೆಗೆ 1965 ರಲ್ಲಿ ಹಂಪೆಯಲ್ಲಿ ನಡೆದ ಪ್ರತಿಷ್ಠಿತ ಪುರಂದರದಾಸರ ಚತುರ್ಥ ಶತಮಾನೋತ್ಸವದ ಅಧ್ಯಕ್ಷತೆಯ ಗೌರವ ಕಿರೀಟ ಇವರ ಸಿರಿಮುಡಿಗೇರಿತ್ತು.

ಇಂದಿಗೂ ಪೊಲೀಸ್ ಬ್ಯಾಂಡ್, ಪ್ಯಾಲೇಸ್ ಬ್ಯಾಂಡ್ ಎಂದು ಬಹು ಪ್ರಸಿದ್ಧಿಯಾಗಿರುವ ಮೈಸೂರಿನಲ್ಲಿರುವ ಕರ್ನಾಟಕ ಸರ್ಕಾರದ 'ಪೊಲೀಸ್ ವಾದ್ಯವೃಂದ'ವು ಜಯ ಚಾಮರಾಜ ಒಡೆಯರ್ ಅವರ ಪ್ರೋತ್ಸಾಹದ ಫಲವಾಗಿದ್ದು ದಕ್ಷಿಣ ಭಾರತದಲ್ಲೇ ಇದು ಏಕೈಕವೆನಿಸಿದೆ. ನಾಡಿನ ವಿವಿಧ ಕಡೆಗಳಿಂದ ಆಯ್ಕೆಯಾದ 350 ಮಂದಿ ಸಂಗೀತಗಾರರ ಪೊಲೀಸ್ ವಾದ್ಯವೃಂದಕ್ಕೆ ಜಯಚಾಮರಾಜ ಒಡೆಯರೇ ಸ್ಫೂರ್ತಿ. ಇವರ ಒತ್ತಾಸೆಯಿಂದ ಪ್ರಾರಂಭವಾದ ಈ ವಿಶೇಷ ವಾದ್ಯವೃಂದಕ್ಕೆ ಫ್ರಾನ್ಸಿನ ಖ್ಯಾತ ಸಂಗೀತಗಾರ ಡಿಫ್ರಿಜ್ ಮೊದಲ ಬ್ಯಾಂಡ್ ಮಾಸ್ಟರ್ ಆಗಿದ್ದರು. ಪ್ರಾರಂಭದಲ್ಲಿ ಪಾಶ್ಚಾತ್ಯ ಸಂಗೀತವನ್ನಷ್ಟೇ ನುಡಿಸುತ್ತಿದ್ದ ಈ ವಾದ್ಯವೃಂದಕ್ಕೆ ಒಡೆಯರು ಕರ್ನಾಟಕ ಸಂಗೀತವನ್ನೂ ಸೇರಿಸಿ ಪೂರ್ವ–ಪಶ್ಚಿಮದ ರಾಗ ಸಂಗಮ ಮಾಡಿದ್ದು, ಇದರಿಂದ ಇದರ ಇಂಪು ಇನ್ನಷ್ಟು ಹೆಚ್ಚಾಗಿ ಕೇಳುಗರು ರೋಮಾಂಚನಗೊಳ್ಳುವಂತಾಯಿತು. ಹಾಗಾಗಿ ಇಂದಿಗೂ ಸಹ ಪ್ಯಾಲೇಸ್ ಬ್ಯಾಂಡ್ ಅರ್ಥಾತ್ ಪೊಲೀಸ್ ಬ್ಯಾಂಡ್ ತನ್ನ ಆಕರ್ಷಣೆಯನ್ನು ಉಳಿಸಿಕೊಂಡಿದೆ. ಇದರ ಸಂಗೀತದ ಖದರ್ರೇ ಖದರ್ರ್, ಅದು ಬೇರೆ ಯಾವ ವಾದ್ಯವೃಂದಕ್ಕೂ ಬರಲಾರದು!

ನಾಟಕ ಕಲೆಗೆ ಉತ್ತೇಜನ ನೀಡಲೆಂದೇ 'ಶ್ರೀ ಜಯಚಾಮರಾಜೇಂದ್ರ ಕರ್ನಾಟಕ ನಾಟಕ ಸಭಾ'ವನ್ನು ಸ್ಥಾಪಿಸಿದ್ದ ಒಡೆಯರು ತನ್ಮೂಲಕ ಕಲಾ ಸೇವೆಗೂ ಹೆಚ್ಚಿನ ಮನ್ನಣೆ ನೀಡಿದ್ದರು. ಗುಬ್ಬಿ ಕಂಪನಿ, ಕೊಟ್ಟೂರು ಬಸಪ್ಪನವರ ಕಂಪನಿ, ಎಂ.ಸಿ. ಮಹದೇವಸ್ವಾಮಿಯವರ ಕನ್ನಡ ಥಿಯೇಟರ್, ಶ್ರೀ ಚಾಮುಂಡೇಶ್ವರಿ ಕಂಪನಿಗಳು ಸೇರಿದಂತೆ ನಾಡಿನ ಉತ್ತರ ಕರ್ನಾಟಕದ ಅನೇಕ ನಾಟಕ ಕಂಪನಿಗಳು ಇವರ ಕಾಲದಲ್ಲಿ ಉನ್ನತ ಸ್ಥಿತಿಯಲ್ಲಿದ್ದವು. ಇದಕ್ಕೆ ಒಡೆಯರ್‌ರವರ ಪ್ರೋತ್ಸಾಹ ಮುಖ್ಯವಾಗಿತ್ತು. ಹಾಗೆಯೇ ನಟನೆಯಷ್ಟೇ ನೃತ್ಯಕ್ಕೂ ಪ್ರಾಧಾನ್ಯತೆ ನೀಡಿದ್ದ ಇವರ ಪ್ರೋತ್ಸಾಹದಿಂದಾಗಿ ಅನೇಕ ಮಂದಿ ನೃತ್ಯ ಕಲಾವಿದರು ಬೆಳೆದು ಬೆಳಕು ಕಂಡಿದ್ದರು. ರಾಜನರ್ತಕಿ ನಾಟ್ಯಮಯೂರಿ ಜಟ್ಟಿ ತಾಯಮ್ಮನವರಂತಹ ಸುಪ್ರಸಿದ್ಧ ನೃತ್ಯಗಾರ್ತಿಯರು ಇವರ ಆಸ್ಥಾನದಲ್ಲಿದ್ದರು.

ಶಿಲ್ಪ ಮತ್ತು ಚಿತ್ರಕಲೆಗೂ ಮಹತ್ತರ ಕಾಣಿಕೆಯನ್ನು ನೀಡಿರುವ ಜಯಚಾಮರಾಜ ಒಡೆಯರ್ ಅರಮನೆಯ ಕೋಟೆಯೊಳಗೆ ಮತ್ತು ಮೈಸೂರಿನ ರಾಮಾನುಜಾ ರಸ್ತೆಯಲ್ಲಿ ಹೊಯ್ಸಳ ಶೈಲಿಯಲ್ಲಿ ಅನೇಕ ಚೆಂದದ ದೇವಾಲಯಗಳನ್ನು ನಿರ್ಮಿಸಿದ್ದು ಇವುಗಳಲ್ಲಿ ಶ್ರೀ ಭುವನೇಶ್ವರಿ ದೇವಸ್ಥಾನ, ಶ್ರೀ ಕಾಮ ಕಾಮೇಶ್ವರಿ ದೇವಸ್ಥಾನ, ಶ್ರೀ ಗಾಯಿತ್ರಿ ದೇವಸ್ಥಾನಗಳು ಪ್ರಮುಖವಾಗಿವೆ. ಖ್ಯಾತ ಶಿಲ್ಪಿಗಳಾದ ಶಿಲ್ಪ ಸಿದ್ಧಾಂತಿ ಸಿದ್ದಲಿಂಗಸ್ವಾಮಿ, ಶಿಲ್ಪಕಲಾ ರತ್ನ ಅಪ್ಪಾಜಿಸ್ವಾಮಿ, ಶಿಲ್ಪಕಲಾ ನಿಪುಣ ನಾಗೇಂದ್ರ ಸ್ಥಪತಿ, ಕಶ್ಯಪ ಶಿಲ್ಪಿ ಬಸವಣ್ಣ ಮತ್ತು ಹೆಸರಾಂತ ಚಿತ್ರಕಲಾವಿದರಾದ ಸ್ಥಪತಿ ನಂಜುಂಡಸ್ವಾಮಿ, ವೈ.ನಾಗರಾಜು, ರಾಮನರಸಯ್ಯ, ಶಂಕರರಾಜು, ಎಸ್.ಎನ್.ಸ್ವಾಮಿ ಮುಂತಾದವರು ಒಡೆಯರ್‌ರವರ ಪ್ರೀತಿ ಪಾತ್ರ ಪ್ರತಿಭೆಗಳಾಗಿದ್ದರು.

ಭಾರತೀಯ ಸಂಸ್ಕೃತಿಯ ರಾಯಭಾರಿಯಾಗಿ, ಸೌಟ್ ಮಹಾರಾಜರೆನಿಸಿ 1942 ರಲ್ಲಿ ಕಾಶಿ ವಿಶ್ವವಿದ್ಯಾನಿಲಯದಿಂದ ಎಲ್.ಎಲ್.ಬಿ. ಪದವಿ, 1945 ರಲ್ಲಿ ಬ್ರಿಟಿಷ್ ಚಕ್ರಾಧಿಪತ್ಯದ ಜೆಸಿಎಸ್‌ಐ, 1958 ರಲ್ಲಿ ಜಿಸಿಬಿ ಗೌರವಗಳನ್ನು ಹಾಗೂ 1945 ರಲ್ಲಿ ಅಣ್ಣಾಮಲೈ ವಿಶ್ವವಿದ್ಯಾನಿಲಯದಿಂದ ಡಿ.ಲಿಟ್ ಪದವಿಗೆ ಪಾತ್ರರಾಗಿ ವಿದ್ವತ್ತಿನ ಮೇರುಪರ್ವತವಾದ ಶ್ರೀ ಜಯಚಾಮರಾಜ ಒಡೆಯರ್‌ರವರು ಉತ್ತಮ ವಾಗ್ಮಿಗಳೂ ಆಗಿದ್ದರು. ದೇಶದಲ್ಲಷ್ಟೇ ಅಲ್ಲದೆ ವಿದೇಶಗಳಲ್ಲೂ ತಮ್ಮ ವಿದ್ವತ್‌ಪೂರ್ಣ ಭಾಷಣಗಳಿಂದ ಎಲ್ಲರ ಮೆಚ್ಚಿನ ಮಹಾರಾಜರಾಗಿದ್ದರು. ಸ್ವಾತಂತ್ರ್ಯ ಹೋರಾಟ ದೇಶದಲ್ಲಿ ತೀವ್ರವಾಗಿ ನಡೆಯುತ್ತಿದ್ದಾಗಲೇ ಮೈಸೂರಿನಲ್ಲಿ ಜವಾಬ್ದಾರಿ ಸರ್ಕಾರದ ಸ್ಥಾಪನೆಗೆ ಕಾರಣರಾಗಿ ಒಡೆಯರ್‌ರವರು ತಮ್ಮ ಆಶ್ರಯದಲ್ಲೇ ಕೆ.ಸಿ. ರೆಡ್ಡಿಯವರ ನೇತೃತ್ವದ ಸಚಿವ ಸಂಪುಟದ ರಚನೆಗೂ ಕಾರಣಕರ್ತರಾಗಿ ಇತಿಹಾಸ ನಿರ್ಮಿಸಿದ್ದರು.

1947 ಆಗಸ್ಟ್ 15 ರಂದು ದೇಶ ದಾಸ್ಯದಿಂದ ಮುಕ್ತವಾಗಿ ಸ್ವಾತಂತ್ರ್ಯದ ಗಾಳಿ ಕುಡಿದಾಗ ಸಿಂಹಾಸನದಿಂದ ಕೆಳಗಿಳಿದ ಜಯಚಾಮರಾಜ ಒಡೆಯರ್, ಬದಲಾದ ವ್ಯವಸ್ಥೆಗೆ ಬಹುಬೇಗ ಹೊಂದಿಕೊಂಡರು. ಸ್ವಾತಂತ್ರ್ಯ ನಂತರ ಭಾರತದ ಅದೆಷ್ಟೋ ಸಂಸ್ಥಾನಗಳ ಮಹಾರಾಜರು ಪ್ರಭುತ್ವವನ್ನು ತ್ಯಜಿಸಿದ್ದರು. ಆಗ ಮಹಾರಾಜರ ಜಂಬೂ ಸವಾರಿಯ ವಿಶ್ವವಿಖ್ಯಾತ ಮೈಸೂರು ದಸರಾ ಕೂಡ ಜನತಾ ದಸರೆಯಾಗಿ ಮಾರ್ಪಾಡು ಹೊಂದಿತು. 1948 ರಿಂದ 1956 ರವರೆಗೆ ರಾಜ ಪ್ರಮುಖರಾಗಿದ್ದ ಒಡೆಯರು ನಂತರ ಏಕೀಕೃತ ಕರ್ನಾಟಕದ ಮೊದಲ ರಾಜ್ಯಪಾಲರಾಗಿ, ಭಾರತದ ಮೊದಲ ರಾಷ್ಟ್ರಪತಿಗಳಾದ ಡಾ. ರಾಜೇಂದ್ರ ಪ್ರಸಾದ್‌ರ ಸಮ್ಮುಖದಲ್ಲಿ 1956ರ ನವೆಂಬರ್ 1 ರಂದು ಪ್ರಮಾಣವಚನ ಸ್ವೀಕರಿಸಿ ದರು. ಒಂದು ರೀತಿಯಲ್ಲಿ ಅವರ ಪ್ರಭುತ್ವ ಹೋದರೂ ಮತ್ತೊಂದು ರೀತಿಯಲ್ಲಿ ಅವರು ತಾವು ಬದುಕಿರುವ ತನಕವೂ ಪ್ರಭುಗಳಾಗಿಯೇ ಬದುಕಿದ್ದರು. ಏಕೆಂದರೆ ಅವರು ಕೇವಲ ಮಹಾರಾಜರಾಗಿರಲಿಲ್ಲ. ಅದಕ್ಕೂ ಮೀರಿದ ಪ್ರಭುತ್ವವನ್ನು ಅವರು ಸಂಪಾದಿಸಿಕೊಂಡಿದ್ದರು. ರಾಷ್ಟ್ರಕವಿ ಕುವೆಂಪುರವರು ಜಯಚಾಮರಾಜ ಒಡೆಯರ್‌ರವರ ಕುರಿತು ಒಂದು ಕಡೆ ಹೇಳಿರುವ ಮಾತುಗಳಿವು– "ಎಲ್ಲರೂ ಸಿಂಹಾಸನವನ್ನೇರಿ ಮಹಾರಾಜರಾದರೆ ಇವರು ಸಿಂಹಾಸನದಿಂದ ಇಳಿದು ಮಹಾರಾಜರಾಗಿದ್ದಾರೆ". ಜಯಚಾಮರಾಜ ಒಡೆಯರ್‌ರವರು 1974ರ ಸೆಪ್ಟೆಂಬರ್ 23 ರಂದು ಬೆಂಗಳೂರು ಅರಮನೆಯಲ್ಲಿ ಕೊನೆಯುಸಿರೆಳೆದರು.

ಆಸ್ಟ್ರೇಲಿಯಾ ವಿರುದ್ಧ ಭಾರತಕ್ಕೆ ಭರ್ಜರಿ ಜಯ

● ಸರಣಿಯಲ್ಲಿ 1-0 ಅಂತರದ ಮುನ್ನಡೆ ● ಏಕದಿನ, ಟೆಸ್ಟ್, ಟಿ20 ರ್‍ಯಾಂಕಿಂಗ್‌ನಲ್ಲಿ ಅಗ್ರಸ್ಥಾನಕ್ಕೇರಿದ ಭಾರತ



ಮೊಹಾಲಿ, ಸೆ.22– ಬ್ಯಾಟಿಂಗ್ ಹಾಗೂ ಬೌಲಿಂಗ್‌ನಲ್ಲಿ ಭರ್ಜರಿ ಪ್ರದರ್ಶನ ನೀಡಿದ ಭಾರತ, ಆಸ್ಟ್ರೇಲಿಯಾ ವಿರುದ್ಧ 5 ವಿಕೆಟ್‌ಗಳ ಜಯ ಸಾಧಿಸಿದೆ.

ಇದರೊಂದಿಗೆ 3 ಪಂದ್ಯಗಳ ಏಕದಿನ ಸರಣಿಯಲ್ಲಿ ಭಾರತ 1–0 ಮುನ್ನಡೆ ಪಡೆದಿದ್ದು, ವಿಶ್ವಕಪ್‌ಗೂ ಮುನ್ನ ಐಸಿಸಿ ಏಕದಿನ ರ್‍ಯಾಂಕಿಂಗ್‌ನಲ್ಲಿ ನಂ.1 ಪಟ್ಟ ಅಲಂಕರಿಸಿದೆ. ಅಲ್ಲದೇ ಟಿ20 ಹಾಗೂ ಟೆಸ್ಟ್‌ನಲ್ಲೂ ನಂ.1 ಟೀಮ್ ಎನಿಸಿಕೊಂಡಿದೆ.

ಇಲ್ಲಿನ ಐಎಸ್ ಬಿಂದ್ರಾ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ, 50 ಓವರ್‌ಗಳಲ್ಲಿ 276ರನ್‌ಗಳಿಗೆ ಆಲೌಟಾಯಿತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಮಿಚೆಲ್ ಮಾರ್ಷ್ 4ರನ್ ಗಳಿಸಿ ಔಟಾದರು. ಬಳಿಕ ಜೊತೆಯಾದ ಡೇವಿಡ್ ವಾರ್ನರ್ ಹಾಗೂ ಸ್ಟೀವ್ ಸ್ಮಿತ್ 94ರನ್ ಜೊತೆಯಾಟವಾಡಿದರು. ಈ ವೇಳೆ 52 ರನ್ ಗಳಿಸಿದ್ದ ವಾರ್ನರ್ ಜಡೇಜಾಗೆ ವಿಕೆಟ್ ಒಪ್ಪಿಸಿದರು. ಇದರ ಬೆನ್ನಲ್ಲೇ 41 ರನ್ ಗಳಿಸಿದ್ದ ಸ್ಮಿತ್ ಕೂಡ ಔಟಾದರು. ನಂತರ ಬಂದ ಮಾರ್ನಸ್ ಲಾಬುಶೇನ್ 39, ಕ್ಯಾಮರೂನ್ ಗ್ರೀನ್ 31, ಜಾಶ್ ಇಂಗ್ಲಿಸ್ 45, ಮಾರ್ಕಸ್ ಸ್ಟೋಯಿನಿಸ್ 29, ಪ್ಯಾಟ್ ಕಮಿನ್ಸ್ 21 ರನ್ ಗಳಿಸಿದರು. ಭಾರತದ ಪರ ಮೊಹಮ್ಮದ್ ಶಮಿ 5, ಅಶ್ವಿನ್, ಜಡೇಜಾ ಹಾಗೂ ಬುಮ್ರಾ ತಲಾ ಒಂದೊಂದು ವಿಕೆಟ್ ಕಬಳಿಸಿದರು.

ಆಸ್ಟ್ರೇಲಿಯಾ ನೀಡಿದ್ದ 277 ರನ್ ಗುರಿ ಬೆನ್ನತ್ತಿದ ಭಾರತದ ಪರ ಇನ್ನಿಂಗ್ಸ್ ಆರಂಭಿಸಿದ ಋತುರಾಜ್ ಗಾಯಕ್ವಾಡ್ ಹಾಗೂ ಶುಭ್‌ಮನ್ ಗಿಲ್ ಮೊದಲ ವಿಕೆಟ್‌ಗೆ 142 ರನ್ ಜೊತೆಯಾಟವಾಡಿದರು. ಈ ವೇಳೆ 71 ರನ್ ಗಳಿಸಿದ್ದ ಗಾಯಕ್ವಾಡ್ ವಿಕೆಟ್ ಒಪ್ಪಿಸಿದರು. ಇದರ ಬೆನ್ನಲ್ಲಿಯೇ ಶ್ರೇಯಸ್ ಅಯ್ಯರ್ 3 ರನ್ ಗಳಿಸಿದ್ದ ವೇಳೆ ರನೌಟಾದರು. ಬಳಿಕ ಶುಭ್‌ಮನ್ ಗಿಲ್ 63 ಎಸೆತಗಳಲ್ಲಿ 2 ಸಿಕ್ಸರ್, 6 ಬೌಂಡರಿ ಒಳಗೊಂಡ 74 ರನ್ ಗಳಿಸಿದ್ದ ವೇಳೆ ಜಂಪಾಗೆ ವಿಕೆಟ್ ನೀಡಿದರು. ನಂತರ ಬಂದ ಇಶಾನ್ ಕಿಶನ್ 18ರನ್ ಗಳಿಸಿ ನಿರ್ಗಮಿಸಿದರು.

ಈ ಹಂತದಲ್ಲಿ ಜೊತೆಯಾದ ನಾಯಕ ಕೆ.ಎಲ್.ರಾಹುಲ್ ಹಾಗೂ ಸೂರ್ಯ ಕುಮಾರ್ ಯಾದವ್ 5ನೇ ವಿಕೆಟ್‌ಗೆ ಆಕರ್ಷಕ 80 ರನ್ ಜೊತೆಯಾಟವಾಡಿದರು. ಸನ್ನಿವೇಶಕ್ಕೆ ತಕ್ಕಂತೆ ಬ್ಯಾಟ್ ಬೀಸಿದ ಈ ಜೋಡಿ ತಂಡವನ್ನು ಗೆಲುವಿನ ದಡ ಸೇರಿಸುವಲ್ಲಿ ಸಫಲರಾದರು. ಏಕದಿನ ಕ್ರಿಕೆಟ್‌ನಲ್ಲಿ ಸತತ ವೈಫಲ್ಯ ಅನುಭವಿಸಿದ್ದ ಸೂರ್ಯಕುಮಾರ್ ಯಾದವ್ 50 ರನ್ ಸಿಡಿಸುವ ಮೂಲಕ ಎಲ್ಲರ ಗಮನ ಸೆಳೆದರು. ಮತ್ತೊಂದೆಡೆ ಅದ್ಭುತ ಫಾರ್ಮ್‌ನಲ್ಲಿರುವ ನಾಯಕ ಕೆ.ಎಲ್.ರಾಹುಲ್ 63 ಎಸೆತಗಳಲ್ಲಿ 1 ಸಿಕ್ಸರ್ ಹಾಗೂ 4 ಬೌಂಡರಿ ಒಳಗೊಂಡ 58 ರನ್ ಗಳಿಸಿದರು. ಅಂತಿಮವಾಗಿ ಭಾರತ 48.4 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 281ರನ್ ಗಳಿಸುವ ಮೂಲಕ ಜಯ ಗಳಿಸಿತು. ಮೊಹಮ್ಮದ್ ಶಮಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಆರೋಗ್ಯ ಕ್ಷೇತ್ರದಲ್ಲಿ ಫಾರ್ಮಸಿಸ್ಟ್‌ಗಳ ಪಾತ್ರ ಮಹತ್ವಕಾರಿ

ವಿಶ್ವ ಫಾರ್ಮಸಿಸ್ಟ್ ದಿನಾಚರಣೆ ಕಾರ್ಯಕ್ರಮದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅಭಿಮತ



ಮೈಸೂರು, ಸೆ. 22(ಆರ್‌ಕೆ)– ಆರೋಗ್ಯ ಕ್ಷೇತ್ರದಲ್ಲಿ ಫಾರ್ಮಸಿಸ್ಟ್‌ಗಳ ಪಾತ್ರ ಪ್ರಮುಖವಾದುದು ಎಂದು ಆರೋಗ್ಯ ಸಚಿವ ದಿನೇಶ್ ಗೂಂಡೂರಾವ್ ಇಂದಿಲ್ಲಿ ಅಭಿಪ್ರಾಯಪಟ್ಟಿದ್ದಾರೆ.

ದಿ ಇಂಡಿಯನ್ ಫಾರ್ಮಸ್ಯೂಟಿಕಲ್ ಅಸೋಸಿಯೇಷನ್ (ಐಪಿಎ) ಮೈಸೂರು ಸ್ಥಳೀಯ ಶಾಖೆ ಹಾಗೂ ಜೆಎಸ್‌ಎಸ್ ಫಾರ್ಮಸಿ ಕಾಲೇಜು ಸಹಯೋಗದೊಂದಿಗೆ ಮೈಸೂರಿನ ಔಷಧ ವಿಜ್ಞಾನ ಮಹಾವಿದ್ಯಾಲಯದಲ್ಲಿ ಇಂದು ಆಯೋಜಿಸಿದ್ದ 'ಫಾರ್ಮಸಿ ಬಲಪಡಿಸುವ ಆರೋಗ್ಯ ವ್ಯವಸ್ಥೆಗಳು' ವಿಷಯದ ವಿಶ್ವ ಫಾರ್ಮಸಿಸ್ಟ್ ದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಇಂದಿನ ಆರೋಗ್ಯ ವ್ಯವಸ್ಥೆಯಲ್ಲಿ ರೋಗಿಗಳಿಗೆ ವೈದ್ಯಕೀಯ ಸೇವೆ ಒದಗಿಸಲು ವೈದ್ಯರಂತೆಯೇ ಫಾರ್ಮಸಿಸ್ಟ್‌ಗಳೂ ಸಹ ಪ್ರಮುಖರಾಗಿದ್ದಾರೆ. ಏಕೆಂದರೆ, ಕೆಲ ಸಂದರ್ಭಗಳಲ್ಲಿ ಫಾರ್ಮಸಿಸ್ಟ್‌ಗಳೇ ತಮ್ಮ ಅಂಗಡಿಗಳಿಗೆ ಬರುವ ರೋಗಿಗಳ ಆರೋಗ್ಯ ತೊಂದರೆ ಅರಿತು ಅದಕ್ಕೆ ತಕ್ಕ ಔಷಧಗಳನ್ನೂ ನೀಡಿ ವೈದ್ಯರ ಸಲಹಾ ಚೀಟಿ ಇಲ್ಲದೆಯೇ ತಮ್ಮ ಅನುಭವ, ಜ್ಞಾನದಿಂದ ತಾತ್ಕಾಲಿಕವಾಗಿ ಆರೋಗ್ಯ ಸಮಸ್ಯೆಗೆ ಪರಿಹಾರ ನೀಡುತ್ತಾರೆ ಎಂದು ಅವರು ನುಡಿದರು.

ಫಾರ್ಮಸಿಸ್ಟ್ ರೋಗಿಗಳು ಆರೋಗ್ಯ ಸಮಸ್ಯೆಗೆ ಯಾವ ಔಷಧವನ್ನು, ಹೇಗೆ ತೆಗೆದುಕೊಳ್ಳಬೇಕು ಎಂದು ಸಲಹೆ ನೀಡುತ್ತಾರೆ. ಎಷ್ಟೋ ಸಂದರ್ಭ ವೈದ್ಯರು ಲಭ್ಯವಿಲ್ಲದಿದ್ದಾಗ ರೋಗಿಯ ಪಾಲಿಗೆ ಫಾರ್ಮಸಿಸ್ಟ್ ವರದಾನವಾಗುವುದು ಉಂಟು ಎಂದು ಸಚಿವರು ನುಡಿದರು.

ನಮ್ಮ ದೇಶದಲ್ಲಿ ಔಷಧ ತಯಾರಿಕೆ, ಉತ್ಪಾದನೆಯಲ್ಲಿ ಹಲವಾರು ಸಂಶೋಧನೆ, ಅನ್ವೇಷಣೆಗಳು ನಡೆಯುತ್ತಿವೆ. ಆದರೆ ಕೆಲವೇ ಕೆಲವು ಸಂಶೋಧನೆಗಳು ಮಾತ್ರ ಯಶಸ್ವಿಯಾಗಿ ಉತ್ತಮ ಗುಣಮಟ್ಟದ ಔಷಧಿಗಳನ್ನು ಉತ್ಪಾದಿಸಲು ಸಾಧ್ಯವಾಗುತ್ತದೆ. ಔಷಧ ಉತ್ಪಾದನೆ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿರುವ ಹಲವು ಉದ್ಯಮಗಳು ವೈದ್ಯಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿವೆ ಎಂದು ತಿಳಿಸಿದರು.

ನಮ್ಮಲ್ಲಿ ಔಷಧ ಪೂರೈಕೆಯಲ್ಲಿ ಮಹತ್ತರ ಪಾತ್ರ ವಹಿಸುತ್ತಿರುವ ಹಲವು ಕಂಪನಿಗಳು, ರೋಗಿಗಳಿಗೆ ಕಡಿಮೆ ದರದಲ್ಲಿ ಔಷಧಿಗಳನ್ನು ಪೂರೈಸುತ್ತಿವೆ. ಆ ಹಿನ್ನೆಲೆಯಲ್ಲಿ ಡ್ರಗ್ಗಿಸ್ಟ್‌ಗಳು, ಫಾರ್ಮಸಿಸ್ಟ್‌ಗಳು, ಸ್ಟಾಕಿಸ್ಟ್‌ಗಳು, ಡಿಸ್ಟ್ರಿಬ್ಯೂಟರ್‌ಗಳು, ಸಗಟು ಮತ್ತು ಚಿಲ್ಲರೆ ವ್ಯಾಪಾರಿಗಳು ರೋಗಿಗಳಿಗೆ ಅಗತ್ಯ ಔಷಧ ಪೂರೈಸುವಲ್ಲಿ ಮಹತ್ತರ ಪಾತ್ರ ವಹಿಸುತ್ತಿದ್ದಾರೆ ಎಂದು ಹೇಳಿದರು.

ಅನ್ನ, ಅಕ್ಷರ ದಾಸೋಹ, ಗ್ರಾಮೀಣಾಭಿವೃದ್ಧಿ ಜೊತೆಗೆ ವೈದ್ಯಕೀಯ ಕ್ಷೇತ್ರದಲ್ಲಿ ಮುಂಚೂಣಿ ಸ್ಥಾನದಲ್ಲಿರುವ ಮೈಸೂರಿನ ಜೆಎಸ್‌ಎಸ್ ಮಹಾಸಂಸ್ಥಾನ, ತಾನು ನಡೆಸುತ್ತಿರುವ ವೈದ್ಯಕೀಯ, ಫಾರ್ಮಸಿ ಕಾಲೇಜಿನಲ್ಲಿ ಉತ್ತಮ ಸೌಕರ್ಯ, ಗುಣಮಟ್ಟದ ಶಿಕ್ಷಣ, ವಾತಾವರಣ ದಿಂದಾಗಿ ಇಲ್ಲಿ ಉತ್ತಮ ಫಲಿತಾಂಶವೂ ಬರಲು ಸಾಧ್ಯವಾಗಿದೆ. ಮುಂದೊಂದು ದಿನ ಜೆಎಸ್‌ಎಸ್ ಫಾರ್ಮಸಿ ಕಾಲೇಜು ದೇಶದಲ್ಲೇ ಮೊದಲ ಸ್ಥಾನಕ್ಕೆ ಹೋಗುತ್ತದೆ ಎಂದು ದಿನೇಶ್ ಗುಂಡೂರಾವ್ ನುಡಿದರು.

ಇದೇ ಸಂದರ್ಭ ಜೆಎಸ್‌ಎಸ್ ಫಾರ್ಮಸಿ ಕಾಲೇಜಿನ ಹಳೇ ವಿದ್ಯಾರ್ಥಿಗಳಾದ ಮಣಿಪಾಲ ಫಾರ್ಮಸಿ ಕಾಲೇಜು ಪ್ರಾಂಶುಪಾಲ ಡಾ. ಕೃಷ್ಣಮೂರ್ತಿ ಭಟ್, ಡ್ರಗ್ಸ್ ನಿಯಂತ್ರಣ ಇಲಾಖೆ ವೈಜ್ಞಾನಿಕ ಅಧಿಕಾರಿ ಡಾ. ಎಂ.ಎಸ್. ಲೋಕೇಶ್ ಪ್ರಸಾದ್ ಹಾಗೂ ಅಮೇರಿಕದ ಹ್ಯಾಂಪ್‌ಶೈರ್‌ನ ಅರಸ್ ಮಾರ್ಕೆಟಿಂಗ್ ಲಿಮಿಟೆಡ್ ನಿರ್ದೇಶಕ ಸುಬ್ರಮಣ್ಯ ಕುಂಟಿಕಾನಮಠ ಅವರನ್ನು ಸಚಿವ ದಿನೇಶ್ ಗುಂಡೂರಾವ್ ಆತ್ಮೀಯವಾಗಿ ಅಭಿನಂದಿಸಿದರು. ದಿ ಇಂಡಿಯನ್ ಫಾರ್ಮಸಿಸ್ಟ್ ಅಸೋಸಿಯೇಷನ್ ಮೈಸೂರು ಶಾಖೆ ಅಧ್ಯಕ್ಷ ಡಾ. ಟಿ.ಎಂ.ಪ್ರಮೋದ್ ಕುಮಾರ್, ಕರ್ನಾಟಕ ಡ್ರಗ್ಸ್ ಅಂಡ್ ಫಾರ್ಮಸ್ಯೂಟಿಕಲ್ ಮ್ಯಾನುಫ್ಯಾಕ್ಚರರ್ಸ್ ಅಸೋಸಿಯೇಷನ್ ಅಧ್ಯಕ್ಷ ಹರೀಶ್ ಕೆ.ಜೈನ್, ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿ ಮಂಜುನಾಥ, ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ. ಬೆಟಸೂರಮಠ, ಜೆಎಸ್‌ಎಸ್ ಅಕಾಡೆಮಿ ಆಫ್ ಹೈಯರ್ ಎಜುಕೇಷನ್ ಅಂಡ್ ರೀಸರ್ಚ್ ಡಾ.ಬಿ. ಮಂಜುನಾಥ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಕುಮಾರಸ್ವಾಮಿ ದಿ ಇಂಡಿಯನ್ ಫಾರ್ಮಸ್ಯೂಟಿಕಲ್ ಅಸೋಸಿಯೇಷನ್ ಕಾರ್ಯದರ್ಶಿ ಡಾ. ಆರ್.ಎಸ್. ಚಂದನ್ ಹಾಗೂ ಖಜಾಂಚಿ ಡಾ. ಗುರುಪಾದಯ್ಯ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಇದಕ್ಕೂ ಮೊದಲು ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯದ ಮೈದಾನದಲ್ಲಿ ವಿಶ್ವ ಫಾರ್ಮಸಿಸ್ಟ್‌ಗಳ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಕ್ರಿಕೆಟ್ ಕ್ರೀಡಾಕೂಟವನ್ನು ಸಚಿವ ದಿನೇಶ್ ಗುಂಡೂರಾವ್ ಬ್ಯಾಟ್ ಮಾಡುವ ಮೂಲಕ ಉದ್ಘಾಟಿಸಿದರು.

ರಾಜ್ಯ ಮಟ್ಟದ ಪ್ರಾಥಮಿಕ, ಪ್ರೌಢಶಾಲಾ ವಿಭಾಗದ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಗೆ ಚಾಲನೆ



ಮೈಸೂರಿನಲ್ಲಿ ಆಯೋಜಿಸಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿಭಾಗದ ರಾಜ್ಯ ಮಟ್ಟದ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಯನ್ನು ವಿಧಾನಪರಿಷತ್ ಸದಸ್ಯ ಮರಿತಿಬ್ಬೇಗೌಡ ಉದ್ಘಾಟಿಸಿದರು. ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ.ಜೆ.ಶಶಿಧರ ಪ್ರಸಾದ್ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

ಮೈಸೂರು, ಸೆ.22(ಎಸ್‌ಬಿಡಿ)– ಮೈಸೂರಿನಲ್ಲಿ ಆಯೋಜಿಸಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿಭಾಗದ ಎರಡು ದಿನಗಳ ರಾಜ್ಯ ಮಟ್ಟದ ಹೊನಲು–ಬೆಳಕಿನ ವಾಲಿಬಾಲ್ ಪಂದ್ಯಾವಳಿಗೆ ಶುಕ್ರವಾರ ಚಾಲನೆ ದೊರಕಿತು.

ಶಾಲಾ ಶಿಕ್ಷಣ ಇಲಾಖೆ, ಮೈಸೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯ್ತಿ, ಶಾಲಾ ಶಿಕ್ಷಣ ಇಲಾಖೆ ಮೈಸೂರು ಉಪ ನಿರ್ದೇಶಕರ ಕಚೇರಿ, ಮೈಸೂರು ಉತ್ತರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಸಹಯೋಗದಲ್ಲಿ ಬೃಂದಾವನ ಬಡಾವಣೆಯ ಶ್ರೀ ಕುವೆಂಪು ಬೃಂದಾವನ ಪ್ರೌಢಶಾಲೆ ಆವರಣದಲ್ಲಿ ಆಯೋಜಿಸಿರುವ ಪಂದ್ಯಾವಳಿಗೆ ವಿಧಾನಪರಿಷತ್ ಸದಸ್ಯ ಮರಿತಿಬ್ಬೇಗೌಡ ಕ್ರೀಡಾ ಧ್ವಜಾರೋಹಣ ಹಾಗೂ ವಾಲಿಬಾಲ್ ಸರ್ವೀಸ್ ಮಾಡುವ ಮೂಲಕ ಚಾಲನೆ ನೀಡಿದರು.

ಬಳಿಕ ಸಭಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕ್ರೀಡೆ ಶಿಕ್ಷಣದ ಅವಿಭಾಜ್ಯ ಅಂಗ ಎಂಬುದು ಸರ್ಕಾರ ಹಾಗೂ ಶಿಕ್ಷಣ ತಜ್ಞರ ಅಭಿಪ್ರಾಯವಾಗಿದೆ. ಹಾಗಾಗಿ ಕ್ರೀಡೆಯಲ್ಲಿ ವಿದ್ಯಾರ್ಥಿಗಳ ಭಾಗವಹಿಸುವಿಕೆ ಬಹಳ ಮುಖ್ಯ. ಪಠ್ಯ ಓದಿ ಉತ್ತಮ ಬದುಕು ಕಟ್ಟಿಕೊಳ್ಳುವಂತೆ ಕ್ರೀಡೆಯಲ್ಲೂ ಸಾಧನೆ ಮಾಡುವ ಮೂಲಕ ಬದುಕು ರೂಪಿಸಿಕೊಳ್ಳುವ ಅವಕಾಶ ಈ ದೇಶದಲ್ಲಿದೆ ಎಂದು ಕಿವಿಮಾತು ಹೇಳಿದರು.

ಹಿರಿಯ ಶಿಕ್ಷಕರಿಗೆ ಅಭಿನಂದನೆ: ಸುಮಾರು ಮೂರು ದಶಕಗಳಿಂದ ದೈಹಿಕ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಎಂ.ಎನ್.ಅಕ್ಕಮ್ಮ, ಶೋಭಾ ಕುಮಾರಿ, ಸೋಮಶೇಖರ್ ಹಾಗೂ ವೇಣುಗೋಪಾಲ್ ಅವರನ್ನು ಸಮಾರಂಭದಲ್ಲಿ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ.ಜೆ.ಶಶಿಧರ ಪ್ರಸಾದ್, ಡಿಡಿಪಿಐ ಹೆಚ್.ಕೆ.ಪಾಂಡು, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎಸ್.ಸಿದ್ದರಾಜು, ಉತ್ತರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಕೃಷ್ಣ, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ವೆಂಕಟೇಶ್, ಕರ್ನಾಟಕ ರಾಜ್ಯ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ಸಂಯೋಜಿತ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಸಂಘದ ಅಧ್ಯಕ್ಷ ಪಿ.ಮಹದೇವಯ್ಯ, ರಾಜ್ಯ ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಎಸ್.ಚೌಡಪ್ಪ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮೈಸೂರು ಜಿಲ್ಲಾಧ್ಯಕ್ಷ ಜೆ.ಗೋವಿಂದರಾಜು, ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಕೆ.ಬಿ.ಸೋಮೇಗೌಡ, ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಸಿ.ಬಿ.ಅರುಣ್‌ಕುಮಾರ್, ಪ್ರಾಥಮಿಕ ಶಾಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಮೈಸೂರು ಉತ್ತರ ವಲಯ ಅಧ್ಯಕ್ಷ ಎಲ್.ರಾಜೇಶ್, ಸರ್ಕಾರಿ ಗ್ರೇಡ್ 1 ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಉತ್ತರ ವಲಯ ಅಧ್ಯಕ್ಷ ಹೆಚ್.ಬಿ.ಸೋಮಶೇಖರ್, ಮೈಸೂರು ಜಿಲ್ಲಾ ದೈಹಿಕ ಶಿಕ್ಷಕರ ಸಂಘದ ರಾಜ್ಯ ಪರಿಷತ್ ಸದಸ್ಯ ಕಡಕೊಳ ರವಿ, ವಿವಿಧ ಶಿಕ್ಷಕ ಸಂಘಗಳ ಜಿ.ನಾಗೇಶ್, ರಾಜೇಂದ್ರ, ಭಕ್ತವತ್ಸಲ, ಟಿ.ಎಸ್.ಗೋಪಿನಾಥ್, ಮುತ್ತಣ್ಣ ಬಿಡನಾಳ ಮತ್ತಿತರರು ಉಪಸ್ಥಿತರಿದ್ದರು.

ಪಂದ್ಯಾವಳಿಯಲ್ಲಿ 16 ತಂಡ ಭಾಗಿ

ರಾಜ್ಯ ಮಟ್ಟದ ವಾಲಿಬಾಲ್ ಪಂದ್ಯಾವಳಿಯಲ್ಲಿ ಮೈಸೂರು, ಗುಲ್ಬರ್ಗಾ, ಬೆಂಗಳೂರು ಹಾಗೂ ಬೆಳಗಾವಿ ವಿಭಾಗದ 16 ತಂಡಗಳು ಮತ್ತು ಬೆಂಗಳೂರು ವಿದ್ಯಾನಗರ ಕ್ರೀಡಾ ವಸತಿ ಶಾಲೆಯ ತಂಡ ಭಾಗಿಯಾಗಿವೆ. 14 ವರ್ಷದೊಳಗಿನ ಹಾಗೂ 17 ವರ್ಷದೊಳಗಿನ ವಿಭಾಗಗಳಲ್ಲಿ ಬಾಲಕರು ಹಾಗೂ ಬಾಲಕಿಯರಿಗೆ ಪ್ರತ್ಯೇಕ ಪಂದ್ಯಗಳನ್ನು ನಡೆಸಲಾಗುತ್ತಿದೆ.


ದೈಹಿಕ ಶಿಕ್ಷಣದ ಬಗ್ಗೆ ನಿರ್ಲಕ್ಷ

ಮೈಸೂರು: ರಾಜ್ಯದಲ್ಲಿ ಶೇ.70ರಷ್ಟು ದೈಹಿಕ ಶಿಕ್ಷಣ ಶಿಕ್ಷಕರ ಕೊರತೆ ಇದೆ ಎಂದು ವಿಧಾನಪರಿಷತ್ ಸದಸ್ಯ ಮರಿತಿಬ್ಬೇಗೌಡ ಹೇಳಿದರು.

ಆರೋಗ್ಯಯುಕ್ತ ಸಮಾಜದ ದೃಷ್ಟಿಯಿಂದ ಪಠ್ಯದ ಜೊತೆಗೆ ದೈಹಿಕ ಶಿಕ್ಷಣ ಬಹಳ ಮುಖ್ಯ ಎಂದು ಸರ್ಕಾರಗಳು ಹೇಳುತ್ತವೆ. ಆದರೆ 10–12 ವರ್ಷದಿಂದ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿ ಮಾಡದ ಕಾರಣ ಶೇ.70ರಷ್ಟು ಹುದ್ದೆಗಳು ಖಾಲಿ ಇವೆ. ಪದವಿ ಪೂರ್ವ ಶಿಕ್ಷಣದಲ್ಲಿ ದೈಹಿಕ ಶಿಕ್ಷಣ ತರಬೇತುದಾರರ ಹುದ್ದೆಗಳನ್ನೇ ಸೃಜಿಸದೆ ಸಂಪೂರ್ಣ ನಿರ್ಲಕ್ಷ ಮಾಡಲಾಗಿದೆ. ಒಟ್ಟು 36 ದೈಹಿಕ ಶಿಕ್ಷಣಾಧಿಕಾರಿಗಳ ಹುದ್ದೆಗಳ ಪೈಕಿ 28 ಖಾಲಿ ಇವೆ.

ಕ್ರೀಡಾ ವಸತಿ ಶಾಲೆಗಳಿಗೂ ಖಾಯಂ ತರಬೇತುದಾರರನ್ನು ನಿಯೋಜಿಸಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಮಕ್ಕಳ ಸಂಖ್ಯೆ ಅನುಪಾತದ ಆಧಾರದಲ್ಲಿ ದೈಹಿಕ ಶಿಕ್ಷಣ ಶಿಕ್ಷಕರನ್ನು ನೇಮಿಸಿಕೊಳ್ಳುವ ಕ್ರಮ ಬಿಟ್ಟು, ಎಲ್ಲಾ ಶಾಲೆಗಳಿಗೂ ಶಿಕ್ಷಕರನ್ನು ನಿಯೋಜಿಸಬೇಕು. ದೈಹಿಕ ಶಿಕ್ಷಣ ಶಿಕ್ಷಕರ ಬಡ್ತಿ ಪ್ರಕ್ರಿಯೆಯಲ್ಲಿನ ವ್ಯತ್ಯಾಸ ಸರಿಪಡಿಸಬೇಕು. ಈ ನಿಟ್ಟಿನಲ್ಲಿ ಕೆಡರ್ ಹಾಗೂ ನೇಮಕಾತಿ ನಿಯಮ(ಸಿ ಅಂಡ್ ಆರ್ ರೂಲ್) ಪರಿಷ್ಕರಿಸಬೇಕೆಂಬ 14 ವರ್ಷಗಳ ಬೇಡಿಕೆಯನ್ನು ಈವರೆಗೂ ಪರಿಗಣಿಸಿಲ್ಲ. ಈ ಬಗ್ಗೆ ಶಿಕ್ಷಣ ಇಲಾಖೆ ಉನ್ನತ ಅಧಿಕಾರಿಗಳ ಧೋರಣೆ ಬಗ್ಗೆ ತೀವ್ರ ವಿಷಾಧವಿದೆ. ಈ ವಿಚಾರಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಾಗೂ ಶಿಕ್ಷಣ ಸಚಿವರ ಗಮನಕ್ಕೆ ತರಲಾಗಿದ್ದು, ಮನವಿಗೆ ಸ್ಪಂದಿಸುವ ವಿಶ್ವಾಸವಿದೆ ಎಂದು ತಿಳಿಸಿದರು.

ಹ್ಯಾಂಡ್ ಬಾಲ್‌ನಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ



ಮೈಸೂರಿನ ದಟ್ಟಗಳ್ಳಿ ಬಡಾವಣೆಯಲ್ಲಿರುವ ಎಸ್‌ವಿಜಿ ಸೆಂಟರ್ ಆಫ್ ಎಕ್ಸಲೆನ್ಸ್ ಪದವಿ ಪೂರ್ವ ಕಾಲೇಜಿನ ವಿಜ್ಞಾನ ವಿಭಾಗದ ಪ್ರಥಮ ವರ್ಷದ ವಿದ್ಯಾರ್ಥಿನಿ ಕುಮಾರಿ ಸಿ ರಂಜಿತ ಇತ್ತೀಚೆಗೆ ನಡೆದ ಕಾಲೇಜು ಹಂತದ ಹ್ಯಾಂಡ್ ಬಾಲ್‌ನಲ್ಲಿ ಜಯ ಗಳಿಸುವ ಮೂಲಕ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಸೆ.27ರಂದು ಚಾ.ನಗರ, ಮೈಸೂರು, ಮಂಡ್ಯದಲ್ಲಿ 'ಭವಿಷ್ಯ ನಿಧಿ ನಿಮ್ಮ ಹತ್ತಿರ' ಕಾರ್ಯಕ್ರಮ

ಮೈಸೂರು: ಕಾರ್ಮಿಕರ ಭವಿಷ್ಯ ನಿಧಿ ಸಂಘಟನೆ ಮೈಸೂರು ಪ್ರಾದೇಶಿಕ ಕಚೇರಿ ವತಿಯಿಂದ 'ಭವಿಷ್ಯ ನಿಧಿ ನಿಮ್ಮ ಹತ್ತಿರ' 2.0 ಅಡಿಯಲ್ಲಿ ಮೈಸೂರು, ಮಂಡ್ಯ ಹಾಗೂ ಚಾಮರಾಜನಗರದಲ್ಲಿ ಸೆ.27ರಂದು ಜಿಲ್ಲಾ ವ್ಯಾಪ್ತಿಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮೈಸೂರು ಜಿಲ್ಲೆ, ನಂಜನಗೂಡು ಕೈಗಾರಿಕಾ ಪ್ರದೇಶ, ಒಂದನೇ ಕ್ರಾಸ್‌ನ ಇಂಡಸ್ಟ್ರೀಸ್ ಅಸೋಸಿಯೇಷನ್ (# 63), ಮಂಡ್ಯ ತಾಲೂಕು, ಕೊತ್ತತ್ತಿ ಹೋಬಳಿ ಇಂಡುವಾಳು ಹಾಲು ಉತ್ಪಾದಕರ ಸಹ ಕಾರ ಸಂಘ ಮತ್ತು ಚಾಮರಾಜನಗರ ಕೆಎಸ್‌ಆರ್‌ಟಿಸಿ ಡಿಪೋ ಆವರಣದಲ್ಲಿ ಅಂದು ಬೆಳಗ್ಗೆ 9ಕ್ಕೆ ಕಾರ್ಯಕ್ರಮ ನಡೆಯಲಿದ್ದು, ಪಿಎಫ್ ಸದಸ್ಯರು, ಪಿಂಚಣಿದಾರರು, ಉದ್ಯೋಗದಾತರು ಭಾಗವಹಿಸಬಹುದು. ಹೆಚ್ಚಿನ ವಿವರಗಳಿಗೆ ಸಾರ್ವಜನಿಕ ಸಂಪರ್ಕ ಅಧಿಕಾರಿ (0821–2599200/ 222) ಅಥವಾ ಮೇಲ್(ro.mysore@epfindia.gov.in) ಮೂಲಕ ಸಂಪರ್ಕಿಸಬಹುದು. ಇಲ್ಲವೇ ಕ್ಷೇತ್ರೀಯ ಭವಿಷ್ಯ ನಿಧಿ ಕಚೇರಿ, ಮೈಸೂರಿನ ಸಾಮಾಜಿಕ ಮಾಧ್ಯಮ ವೇದಿಕೆ (@epfomysore)ಗೆ ಭೇಟಿ ನೀಡಬಹುದು ಎಂದು ಕ್ಷೇತ್ರೀಯ ಭವಿಷ್ಯ ನಿಧಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಟ್ಟು ಪದ್ಧತಿಯಲ್ಲಿ ಬೆಳೆಗೆ ನೀರು ಕೊಡಲು ಸಿದ್ಧ

ಶಾಸಕ ರಮೇಶ್‌ಬಾಬು ಬಂಡಿಸಿದ್ದೇಗೌಡ



ಮಂಡ್ಯ, ಸೆ.22– ತಮಿಳುನಾಡಿಗೆ 15 ದಿನ ನಿತ್ಯ 5 ಸಾವಿರ ಕ್ಯುಸೆಕ್ ನೀರು ಹರಿಸಬೇಕೆಂದು ಸುಪ್ರೀಂಕೋರ್ಟ್ ಆದೇಶದಿಂದ ರೈತರು ಆತಂಕಕ್ಕೆ ಒಳಗಾಗಬಾರದು. ನಮ್ಮ ಸರ್ಕಾರ ರೈತರ ಜೊತೆಗಿದ್ದು, ಕಟ್ಟು ಪದ್ಧತಿಯಲ್ಲಿ ರೈತರ ಬೆಳೆಗೆ ನೀರು ಕೊಡಲಿದೆ ಎಂದು ಶಾಸಕ ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ ತಿಳಿಸಿದರು.

ಶುಕ್ರವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾವೇರಿ ಜಲಾನಯನ ವ್ಯಾಪ್ತಿಯ ಜನರಿಗೆ ಕುಡಿಯುವ ನೀರು ಹಾಗೂ ರೈತರ ಬೆಳೆಗೆ ನೀರು ಹರಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ಯಾವುದೇ ಕಾರಣಕ್ಕೂ ರೈತರು ಆತಂಕ ಪಡುವುದು ಬೇಡ. ರೈತರು, ಜನರು ನಡೆಸುವ ಪ್ರತಿಭಟನೆಗೆ ನಮ್ಮ ಸಂಪೂರ್ಣ ಬೆಂಬಲವಿದ್ದು, ಶಾಂತಿಯುತವಾಗಿ ಪ್ರತಿಭಟನೆ ಮಾಡುವ ಮೂಲಕ ನಮ್ಮ ಧ್ವನಿಯನ್ನು ಸುಪ್ರೀಂಕೋರ್ಟ್ ಹಾಗೂ ಕೇಂದ್ರ ಸರ್ಕಾರಕ್ಕೆ ತಲುಪಿಸುವಂತೆ ನೋಡಿಕೊಳ್ಳಬೇಕಿದೆ ಎಂದರು.

ಕಾವೇರಿ ಜಲಾನಯನ ವ್ಯಾಪ್ತಿಯಲ್ಲಿ ಬೀಳುವ ಮಳೆ ನೀರು, ಹಾರಂಗಿ, ಗೊರೂರು, ಹೇಮಾವತಿ, ಕನ್ನಂಬಾಡಿ ಜಲಾಶಯದಿಂದ ಸೋರಿಕೆಯಾಗುವ ನೀರೇ 3 ರಿಂದ 4 ಸಾವಿರ ಕ್ಯುಸೆಕ್ ಆಗುತ್ತದೆ. ಕೆಆರ್‌ಎಸ್ ಜಲಾಶಯದಿಂದ ಸಾವಿರ ಕ್ಯೂಸೆಕ್ ನೀರು ಮಾತ್ರ ಬಿಡಲಾಗುತ್ತಿದೆ. ರೈತರು ಪ್ರತಿದಿನ ಕೆಆರ್‌ಎಸ್‌ನಿಂದಲೇ 5 ಸಾವಿರ ಕ್ಯೂಸೆಕ್ ನೀರು ಬಿಡುತ್ತಿದ್ದಾರೆ ಎಂದು ಆತಂಕಗೊಳ್ಳುವುದು ಬೇಡ. ನಮ್ಮ ಸರ್ಕಾರ ರೈತರ ಹಾಗೂ ಜನಸಾಮಾನ್ಯರ ಹಿತ ಕಾಯಲಿದೆ ಎಂದರು.

ಈ ಹಿಂದೆ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಮಳೆ ಬರುವ ಆಶಾಭಾವನೆಯಿಂದ ಕಟ್ಟು ಪದ್ಧತಿಯಲ್ಲಿ ನೀರು ಹರಿಸುವ ತೀರ್ಮಾನ ಮಾಡಿದ್ದೆವು. ಆದರೆ ಜೂನ್, ಜುಲೈ ತಿಂಗಳಿನಲ್ಲಿ ಮಳೆ ಬರಲಿಲ್ಲ. ಆಗಸ್ಟ್ ತಿಂಗಳಲ್ಲಿ ಮಳೆ ಬಂದರೂ ಸೆಪ್ಟೆಂಬರ್‌ನಲ್ಲಿ ಮಳೆ ಬೀಳಲಿಲ್ಲ. ಇದರಿಂದಾಗಿ ಸಿಡಬ್ಲ್ಯೂಎಂಎ ಹಾಗೂ ಸಿಡಬ್ಲ್ಯುಆರ್‌ಸಿ ಸಮಿತಿ ಹೇಳಿದ ಹಾಗೆ ತಮಿಳುನಾಡಿಗೆ ನೀರು ಹರಿಸಲು ಆಗಲಿಲ್ಲ. ತಮಿಳುನಾಡು ಸರ್ಕಾರ ಸಂಕಷ್ಟದ ಸಂದರ್ಭದಲ್ಲೂ ನೀರು ಹರಿಸಬೇಕೆನ್ನುವ ವಾದದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಸರ್ವ ಪಕ್ಷ ಸಭೆ ಕರೆದು ಚರ್ಚಿಸಿದ್ದೇವೆ. ನಂತರ ದೆಹಲಿಯಲ್ಲಿ ಸರ್ವ ಪಕ್ಷಗಳ ಸಂಸದರ ಸಭೆ ನಡೆಸಿ ಕಾವೇರಿ ನದಿ ನೀರು ಬಿಡದಂತೆ ಎಲ್ಲಾ ಪ್ರಯತ್ನಗಳನ್ನು ಮಾಡಿದ್ದೇವೆ. ಆದರೆ ಸುಪ್ರೀಂಕೋರ್ಟ್ ನೀರು ಹರಿಸುವಂತೆ ಆದೇಶ ನೀಡಿರುವುದು ಆಘಾತ ತಂದಿದೆ. ವಿರೋಧ ಪಕ್ಷಗಳು ನೀರು ಹರಿಸಬಾರದೆಂದು ಹೇಳುವುದು ಸಹಜ. ಆದರೆ ಎಲ್ಲಾ ಸರ್ಕಾರಗಳು ಕಾನೂನಾತ್ಮಕವಾಗಿಯೇ ನೀರು ಹರಿಸಿವೆ ಎಂದರು.

ಪ್ರಧಾನಿ ಮೋದಿ ಉಭಯ ಸರ್ಕಾರಗಳ ಪ್ರತಿನಿಧಿಗಳನ್ನು ಕರೆಸಿ, ಮಾತುಕತೆ ಮೂಲಕ ಕಾವೇರಿ ವಿವಾದ ಬಗೆಹರಿಸಲು ಪ್ರಯತ್ನಿಸಬೇಕು. ಸಿಎಂ ಸಿದ್ದರಾಮಯ್ಯನವರು ಪ್ರಧಾನಿ ಮೋದಿ ಅವರನ್ನು ಭೇಟಿ ಮಾಡಲು ಅವಕಾಶ ಕೇಳಿದ್ದರೂ, ಇನ್ನೂ ನೀಡಿಲ್ಲ. ಕೇಂದ್ರ ಸರ್ಕಾರ ಶೀಘ್ರ ಉಭಯ ಸರ್ಕಾರಗಳ ಪ್ರತಿನಿಧಿಗಳನ್ನು ಕರೆಸಿ ಮಾತುಕತೆಗೆ ವೇದಿಕೆ ನಿರ್ಮಿಸಬೇಕು ಎಂದು ಒತ್ತಾಯಿಸಿದರು. ಶಾಸಕ ಗಣಿಗ ರವಿಕುಮಾರ್ ಮಾತನಾಡಿ, ನಮ್ಮ ಸರ್ಕಾರ ಸರ್ವಪಕ್ಷಗಳ ಸಭೆ ಕರೆದು ಚರ್ಚಿಸಿದ ನಂತರ, ನೀರು ಬಿಡಲ್ಲ ಎಂದು ನಿರ್ಣಯ ತೆಗೆದುಕೊಂಡು ಅದರಂತೆ ತಮಿಳುನಾಡಿಗೆ ನೀರು ನಿಲ್ಲಿಸಿದ್ದೆವು. ಆದರೆ ಕಾವೇರಿ ನೀರು ನಿರ್ವಹಣಾ ಸಮಿತಿ ಆದೇಶದಂತೆ ನಡೆದುಕೊಳ್ಳದಿದ್ದರೆ ಸುಪ್ರೀಂಕೋರ್ಟ್ ಆಕ್ಷೇಪ ವ್ಯಕ್ತಪಡಿಸುವ ಹಿನ್ನೆಲೆಯಲ್ಲಿ ಕಾನೂನಾತ್ಮಕವಾಗಿ ನೀರು ಹರಿಸಲೇಬೇಕಾದ ಒತ್ತಡಕ್ಕೆ ಸರ್ಕಾರ ಒಳಗಾಗಬೇಕಾಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಧಾನಿ ಮೋದಿ ಅವರ ಭೇಟಿಗೆ ಅವಕಾಶ ಕೇಳಿದ್ದರೂ ಇನ್ನೂ ಸಮಯ ನೀಡಿಲ್ಲ. ರಾಜ್ಯದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಮೈತ್ರಿ ಮಾಡಿಕೊಳ್ಳುವ ವಿಚಾರವಾಗಿ ಇಂದಿನಿಂದ ದೆಹಲಿಯಲ್ಲಿ 3 ದಿನಗಳ ಕಾಲ ಮಾತುಕತೆ ನಡೆಸಲಿದ್ದಾರೆ. ಮಾಜಿ ಪ್ರಧಾನಿ ದೇವೇಗೌಡರು ಕೇಳಿದರೆ ಪ್ರಧಾನಿ ಮೋದಿ ಸಮಯ ನೀಡುತ್ತಾರೆ. ಹಾಗಾಗಿ ದೇವೇಗೌಡರೇ ಕಾವೇರಿ ವಿಚಾರವನ್ನು ಪ್ರಧಾನಿಯವರ ಬಳಿ ಚರ್ಚಿಸಬೇಕೆಂದು ಮನವಿ ಮಾಡಿದರು.

ಸಂಸದೆ ಸುಮಲತಾ ಅಂಬರೀಶ್ ಮಂಡ್ಯದಲ್ಲಿ ಸುದ್ದಿಗೋಷ್ಠಿ, ಸಭೆ ಮಾಡುವುದನ್ನು ಬಿಟ್ಟು, ದೆಹಲಿಯಲ್ಲಿ ಎಲ್ಲಾ ಸಂಸದರ ಜೊತೆಗೂಡಿ ಮೋದಿಯವರನ್ನು ಭೇಟಿ ಮಾಡಿ ಕಾವೇರಿ ವಿಚಾರದಲ್ಲಿ ಮಧ್ಯಪ್ರವೇಶಿಸುವಂತೆ ಮನವಿ ಮಾಡಲಿ ಎಂದು ಆಗ್ರಹಿಸಿದರು.

ಗೋಷ್ಠಿಯಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್, ಮಹಿಳಾ ಅಧ್ಯಕ್ಷೆ ಅಂಜನಾ, ರುದ್ರಪ್ಪ, ಸಿ.ಎಂ.ದ್ಯಾವಪ್ಪ, ಸುರೇಶ್, ನಗರಸಭಾ ಸದಸ್ಯ ಶ್ರೀಧರ್ ಉಪಸ್ಥಿತರಿದ್ದರು.

ಇಂದು ಭಾರತೀನಗರ ಸಂಪೂರ್ಣ ಬಂದ್

ಭಾರತೀನಗರ, ಸೆ.22– ಸುಪ್ರೀಂಕೋರ್ಟ್ ಆದೇಶ ವಿರೋಧಿಸಿ ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ಶನಿವಾರ ಕರೆ ನೀಡಿರುವ ಮಂಡ್ಯ ಬಂದ್ ಬೆಂಬಲಿಸಿ ಭಾರತೀನಗರ ಬಂದ್ ಮಾಡಲು ಶುಕ್ರವಾರ ತೀರ್ಮಾನಿಸಲಾಯಿತು.

ಪಟ್ಟಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಪ್ರಗತಿಪರ ಸಂಘಟನೆಗಳ ಕಾರ್ಯಕರ್ತರು ಕಾವೇರಿ ಉಳಿವಿಗಾಗಿ ಮತ್ತು ರೈತರ ಅಭಿವೃದ್ಧಿಗಾಗಿ ಭಾರತೀನಗರ ಸಂಪೂರ್ಣ ಬಂದ್‌ಗೊಳಿಸಲು ನಿರ್ಧಾರ ಕೈಗೊಂಡರು.

ಇದೇ ವೇಳೆ ಪಟ್ಟಣದ ಅಂಗಡಿ ಮುಂಗಟ್ಟುಗಳನ್ನು ಬಂದ ಮಾಡಿ ತಮಿಳುನಾಡಿಗೆ ಹರಿಸುತ್ತಿರುವ ಕಾವೇರಿ ನೀರನ್ನು ತಕ್ಷಣ ನಿಲ್ಲಿಸುವಂತೆ ರಾಜ್ಯ ಸರ್ಕಾರದ ವಿರುದ್ಧ ಮದ್ದೂರು–ಮಳವಳ್ಳಿ ಹೆದ್ದಾರಿಯಲ್ಲಿ ಪ್ರತಿಭಟಿಸಲಾಗುವುದು ಎಂದು ಮುಖಂಡ ಬಿ.ಎಸ್.ಬೋರೇಗೌಡ ತಿಳಿಸಿದರು.

ಸಭೆಯಲ್ಲಿ ಮುಖಂಡರಾದ ಚಿಕ್ಕತಿಮ್ಮೇಗೌಡ, ಎ.ಎಸ್.ರಾಜೀವ್, ಗಿರೀಶ್, ಆರ್.ಸಿದ್ದಪ್ಪ, ಸ್ವರೂಪ್‌ಚಂದ್ರ, ಶಂಕರೇಗೌಡ, ಮಹೇಂದ್ರ, ದೊಡ್ಡೇಗೌಡ, ರಘು, ರಾಮಚಂದ್ರೇಗೌಡ, ಮೂರ್ತಿ, ಕೆ.ವಿ.ಶ್ರೀನಿವಾಸ್, ಸಜನ್, ಅರವಿಂದ್, ವೈ.ಬಿ.ಶ್ರೀಕಂಠಸ್ವಾಮಿ, ಕಬ್ಬಾಳಯ್ಯ, ರವೀಂದ್ರ, ಹೋಟೇಲ್ ಸುಧಾಕರ್‌ಶೆಟ್ಟಿ, ಪುಟ್ಟಸ್ವಾಮಿ ಹಾಗೂ ಇತರರಿದ್ದರು.

ಸುಪ್ರೀಂಕೋರ್ಟ್ ತೀರ್ಪು ಮರು ಪರಿಶೀಲನೆಗೆ ಆಗ್ರಹ



ಪಾಂಡವಪುರ, ಸೆ.22– ತಮಿಳುನಾಡಿಗೆ ನಿತ್ಯ 5 ಸಾವಿರ ಕ್ಯುಸೆಕ್ ನೀರು ಹರಿಸುವಂತೆ ನೀಡಿರುವ ಸುಪ್ರೀಂಕೋರ್ಟ್ ತೀರ್ಪನ್ನು ಮರು ಪರಿಶೀಲಿಸುವಂತೆ ಆಗ್ರಹಿಸಿ ಕಾಂಗ್ರೆಸ್ ಕಾರ್ಯಕರ್ತರು ತಹಸೀಲ್ದಾರ್ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ಪಟ್ಟಣದ ಮಿನಿ ವಿಧಾನಸೌಧಕ್ಕೆ ಕೆಪಿಸಿಸಿ ಸದಸ್ಯ ಹೆಚ್.ತ್ಯಾಗರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಕೃಷ್ಣೇಗೌಡರ ನೇತೃತ್ವದಲ್ಲಿ ಆಗಮಿಸಿದ ಕಾಂಗ್ರೆಸ್ ಕಾರ್ಯಕರ್ತರು, ಶಿರಸ್ತೇದಾರ್ ಮೋಹನ್ ಅವರಿಗೆ ಮನವಿ ಸಲ್ಲಿಸಿದರು. ತಮಿಳುನಾಡಿಗೆ ನೀರು ಹರಿಸುವಂತೆ ಕಾವೇರಿ ಪ್ರಾಧಿಕಾರದ ತೀರ್ಪನ್ನು ಎತ್ತಿ ಹಿಡಿದಿರುವ ಸುಪ್ರೀಂಕೋರ್ಟ್ ಕಾವೇರಿ ಜಲಾನಯನ ಪ್ರದೇಶದ ಜನರಿಗೆ ಅನ್ಯಾಯ ಮಾಡಿದೆ. ಸುಪ್ರೀಂಕೋರ್ಟ್ ವಸ್ತುಸ್ಥಿತಿ ಅವಲೋಕಿಸಿ ತೀರ್ಪು ನೀಡಬೇಕಾಗಿತ್ತು. ಆದರೆ ಸುಪ್ರೀಂಕೋರ್ಟ್ ತೀರ್ಪಿನಿಂದ ಕರ್ನಾಟಕಕ್ಕೆ ಅನ್ಯಾಯವಾಗಿದೆ. ರಾಜ್ಯದಲ್ಲಿ ಕುಡಿಯುವ ನೀರಿಗೂ ಹಾಹಾಕಾರ ಎದುರಾಗುತ್ತಿದೆ. ಆದ್ದರಿಂದ ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಿ ಸಮಸ್ಯೆ ಬಗೆಹರಿಸಬೇಕು. ಅಲ್ಲದೇ ಕಾವೇರಿ ಪ್ರಾಧಿಕಾರದ ತೀರ್ಪನ್ನು ಮರು ಪರಿಶೀಲನೆ ಮಾಡುವಂತೆ ರಾಷ್ಟ್ರಪತಿಗಳನ್ನು ಒತ್ತಾಯಿಸಿದರು. ಇದೇ ವೇಳೆ ರಾಜ್ಯ ಕಾಂಗ್ರೆಸ್ ಕಿಸಾನ್ ಹಾಗೂ ತಾಲೂಕು ಕಿಸಾನ್ ಘಟಕದಿಂದಲೂ ಮನವಿ ಸಲ್ಲಿಸಲಾಯಿತು.

ಈ ವೇಳೆ ಟಿಎಪಿಸಿಎಂಎಸ್ ನಿರ್ದೇಶಕ ಶ್ರೀಕಾಂತ್, ಕಿಸಾನ್ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಕುಬೇರ್, ಜಿಲ್ಲಾ ಉಪಾಧ್ಯಕ್ಷ ಬಿ.ಜೆ.ಸ್ವಾಮಿ, ತಾಲೂಕು ಘಟಕದ ಅಧ್ಯಕ್ಷ ಸಿ.ಆರ್.ರಮೇಶ್, ಪುರಸಭೆ ಸದಸ್ಯರಾದ ಜಯಲಕ್ಷ್ಮಿ, ಉಮಾಶಂಕರ್, ಮುಖಂಡರಾದ ಗುಣಶೇಖರ್, ಮಹೇಶ್, ದಯಾನಂದ್, ಚಂದ್ರಶೇಖರ್, ಪಾಪು, ಲೋಕೇಶ್, ಚಿಕ್ಕಣ್ಣ, ಸಿದ್ದಲಿಂಗಯ್ಯ, ಬಸವರಾಜು, ದರ್ಶನ್, ಭರತ್, ದೊಡ್ಡವೆಂಕಟಯ್ಯ ಸೇರಿದಂತೆ ಹಲವರಿದ್ದರು.

ಸ್ಫೂರ್ತಿ ಸಹಕಾರ ಸಂಘದ ನೂತನ ಕಟ್ಟಡ ಉದ್ಘಾಟನೆ



ಭಾರತೀನಗರ, ಸೆ.22– ಸಹಕಾರ ಸಂಘಗಳು ಅಭಿವೃದ್ಧಿ ಹೊಂದಲು ಷೇರುದಾರರು ಕ್ರಿಯಾಶೀಲರಾಗಿರಬೇಕು ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ತಿಳಿಸಿದರು.

ಪಟ್ಟಣದಲ್ಲಿ ಸ್ಫೂರ್ತಿ ಪತ್ತಿನ ಸಹಕಾರ ಸಂಘದ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರ ಸಂಘಗಳು ಸಹಕಾರಿ ತತ್ವದಲ್ಲಿ ಸ್ಥಾಪನೆಯಾಗಿದೆ. ಪರಸ್ಪರ ಸಹಕಾರದ ಮೂಲಕ ಸಂಘಗಳು ಅಭಿವೃದ್ಧಿಯಾಗಬೇಕು. ಸಹಕಾರ ಸಂಘದಲ್ಲಿ ಮಾತ್ರ ಸುಲಭವಾಗಿ ಸಾಲ ಸಿಗಲಿದ್ದು, ಅದನ್ನು ಸದುಪಯೋಗಪಡಿಸಿಕೊಂಡು ಅಭಿವೃದ್ಧಿ ಹೊಂದಬೇಕು. ಹಳೇ ಮೈಸೂರು ಭಾಗದ ಸಹಕಾರ ಕ್ಷೇತ್ರ ಇನ್ನೂ ಹೆಚ್ಚಿನ ರೀತಿ ಅಭಿವೃದ್ಧಿ ಕಂಡರೆ ರೈತರು, ಬಡ ವ್ಯಾಪಾರಸ್ಥರಿಗೆ ಅನುಕೂಲವಾಗಲಿದೆ ಎಂದರು.

ಆದಿಚುಂಚನಗಿರಿ ಮಠದ ಪುರುಷೋತ್ತಮನಂದನಾಥ ಸ್ವಾಮೀಜಿ ಮಾತನಾಡಿ, ಸಹಕಾರ ಸಂಘಗಳನ್ನು ಕಟ್ಟುವುದು ಸುಲಭ ಅದನ್ನು ಬೆಳೆಸುವುದು ಬಹಳ ಕಷ್ಟಕರ. ಹೀಗಾಗಿ ಸಂಘದ ಆಡಳಿತ ಮಂಡಳಿ ಶಿಸ್ತಿನಿಂದ ಕೆಲಸ ಮಾಡಿದರೇ ಮಾತ್ರ ಸಂಘವನ್ನು ಅಭಿವೃದ್ಧಿಪಡಿಸಬಹುದು ಎಂದರು.ಸಹಕಾರ ಸಂಘದ ಅಧ್ಯಕ್ಷ ಕೆ.ಎಲ್.ಶಿವರಾಮು ಮಾತನಾಡಿದರು. ಈ ವೇಳೆ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಷೇರುದಾರರ ಮಕ್ಕಳನ್ನು ಅಭಿನಂದಿಸಲಾಯಿತು.

ಈ ಸಂದರ್ಭ ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಜ್ಯೋಗಿಗೌಡ, ಅಪೆಕ್ಸ್ ಬ್ಯಾಂಕ್ ನಿರ್ದೇಶಕ ಸಿ.ಅಶ್ವಥ್, ಹೆಚ್.ಕೆ.ಅಶೋಕ್, ಜೆಡಿಎಸ್ ತಾಲೂಕು ಅಧ್ಯಕ್ಷ ಚಿಕ್ಕತಿಮ್ಮೇಗೌಡ, ಸಂಘದ ಉಪಾಧ್ಯಕ್ಷ ಜಿ.ಎಸ್.ರವೀಂದ್ರ, ನಿರ್ದೇಶಕರಾದ ರಘು, ಶಿವರಾಜು, ಮಹೇಂದ್ರ, ಹರೀಶ್, ಮನೋಹರ್‌ಗೌಡ, ಸಿದ್ದರಾಮೇಗೌಡ, ಮಂಚಶೆಟ್ಟಿ, ನಾಗರಾಜು, ಸಿಇಓ ಅಜಯ್‌ಕುಮಾರ್, ಸಿಬ್ಬಂದಿಗಳಾದ ಜ್ಯೋತಿ, ಕುಮಾರ್ ಸೇರಿದಂತೆ ಹಲವರಿದ್ದರು.

ಕೆರೆ ಕಟ್ಟೆಗಳಿಗೆ ನೀರು ತುಂಬಿಸಲು ಒತ್ತಾಯಿಸಿ ಪ್ರತಿಭಟನೆ

ಕೆ.ಆರ್.ಪೇಟೆ, ಸೆ.22– ಕೆರೆ ಕಟ್ಟೆಗಳಿಗೆ ನೀರು ತುಂಬಿಸಲು ಒತ್ತಾಯಿಸಿ ಪಟ್ಟಣದ ಕಾವೇರಿ ನೀರಾವರಿ ನಿಗಮದ ಹೇಮಾವತಿ ಜಲಾಶಯ ಯೋಜನೆ ಕಚೇರಿಗೆ ರೈತರು ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ರೈತರು, ತಾಲೂಕಿನ ಹೇಮಾವತಿ ಎಡದಂಡೆ ನಾಲೆ ನಂ.20ರ ಕಚೇರಿ ವ್ಯಾಪ್ತಿಯ ಸಾಕಷ್ಟು ಕೆರೆ ಕಟ್ಟೆಗಳನ್ನು ತುಂಬಿಸಿರುವ ಅಧಿಕಾರಿಗಳು ಇದೇ ನಾಲಾ ವ್ಯಾಪ್ತಿಯ ಸಾಧುಗೋನಹಳ್ಳಿ, ಕತ್ತರಘಟ್ಟ, ಬಿಲ್ಲರಾಮನಹಳ್ಳಿ ಕೆರೆಗಳಿಗೆ ನೀರು ತುಂಬಿಸದ ಕಾರಣ ಜನಜಾನುವಾರುಗಳ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿದೆ. ಅಲ್ಲದೇ ಕೃಷಿ ಕೊಳವೆ ಬಾವಿಗಳಲ್ಲಿ ಅಂತರ್ಜಲ ಪಾತಾಳಕ್ಕೆ ಕುಸಿದಿದೆ. ಹೀಗಾಗಿ ನೀರಾವರಿ ಅಧಿಕಾರಿಗಳು ಗೊರೂರಿನ ಹೇಮಾವತಿ ಜಲಾಶಯದಿಂದ ಸಾಹುಕಾರ್ ಚನ್ನಯ್ಯ ಮುಖ್ಯ ನಾಲೆ ಮೂಲಕ ಸಾಧುಗೋನಹಳ್ಳಿ, ಬಿಲ್ಲರಾಮನಹಳ್ಳಿ, ಕತ್ತರಘಟ್ಟ ಸೇರಿದಂತೆ ಈ ಭಾಗದ ಕೆರೆಕಟ್ಟೆಗಳನ್ನು ತುಂಬಿಸುವ ಮೂಲಕ ಅನುಕೂಲ ಮಾಡಿಕೊಡಬೇಕು. ಅಲ್ಲದೇ ಬೆಳೆ ಸಂರಕ್ಷಣೆಗೆ ಮುಂದಾಗಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ರೈತರು ನೀರಾವರಿ ಇಲಾಖೆ ಇಂಜಿನಿಯರ್‌ಗೆ ಮನವಿ ಸಲ್ಲಿಸಿ ಕೂಡಲೇ ಸೂಕ್ತಕ್ರಮ ಕೈಗೊಂಡು ಕೆರೆ ಕಟ್ಟೆಗಳಿಗೆ ನೀರು ತುಂಬಿಸಲು ಮುಂದಾಗಬೇಕು. ಇಲ್ಲದಿದ್ದರೆ ಸೋಮವಾರ ರಸ್ತೆ ತಡೆ ಚಳವಳಿ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಪ್ರಗತಿಪರ ರೈತ ಮಂಜೇಗೌಡ, ರೈತ ಮುಖಂಡರಾದ ತಮ್ಮಯ್ಯ, ರವಿ, ಯೋಗೇಶ್, ಲೋಕಿ, ಶಿವರಾಮೇಗೌಡ, ಎಸ್.ಮಂಜೇಗೌಡ, ರಾಜೇಗೌಡ, ಚಂದ್ರೇಗೌಡ, ತಿಮ್ಮೇಗೌಡ, ಕೃಷ್ಣೇಗೌಡ, ರವಿಗೌಡ, ಎಸ್.ಎಸ್.ಪ್ರದೀಪ್, ಕೃಷ್ಣ, ಪುನೀತ್ ಸೇರಿದಂತೆ ನೂರಾರು ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.



ಅ.3, ಅಂಚೆ ಅದಾಲತ್

ಮಂಡ್ಯ, ಸೆ.22– ಭಾರತೀಯ ಅಂಚೆ ಇಲಾಖೆಯಿಂದ ಅ.3ರಂದು ಮಧ್ಯಾಹ್ನ 3 ಗಂಟೆಗೆ ಮಂಡ್ಯ ವಿಭಾಗದ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಅಂಚೆ ಅದಾಲತ್ ಏರ್ಪಡಿಸಲಾಗಿದೆ. ಸಾರ್ವಜನಿಕರು ಅಂಚೆ ಸೇವೆಗಳ ಬಗ್ಗೆ ಕುಂದು ಕೊರತೆಗಳಿದ್ದರೆ ಸೆ.27ರೊಳಗಾಗಿ ಅಂಚೆ ಅಧೀಕ್ಷಕರ ಕಚೇರಿಗೆ ಲಿಖಿತ ರೂಪದಲ್ಲಿ ತಲುಪಿಸುವಂತೆ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೂರನೇ ಪುಟದಿಂದ

ಜೆಡಿಎಸ್ ಈಗ ಎನ್‌ಡಿಎ ಬಳಗ

ಸೇರಿದಂತೆ ಕೆಲವು ಸೂಕ್ಷ್ಮ ಕ್ಷೇತ್ರಗಳಲ್ಲಿ ನಮಗೆ ಬೆಂಬಲ ನೀಡಿ. ನೀವು ರಾಯಚೂರು, ಕೊಪ್ಪಳ ಸೇರಿದಂತೆ ಹೆಚ್ಚು ಕಡೆ ಸ್ಪರ್ಧೆ ಮಾಡುವುದಾದರೆ ನಿಮಗೆ ನಾವು ಬೆಂಬಲ ನೀಡುತ್ತೇವೆ. ನಮ್ಮ ಗುರಿ ಏನಿದ್ದರೂ ಭ್ರಷ್ಟ ಸರ್ಕಾರ ಮತ್ತು ಪಕ್ಷದ ವಿರುದ್ಧ ಹೋರಾಟವಿರಬೇಕು. ಕಳೆದ ಮೂರು ವಿಧಾನಸಭೆ ಹಾಗೂ ಲೋಕಸಭೆ ಚುನಾವಣೆಯ ಶೇಕಡವಾರು ಮತಗಳಿಕೆ ಹಾಗೂ ಯಾವ ಯಾವ ಕ್ಷೇತ್ರದಲ್ಲಿ ಪ್ರಾಬಲ್ಯ ಹೊಂದಿದ್ದೇವೆ ಎಂಬ ಮಾಹಿತಿಯನ್ನು ನೀವು ನೋಡಿದ್ದೀರಿ. ಅದನ್ನು ನಾವು ಪರಿಗಣಿಸಿದ್ದೇವೆ ಎಂದಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ನೀವು ಹೈದರಾಬಾದ್ ಹಾಗೂ ಮಧ್ಯ ಕರ್ನಾಟಕದಲ್ಲಿ ಈ ಬಾರಿ ಪೈಪೋಟಿ ನೀಡಿದ್ದರಿಂದ ನಾವು 30 ಕ್ಷೇತ್ರ ಕಳೆದುಕೊಳ್ಳಬೇಕಾಯಿತು. ಅಲ್ಲೆಲ್ಲಾ ಕಾಂಗ್ರೆಸ್‌ಗೆ ಅನುಕೂಲವಾಗಿದೆ.

ಅದೇ ರೀತಿ ಹಳೇ ಮೈಸೂರು ಭಾಗದಲ್ಲಿ ನಾವು ಪ್ರಬಲವಾಗಿ ಹೋರಾಟ ನಡೆಸಿದ್ದರಿಂದ ನೀವು ಗಟ್ಟಿ ನೆಲೆಯಿದ್ದ ಕ್ಷೇತ್ರಗಳನ್ನು ಕಳೆದು ಕೊಂಡಿದ್ದೀರಿ. ನಮ್ಮ ಜಗಳದಿಂದ ಕಾಂಗ್ರೆಸ್‌ಗೆ ಲಾಭವಾಗಿದೆ.

ಚುನಾವಣಾ ಮೈತ್ರಿ ಅಷ್ಟೇ ಅಲ್ಲದೆ, ಸರ್ಕಾರದ ವಿರುದ್ಧ ಹೋರಾಟ, ಕರ್ನಾಟಕ ಬಿಜೆಪಿ ಸಂಘಟನೆಯ ಹಿನ್ನಡೆ ಬಗ್ಗೆಯೂ ಷಾ ಪ್ರಸ್ತಾಪಿಸಿರುವುದಲ್ಲದೆ, ಕುಮಾರಸ್ವಾಮಿ ಅವರಿಂದಲೂ ಕೆಲವು ಸಲಹೆ–ಸೂಚನೆಗಳನ್ನು ಪಡೆದುಕೊಂಡಿದ್ದಾರೆ.

ಜೆಡಿಎಸ್ ಜತೆಗಿನ ಮೈತ್ರಿಯನ್ನು ರಾಷ್ಟ್ರ ಮಟ್ಟದಲ್ಲಿ ಬಿಂಬಿಸಲು ದೆಹಲಿ ನಾಯಕರು ಮುಂದಾಗಿದ್ದರೂ ಈ ವಿಷಯದಲ್ಲಿ ರಾಜ್ಯ ಬಿಜೆಪಿ ನಾಯಕರನ್ನು ಸಂಪೂರ್ಣವಾಗಿ ಕಡೆಗಣಿಸಿದ್ದಾರೆ. ಹೀಗಾಗಿಯೇ ಬಿಜೆಪಿಯ ಸಂಘಟನೆಗೆ ಸಂಬಂಧಿಸಿದಂತೆ ಕುಮಾರಸ್ವಾಮಿ ಅವರಿಂದ ಮಾಹಿತಿ ಪಡೆದರು ಎನ್ನಲಾಗಿದೆ. ಸಿದ್ದರಾಮಯ್ಯ ಸರ್ಕಾರದ ವಿರುದ್ಧ ವಿಧಾನಸಭೆಯ ಹೊರಗೆ ಮತ್ತು ಒಳಗೆ ಹೋರಾಟದ ನೇತೃತ್ವವನ್ನು ಕುಮಾರಸ್ವಾಮಿ ಹಾಗೂ ಯಡಿಯೂರಪ್ಪ ಅವರಿಗೆ ವಹಿಸುವ ಬಗ್ಗೆಯೂ ಮಾತುಕತೆ ಸಂದರ್ಭದಲ್ಲಿ ಚರ್ಚೆಯಾಗಿದೆ.

ಕುಮಾರಸ್ವಾಮಿ ತಡರಾತ್ರಿ ಇಲ್ಲವೆ, ನಾಳೆ ಮುಂಜಾನೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ಔಪಚಾರಿಕವಾಗಿ ಮೈತ್ರಿ ಬಗ್ಗೆ ಚರ್ಚಿಸಲಿದ್ದಾರೆ.

ಅವಧಿ ರಾತ್ರಿ 8 ಗಂಟೆ ತನಕ ವಿಸ್ತರಣೆ

ನೋಂದಣಿಗೆ ಹಾಜರುಪಡಿಸುವ ದಸ್ತಾವೇಜುಗಳ ಸಂಖ್ಯೆ ಹೆಚ್ಚಾಗುತ್ತದೆ. ಈ ಹಿನ್ನೆಲೆ ಸಾರ್ವಜನಿಕರ ಹಿತದೃಷ್ಟಿಯಿಂದ ರಾಜ್ಯದ ಎಲ್ಲಾ ಉಪ ನೋಂದಣಾಧಿಕಾರಿ ಕಚೇರಿಯ ಕೆಲಸದ ಅವಧಿ ವಿಸ್ತರಿಸಲಾಗಿದೆ ಎಂದು ಹೇಳಿದ್ದಾರೆ. ಈ ಕೆಲಸದ ಅವಧಿಯ ವಿಸ್ತರಣೆ ಸೆಪ್ಟೆಂಬರ್ 30ರವರೆಗೆ ಮಾತ್ರ ಜಾರಿಯಲ್ಲಿರುತ್ತದೆ ಎಂದು ಮಮತಾ ಸ್ಪಷ್ಟಪಡಿಸಿದ್ದಾರೆ.

ಹಗರಣದ ಬಗ್ಗೆ ಸಮಗ್ರ ತನಿಖೆ

ಬಿಜೆಪಿಯವರ ಹಾಗೆ ಚುನಾವಣೆಗೆ ಹೆದರಿ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂದು ತಿಳಿಸಿದರು. ಆಸ್ತಿ ಮಾರ್ಗಸೂಚಿ ದರ ಹೆಚ್ಚಳ ವೈಜ್ಞಾನಿಕವಾಗಿದೆ. ನಮ್ಮ ಸರ್ಕಾರದ ಅವಧಿಯಲ್ಲಿ ಸಾರ್ವಜನಿಕರಿಗೆ ತೊಂದರೆ ಆಗುವ ಹಾಗೆ ತೆರಿಗೆ ಹೇರಿಲ್ಲ. ಬಿಜೆಪಿಯವರು ಸುಖಾ ಸುಮ್ಮನೆ ಆರೋಪ ಮಾಡುತ್ತಿದ್ದಾರೆ. ತೆರಿಗೆ ಹೆಚ್ಚು ಮಾಡುವುದು ಅಥವಾ ಕಡಿಮೆ ಮಾಡುವುದು ಸರ್ಕಾರದ ವಿವೇಚನೆಗೆ ಬಿಟ್ಟ ವಿಚಾರ. ಇವರ ಸರ್ಕಾರದ ಅವಧಿಯಲ್ಲಿ ಕೂಡ ನಾನಾ ತೆರಿಗೆ ಹೆಚ್ಚಳ ಮಾಡಲಾಗಿತ್ತು ಎಂಬುದನ್ನು ಅವರು ಮರೆಯಬಾರದು ಎಂದು ಭೈರತಿ ಸುರೇಶ್ ಆರೋಪಿಸಿದರು.

ಬಿಜೆಪಿಯವರಂತೆ ನಾವು 40 ಪರ್ಸೆಂಟ್ ಕಮಿಷನ್ ತೆಗೆದುಕೊಳ್ಳುವುದಿಲ್ಲ. ಈಗ ತಮಗೆ ಕಮಿಷನ್ ಸಿಗುತ್ತಿಲ್ಲ ಎಂಬ ಕಾರಣಕ್ಕೆ ಬಿಜೆಪಿಯವರು ನಮ್ಮ ವಿರುದ್ಧ ಆಧಾರರಹಿತ ಆರೋಪ ಮಾಡುತ್ತಿದ್ದಾರೆ. ಇಂತಹ ವರ್ತನೆಯಿಂದಲೇ ಬಿಜೆಪಿ ಹಾಗೂ ಜೆಡಿಎಸ್ ಪಕ್ಷವನ್ನು ಜನರು ಅಧಿಕಾರದಿಂದ ದೂರ ಇಟ್ಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಬರದ ಹಿನ್ನೆಲೆ ಮೈಸೂರು ದಸರಾವನ್ನು ಸಾಂಪ್ರದಾಯಿಕವಾಗಿ ಆಚರಣೆ ಮಾಡಲಾಗುವುದು ಎಂದು ಇದೇ ವೇಳೆ ತಿಳಿಸಿದರು. ರಾಜ್ಯ ಸರ್ಕಾರದಲ್ಲಿ ಮೂವರು ಉಪ ಮುಖ್ಯಮಂತ್ರಿಗಳನ್ನು ನೇಮಕ ಮಾಡುವುದು ಹೈಕಮಾಂಡ್ ತೀರ್ಮಾನಕ್ಕೆ ಬಿಟ್ಟ ವಿಚಾರ. ಇದರಲ್ಲಿ ನನ್ನ ವೈಯಕ್ತಿಕ ಅಭಿಪ್ರಾಯವಿಲ್ಲ ಎಂದು ಭೈರತಿ ಸುರೇಶ್ ಸ್ಪಷ್ಟನೆ ನೀಡಿದರು. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಕುಡಿಯುವ ನೀರಿಗೆ ತೊಂದರೆ ಆಗಬಹುದು. ಈ ಹಿನ್ನೆಲೆಯಲ್ಲಿ ಬೋರ್‌ವೆಲ್‌ನಿಂದ ನೀರು ಪೂರೈಕೆ ಹಾಗೂ ಟ್ಯಾಂಕರ್‌ಗಳಿಂದ ನೀರು ಸರಬರಾಜು ಸೇರಿದಂತೆ ಹಲವು ಪರ್ಯಾಯ ಮಾರ್ಗಗಳ ಬಗ್ಗೆ ಇಂದಿನ ಅಧಿಕಾರಿಗಳ ಸಭೆಯಲ್ಲಿ ಚರ್ಚೆ ಮಾಡುತ್ತೇನೆ ಎಂದು ತಿಳಿಸಿದರು. ಬೋರ್‌ವೆಲ್ ರಿಪೇರಿ ಹಾಗೂ ಟ್ಯಾಂಕರ್‌ನಿಂದ ಕುಡಿಯುವ ನೀರು ಸರಬರಾಜು ಮಾಡಲು ಈಗಾಗಲೇ ನಗರಾಭಿವೃದ್ಧಿ ಇಲಾಖೆಯು ಪ್ರತಿ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ 30 ಕೋಟಿ ರೂಪಾಯಿ ನೀಡಿದೆ ಎಂದು ಭೈರತಿ ಸುರೇಶ್ ಹೇಳಿದರು.

ಕಾವೇರಿ ವಿಚಾರವಾಗಿ ಬೆಂಗಳೂರು ಜನರು ದನಿ ಎತ್ತುತ್ತಿಲ್ಲ ಎಂಬ ರೈತರ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ಭೈರತಿ ಸುರೇಶ್, ಕಾವೇರಿ ವಿಚಾರವಾಗಿ ಬೆಂಗಳೂರು ನಗರದವರು ಮಾತ್ರವಲ್ಲದೆ ರಾಜ್ಯದ ಎಲ್ಲರೂ ದನಿ ಎತ್ತುತ್ತಿದ್ದಾರೆ. ಪ್ರತಿ ದಿನ 5 ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಮಾಡುವಂತೆ ಸುಪ್ರೀಂಕೋರ್ಟ್ ಆದೇಶ ನೀಡಿದೆ. ಆದರೆ ರಾಜ್ಯದ ರೈತರ ಹಿತ ಕಾಪಾಡುವ ನಿಟ್ಟಿನಲ್ಲಿ ಏನು ಮಾಡಬೇಕೆಂಬ ಬಗ್ಗೆ ಸಂಪುಟ ಸಭೆಯಲ್ಲಿ ಸೂಕ್ತ ತೀರ್ಮಾನ ಮಾಡಲಾಗುವುದು ಎಂತು ಭೈರತಿ ಸುರೇಶ್ ಸ್ಪಷ್ಟಪಡಿಸಿದರು.

ಮಂಡ್ಯದಲ್ಲಿ ತಾರಕಕ್ಕೇರಿದ ಕಾವೇರಿ ಹೋರಾಟ: ಚುಂಚಶ್ರೀಗಳು ಭಾಗಿ

ನಿಗದಿ ಮಾಡಲಾಗಿದೆ. ಆದರೆ ಮಳೆ ಕಡಿಮೆ ಆದ ಸಂದರ್ಭದಲ್ಲಿ ಸಂಕಷ್ಟ ಸೂತ್ರ ರಚಿಸಬೇಕಿತ್ತು. ಆದರೆ ಸಂಬಂಧಿಸಿದವರು ಈ ಕೆಲಸ ಮಾಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಪ್ರಸ್ತುತ ಕೆಆರ್‌ಎಸ್‌ನಲ್ಲಿ ನೀರಿನ ಪ್ರಮಾಣ ಕಡಿಮೆ ಇದ್ದು, ಕುಡಿಯುವ ನೀರಿಗೆ ಸಮಸ್ಯೆ ಇದೆ. ಸುಪ್ರೀಂಕೋರ್ಟ್ ಆದೇಶ ನೀಡುವ ಮುನ್ನಾ ನಮ್ಮ ನೋವನ್ನು ಕೇಳಬೇಕಿತ್ತು. ಈಗಾಗಲೇ ತಮಿಳುನಾಡಿಗೆ ಸಾಕಷ್ಟು ನೀರು ಹರಿಸಲಾಗಿದೆ. ಇದೀಗ ಮತ್ತೆ 15 ದಿನ 5 ಸಾವಿರ ಕ್ಯುಸೆಕ್ ನೀರು ಹರಿಸಲು ಆದೇಶ ನೀಡಿದ್ದಾರೆ. ಆದೇಶದಂತೆ ನೀರು ಹರಿದರೆ ಡ್ಯಾಂನಲ್ಲಿ ನೀರು ಉಳಿಯುವುದಿಲ್ಲ ಎಂದು ಆತಂಕ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ನಮ್ಮ ರೈತರ ಹಿತ ಕಾಯಬೇಕು. ಸದ್ಯ ಸಂಕಷ್ಟದ ಪರಿಸ್ಥಿತಿ ಎದುರಾಗಿದೆ. ರಾಜ್ಯ ಹಾಗೂ ಕೇಂದ್ರ ಸರ್ಕಾರದ ಮಂತ್ರಿಗಳೊಂದಿಗೆ ನಾನು ಮಾತನಾಡುತ್ತೇನೆ. ಸಂಕಷ್ಟ ಸೂತ್ರಕ್ಕಾಗಿ ಒತ್ತಾಯಿಸುತ್ತೇನೆ. ಮೇಕೆದಾಟು ಯೋಜನೆ ಜಾರಿಯಾಗಬೇಕು. ಮಳೆ ಬಿದ್ದಾಗ ಹೆಚ್ಚುವರಿ ನೀರು ಸಂಗ್ರಹಿಸಿದ್ದರೆ, ಇಂತಹ ಕಷ್ಟ ಕಾಲದಲ್ಲಿ ಹರಿಸಬಹುದು. ಎರಡು ರಾಜ್ಯಗಳಿಗೂ ಮೇಕೆದಾಟು ಯೋಜನೆ ಸಹಕಾರಿಯಾಗಲಿದೆ ಎಂದರು.

ಸರ್ಕಾರ ಸುಗ್ರೀವಾಜ್ಞೆ ತರಲಿ: ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ಸರ್ಕಾರ ಸುಗ್ರೀವಾಜ್ಞೆ ತರುವ ಮೂಲಕ ನೀರು ನಿಲ್ಲಿಸುವ ಕೆಲಸ ಮಾಡಬೇಕು. ಕೇಂದ್ರ ಸರ್ಕಾರ ಕೂಡಲೇ ಮಧ್ಯ ಪ್ರವೇಶಿಸಿ ಸಮಸ್ಯೆ ಬಗೆಹರಿಸಬೇಕು. ಈ ಹಿಂದೆ ಮಾಜಿ ಸಿಎಂ ಬಂಗಾರಪ್ಪ ಕೋರ್ಟ್ ಆದೇಶ ಮೀರಿ ನೀರು ನಿಲ್ಲಿಸಿದ್ದರು. ವಾಸ್ತವ ಸ್ಥಿತಿಯನ್ನು ಕೋರ್ಟ್ ಅರ್ಥೈಸಿಕೊಳ್ಳಬೇಕು. ಮಾತುಕತೆ ಮೂಲಕ ಸಮಸ್ಯೆ ಪರಿಹಾರಕ್ಕೆ ಮುಂದಾಗಬೇಕು. ನಮಗೇ ಕುಡಿಯುವ ನೀರು ಇಲ್ಲದಿದ್ದಾಗ ತಮಿಳುನಾಡಿನ ಬೆಳೆಗೆ ನೀರು ಕೊಡಲು ಹೇಗೆ ಸಾಧ್ಯ? ಈ ಬಗ್ಗೆ ಸರ್ಕಾರ ಗಟ್ಟಿ ನಿಲುವು ತೆಗೆದುಕೊಳ್ಳಬೇಕು. ಕೇಂದ್ರ ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ಮಾತುಕತೆ ನಡೆಸಬೇಕೆಂದು ಆಗ್ರಹಿಸಿದರು.

ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಲಿ: ಕಸಾಪ ಅಧ್ಯಕ್ಷ ಮಹೇಶ್ ಜೋಷಿ ಮಾತನಾಡಿ, ಸುಪ್ರೀಂಕೋರ್ಟ್‌ನಲ್ಲಿ ರಾಜ್ಯ ಸರ್ಕಾರ ಸಮರ್ಥವಾಗಿ ವಾದ ಮಂಡಿಸಿಲ್ಲ. ನಿನ್ನೆಯ ಸುಪ್ರೀಂಕೋರ್ಟ್ ಆದೇಶ ಕರ್ನಾಟಕದ ಪಾಲಿಗೆ ಬರದ ಶಾಸನ. ಕಾವೇರಿ ವಿಚಾರದಲ್ಲಿ ಕಾನೂನಿನಿಂದ ನ್ಯಾಯ ಸಿಗುವುದಿಲ್ಲ. ಮಾತುಕತೆ ಮೂಲಕ ರಾಜ್ಯ ಸರ್ಕಾರ ವಿವಾದ ಬಗೆಹರಿಸಿಕೊಳ್ಳಬೇಕು. ಕೇಂದ ಸರ್ಕಾರ ಕಾವೇರಿ ನೀರಿನ ವಿಚಾರದಲ್ಲಿ ಮಧ್ಯ ಪ್ರವೇಶಿಸಬೇಕು. ಎರಡೂ ರಾಜ್ಯಗಳೊಂದಿಗೆ ಮಾತುಕತೆ ನಡೆಸಬೇಕು. ರಾಜ್ಯದ ಕೇಂದ್ರ ಸಚಿವರು ಸರ್ಕಾರದ ಮೇಲೆ ಒತ್ತಡ ಹಾಕಬೇಕು ಎಂದು ಒತ್ತಾಯಿಸಿದರು. ನಟ ಅಭಿಷೇಕ್ ಅಂಬರೀಷ್ ಮಾತನಾಡಿ, ನಾನು ಕಾವೇರಿ ಹೋರಾಟ ನೋಡಿ ಬೆಳೆದವನು. ಅಪ್ಪಾಜಿ, ಅಮ್ಮ ಎಲ್ಲರೂ ಕಾವೇರಿ ಪರ ಹೋರಾಟ ಮಾಡಿದ್ದಾರೆ. ದೆಹಲಿಯಲ್ಲಿ ಈ ಬಗ್ಗೆ ಚರ್ಚೆ ಮಾಡುವ ಕೆಲಸವನ್ನು ಸುಮಲತಾ ಮಾಡುತ್ತಿದ್ದಾರೆ. ಈಗ ನೀರು ಬಿಟ್ಟರೆ ಮುಂದೆ ಕುಡಿಯುವ ನೀರಿಗೂ ತೊಂದರೆಯಾಗುತ್ತದೆ. ಕಾವೇರಿ ವಿಚಾರದಲ್ಲಿ ಜನಕ್ಕೆ ನ್ಯಾಯ ಸಿಗಬೇಕು. ಚಿತ್ರರಂಗ ಈ ವಿಚಾರದಲ್ಲಿ ಯಾವಾಗಲೂ ಇದ್ದೇ ಇರುತ್ತದೆ. ಶೀಘ್ರ ಅದಕ್ಕೆ ಒಂದು ವೇದಿಕೆ ಸಿದ್ಧವಾಗಲಿದೆ ಎಂದರು.

ಪ್ರತಿಭಟನೆಯಲ್ಲಿ ಆದಿಚುಂಚನಗಿರಿ ಮಠದ ಪುರುಷೋತ್ತಮನಂದಶ್ರೀ, ಸೋಮೇಶ್ವರನಾಥ ಸ್ವಾಮೀಜಿ, ಸೌಮ್ಯನಾಥ ಸ್ವಾಮೀಜಿ, ಅನ್ನದಾನೇಶ್ವರ ಸ್ವಾಮೀಜಿ, ಮಾಜಿ ಶಾಸಕರಾದ ಎಂ.ಎಸ್.ಆತ್ಮಾನಂದ, ಡಾ.ಕೆ.ಅನ್ನದಾನಿ, ಜಿ.ಬಿ.ಶಿವಕುಮಾರ್, ಕೆ.ಟಿ.ಶ್ರೀಕಂಠೇಗೌಡ, ರೈತ ಹಿತರಕ್ಷಣಾ ಸಮಿತಿ ಮುಖಂಡರಾದ ಸುನಂದಾ ಜಯರಾಂ, ಬೋರಯ್ಯ, ಚಂದ್ರಶೇಖರ್, ಕಾವೇರಿ ಹೋರಾಟಗಾರರಾದ ತಗ್ಗಹಳ್ಳಿ ವೆಂಕಟೇಶ್, ಕನ್ನಡಸೇನೆ ಮಂಜು, ದಸಂಸ ಕೃಷ್ಣ, ಪ್ರೊ.ಬಿ.ಶಿವಲಿಂಗಯ್ಯ, ಮೀರಾ ಶಿವಲಿಂಗಯ್ಯ, ಪ್ರೊ.ಎಚ್.ಎಸ್.ಮುದ್ದೇಗೌಡ, ಕರವೇ ಶಂಕರೇಗೌಡ, ಅಶೋಕ್ ಜಯರಾಂ, ಸಿ.ಟಿ.ಮಂಜುನಾಥ್, ನೀನಾ ಪಟೇಲ್ ಸೇರಿದಂತೆ ನೂರಾರು ಮಂದಿ ಭಾಗವಹಿಸಿದ್ದರು.

ಜಲಮಂಡಳಿಗೆ ಮುತ್ತಿಗೆ: ಕರವೇ ಕಾರ್ಯಕರ್ತರ ಬಂಧನ



ಹಲಗೂರು: ಬೆಂಗಳೂರಿಗೆ ಕಾವೇರಿ ನೀರು ಸರಬರಾಜು ಮಾಡುವ ಜಿಲ್ಲೆಯ ಮಳವಳ್ಳಿ ತಾಲೂಕಿನ ಹಲಗೂರು ಬಳಿಯ ತೊರೆಕಾಡನಹಳ್ಳಿಯ ಬೆಂಗಳೂರು ಜಲ ಮಂಡಳಿ ಮುಖ್ಯದ್ವಾರದ ಮುಂದೆ ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ವಿವಿಧ ಸಂಘಟನೆಯ ಕಾರ್ಯಕರ್ತರು ಶುಕ್ರವಾರ ಮುತ್ತಿಗೆ ಹಾಕಿದರು.

ಕಾವೇರಿ ನೀರಿನ ಹೋರಾಟ ಪ್ರಾರಂಭವಾಗಿ 30 ದಿನಗಳ ಕಳೆದರೂ ಇದುವರೆಗೂ ಕಾವೇರಿ ನೀರನ್ನು ಕುಡಿಯುತ್ತಿರುವ ಬೆಂಗಳೂರಿನ ಜನ ಕಾವೇರಿ ನೀರಿನ ವಿಷಯದಲ್ಲಿ ಯಾವುದೇ ರೀತಿಯ ದನಿಯನ್ನು ಎತ್ತದೆ ರೈತರಿಗೆ ಬೆಂಬಲವನ್ನು ನೀಡದೆ ಸರ್ಕಾರ ಹಾಗೂ ಜನಪ್ರತಿನಿಧಿಗಳನ್ನು ಪ್ರಶ್ನಿಸದೇ ಸುಮ್ಮನಿರುವ ಕಾರಣ ಬೆಂಗಳೂರಿಗೆ ಪೂರೈಕೆ ಮಾಡುತ್ತಿರುವ ಕುಡಿಯುವ ನೀರನ್ನು ನಿಲ್ಲಸಬೇಕೆಂದು ಒತ್ತಾಯಿಸಿದರು. ಮಂಡ್ಯ ಜಿಲ್ಲೆಯ ಜನ ವ್ಯವಸಾಯಕ್ಕೆ ನೀರಿಲ್ಲದೆ ಹಪಹಪಿಸುತ್ತಿರುವಾಗ ರೈತರ ಬೆಂಬಲಕ್ಕೆ ನಿಲ್ಲದ ಬೆಂಗಳೂರಿಗರಿಗೆ ಯಾವುದೇ ಕಾರಣಕ್ಕೂ ಕುಡಿಯಲು ನೀರನ್ನು ನೀಡಬಾರದು. ಬೆಂಗಳೂರಿಗೆ ಕುಡಿಯಲು ನೀಡುತ್ತಿರುವ ನೀರನ್ನು ನಿಲ್ಲಿಸಬೇಕು ಅದೇ ನೀರನ್ನು ಮಂಡ್ಯ ಜಿಲ್ಲೆಯ ರೈತರ ಬೆಳೆಗೆ ನೀಡಬೇಕು. ರಾಜಧಾನಿ ಬೆಂಗಳೂರಿನಲ್ಲಿ 2 ಕೋಟಿಗೂ ಅಧಿಕ ಜನರಿದ್ದು, ತಿಂಗಳಿಗೆ 2 ಟಿಎಂಸಿ ನೀರು ಬೆಂಗಳೂರಿಗೆ ಬೇಕಾಗಿದೆ. ಹೀಗಿದ್ದರೂ ಅಲ್ಲಿನ ಜನ ಹೋರಾಟಕ್ಕೆ ಇಳಿಯದಿರುವುದು ಬೇಸರದ ಸಂಗತಿ ಎಂದರು. ಪ್ರತಿಭಟನೆ ಬಳಿಕ ಜಲಮಂಡಳಿ ಗೇಟ್ ಹತ್ತಿ ಪಂಪ್‌ಹೌಸ್‌ನ ಒಳ ನುಗ್ಗಲು ಯತ್ನಿಸಿದ ಹೋರಾಟಗಾರರನ್ನು ಪೊಲೀಸರು ಬಂಧಿಸಿದರು. ಪ್ರತಿಭಟನೆ ಹಿನ್ನಲೆಯಲ್ಲಿ ಜಲಮಂಡಳಿಗೆ ಪೊಲೀಸ್ ಭದ್ರತೆ ಕೈಗೊಳ್ಳಲಾಗಿದೆ. ಪ್ರತಿಭಟನೆಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಮುಖಂಡರಾದ ಕನ್ನಡ ಪ್ರಕಾಶ್, ಕನ್ನಡ ಗಿರಿ, ರಶ್ಮಿ, ನಿಖಿಲ್‌ಗೌಡ, ಮಾದೇಶ್‌ಗೌಡ, ಜಯಶಂಕರ್, ಅಪ್ಪಾಜಿ, ಮೋಹನ್, ಲೋಕೇಶ್‌ಗೌಡ ಇತರರು ಭಾಗವಹಿಸಿದ್ದರು.

ಏಜೆನ್ಸಿಗಳ ಬ್ಲಾಕ್ ಲಿಸ್ಟ್‌ಗೆ ಸೇರಿಸಿ

ಭೈರತಿ ಸುರೇಶ್, ಕಡಿಮೆ ದರದಲ್ಲಿ ಊಟ,ತಿಂಡಿ ನೀಡುವುದು ನಮ್ಮ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಅಗತ್ಯ ಇರುವ ಕಡೆ ಇಂದಿರಾ ಕ್ಯಾಂಟೀನ್ ತೆರೆಯಿರಿ ಎಂದು ಸಲಹೆ ನೀಡಿದರು.

ಇಂದಿರಾ ಕ್ಯಾಂಟೀನ್‌ಗೆ ಜಾಗ ಇಲ್ಲದಿದ್ದರೆ ಮೊಬೈಲ್ ಕ್ಯಾಂಟೀನ್ ಮಾಡಲು ಅವಕಾಶವಿದೆ ಎಂದು ತಿಳಿಸಿದ ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಅಜಯ್ ನಾಗಭೂಷಣ್, ಇಂದಿರಾ ಕ್ಯಾಂಟೀನ್‌ಗಳಲ್ಲಿ ಬೆಳಿಗ್ಗೆ 150 ಗ್ರಾಂ, ಮಧ್ಯಾಹ್ನ ಮತ್ತು ಸಂಜೆ 250 ಗ್ರಾಂ ಬೇಯಿಸಿದ ಆಹಾರ ನೀಡಬೇಕು ಎಂದು ಸೂಚಿಸಿದರು.

ಬೋರ್‌ವೆಲ್ ಬಾಡಿಗೆಗೆ ಪಡೆಯಿರಿ: ನಂತರ ಮಾತನಾಡಿದ ಭೈರತಿ ಸುರೇಶ್, ಕುಡಿಯುವ ನೀರಿಗೆ ತೊಂದರೆಯಾದರೆ ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆಗೆ ಪಡೆಯಿರಿ. ಕುಡಿಯುವ ನೀರಿನ ಪೂರೈಕೆಗೆ ಅಗತ್ಯ ಕ್ರಿಯಾ ಯೋಜನೆ ರೂಪಿಸಿ. ಈ ಮೂಲಕ ಕುಡಿಯುವ ನೀರಿಗೆ ತೊಂದರೆ ಆಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಿ. ಆರ್‌ಓ ಪ್ಲಾಂಟ್‌ಗಳು ರಿಪೇರಿಯಲ್ಲಿದ್ದರೆ, ಕೂಡಲೇ ಹೊಸ ಆರ್‌ಓ ಪ್ಲಾಂಟ್‌ಗಳನ್ನು ಅಳವಡಿಸಿ. ಕುಡಿಯುವ ನೀರಿನ ಓವರ್ ಹೆಡ್ ಟ್ಯಾಂಕ್‌ಗಳನ್ನು ವರ್ಷದಲ್ಲಿ ಎರಡು ಬಾರಿ ಕಡ್ಡಾಯವಾಗಿ ಶುಚ್ಚಿಗೊಳಿಸಿ ಎಂದು ಆದೇಶ ನೀಡಿದರು.

ನಗರ ಪಾಲಿಕೆ ಸೇರಿದಂತೆ ಸ್ಥಳಿಯ ಸಂಸ್ಥೆಗಳು ಕಸ ವಿಲೇವಾರಿ ನಿರ್ವಹಣೆಯನ್ನು ಸಮರ್ಪಕವಾಗಿ ಮಾಡಬೇಕು. ಪೌರ ಕಾರ್ಮಿಕರಿಗೆ ಸುರಕ್ಷಿತ ಪರಿಕರಗಳನ್ನು ವಿತರಣೆ ಮಾಡಬೇಕು. ಜೊತೆಗೆ ಸಕಾಲದಲ್ಲಿ ಅವರಿಗೆ ವೇತನ ನೀಡಬೇಕು ಎಂದು ಸೂಚನೆ ನೀಡಿದರು.

ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕಿ ಮಂಜುಶ್ರೀ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವ್ಯವಸ್ಥಾಪಕ ನಿರ್ದೇಶಕ ಬಿ.ಶರತ್, ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ವ್ಯವಸ್ಥಾಪಕ ನಿರ್ದೇಶಕಿ ದೀಪಾ ಚೋಳನ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

ಮೈಸೂರಿನ ಮೂರು ಸ್ಥಳದಲ್ಲಿ ಮೊಬೈಲ್ ಇಂದಿರಾ ಕ್ಯಾಂಟೀನ್

ಈ ಸಂದರ್ಭದಲ್ಲಿ ಮಾತನಾಡಿದ ಮೈಸೂರು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಮೈಸೂರು ಜಿಲ್ಲೆಯಲ್ಲಿ ಒಟ್ಟು 16 ಇಂದಿರಾ ಕ್ಯಾಂಟೀನ್‌ಗಳಿದ್ದು, ಇನ್ನು 13 ಇಂದಿರಾ ಕ್ಯಾಂಟೀನ್ ತೆರೆಯಲು ಜಾಗ ಗುರುತಿಸಲಾಗಿದೆ. ಇದಲ್ಲದೆ ಹೆಚ್ಚುವರಿ 10 ಇಂದಿರಾ ಕ್ಯಾಂಟೀನ್ ಸ್ಥಾಪನೆಗೆ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು. ಮೈಸೂರಿನ ಚಾಮುಂಡಿ ಬೆಟ್ಟ, ಅರಮನೆ ಹಾಗೂ ಮೃಗಾಲಯದ ಬಳಿ ಮೊಬೈಲ್ ಕ್ಯಾಂಟೀನ್ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಡಾ. ರಾಜೇಂದ್ರ ಹೇಳಿದರು.

ಮಾಜಿ ಸಿಎಂ ಕುಮಾರಸ್ವಾಮಿ ಭಾಗಿ

ಜಲ ಸಂಕಷ್ಟದ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ವಿಸ್ತೃತವಾಗಿ ಚರ್ಚೆ ನಡೆಸಿದ್ದೇನೆ. ಅಮಿತ್ ಶಾ ಅವರಿಗೆ ರಾಜ್ಯದ ಕಾವೇರಿ ಕುರಿತ ವಾಸ್ತವ ಸ್ಥಿತಿಯನ್ನು ವಿವರಿಸಿದ್ದೇನೆ. ಕಾವೇರಿ ಸಮಸ್ಯೆ, ಬರ ಇತ್ಯಾದಿ ವಿಷಯಗಳ ಬಗ್ಗೆ ಅವರಿಗೆ ಮಾಹಿತಿ ನೀಡಿದ್ದೇನೆ. ಕಾವೇರಿ ನದಿ ನೀರಿನ ವಿಷಯದಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ಬಹಳ ಅಸಡ್ಡೆ ಪ್ರದರ್ಶಿಸಿದೆ. ಕನ್ನಡನಾಡಿನ ರೈತರು, ಜನರ ವಿಷಯದಲ್ಲಿ ಚೆಲ್ಲಾಟವಾಡಿದೆ ಎಂದು ಕಿಡಿಕಾರಿದ್ದಾರೆ. ಒಂದು ಕಡೆ ನೀರಿಲ್ಲ ಎಂದು ಸರ್ಕಾರವೇ ಹೇಳುತ್ತದೆ. ಇನ್ನೊಂದೆಡೆ ತಮಿಳುನಾಡಿಗೆ ನೀರು ಹರಿಸುತ್ತದೆ. ಸುಪ್ರೀಂಕೋರ್ಟ್ ಮುಂದೆ ಅತ್ಯಂತ ತಡವಾಗಿ ಅರ್ಜಿಯನ್ನು ಹಾಕಿದೆ. ರೈತರ ಬಗ್ಗೆ ಇವರಿಗೆ ಬದ್ಧತೆ ಎನ್ನುವುದು ಇದ್ದಿದ್ದರೆ ಅರ್ಜಿ ಸಲ್ಲಿಸುವ ಬಗ್ಗೆ ವಿಳಂಬ ಮಾಡುತ್ತಿರಲಿಲ್ಲ ಎಂದು ದೂರಿದ್ದಾರೆ. ರೈತರ ಹಿತರಕ್ಷಣೆ ಮಾಡುವ ಕೆಲಸ ಮಾಡಬೇಕು. ಬೆಂಗಳೂರು ನಗರಕ್ಕೆ ಕುಡಿಯುವ ನೀರಿನ ಅಗತ್ಯವಿದೆ. ಕನ್ನಡಿಗರ ಹಿತ ಕಡೆಗಣಿಸಿ ತಮಿಳುನಾಡಿಗೆ ನೀರು ಬಿಡಬೇಡಿ ಎಂದು ನಾನು ಸಲಹೆ ಮಾಡಿದ್ದೆ. ಆದರೆ ಸರ್ಕಾರ ನನ್ನ ಮಾತನ್ನು ಕೇಳಲಿಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದ್ದಾರೆ.

ಪಾರಾಗಲು ತಮಿಳ್ನಾಡಿಗೆ ನೀರು

ಕೂಡ ನಾವು ಈವರೆಗೆ ಕಾಪಾಡಿದ್ದೇವೆ. 2,500–3,000 ಕ್ಯೂಸೆಕ್ ನೀರು ಹೊರಗಡೆ ಸಾಮಾನ್ಯವಾಗಿ ತಮಿಳುನಾಡಿಗೆ ಹೋಗೇ ಹೋಗುತ್ತದೆ. ಕುಡಿಯುವ ನೀರಿನ ವಿಚಾರದಲ್ಲೂ ನಾವು ರಾಜ್ಯದ ಜನರನ್ನು ರಕ್ಷಣೆ ಮಾಡುತ್ತೇವೆ ಎಂದರು.

ಬರ ಘೋಷಣೆಗೆ ಒಪ್ಪಿಗೆ: 195 ತಾಲೂಕುಗಳ ಬರ ಘೋಷಣೆಗೆ ಸಚಿವ ಸಂಪುಟ ಒಪ್ಪಿಗೆ ಸೂಚಿಸಿದ್ದು, 30,432 ಕೋಟಿ ರೂ. ಹಾನಿಯಾಗಿದೆ ಎಂದು ಅಂದಾಜಿಸಲಾಗಿದೆ. ರಾಜ್ಯದಲ್ಲಿ 39,074 ಹೆಕ್ಟೇರ್ ಕೃಷಿ ಬೆಳೆಯ ನಷ್ಟವಾಗಿದೆ. ಇದಕ್ಕಾಗಿ 3,827 ಕೋಟಿ ರೂ. ಪರಿಹಾರಕ್ಕಾಗಿ ಕೇಂದ್ರ ಸರ್ಕಾರವನ್ನು ಕೋರಲಾಗಿದೆ. ಬರದ ವಿಚಾರದಲ್ಲಿ ಒಟ್ಟು 22 ವಿಷಯಗಳನ್ನು ಪರಿಗಣಿಸಿ ನಿರ್ಣಯ ಮಾಡಲಾಗಿದೆ ಎಂದು ಸಚಿವ ಸಂಪುಟ ಸಭೆ ಬಳಿಕ ಮಾತನಾಡಿದ ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದರು.

ಕಾವೇರಿ ಜಲ ವಿವಾದ ಸಂಬಂಧ ಕೆಲವೆಡೆ ಬಂದ್‌ಗೆ ಕರೆ ಹಿನ್ನೆಲೆ
ಎಲ್ಲೆಡೆ ಅಗತ್ಯ ಮುನ್ನೆಚ್ಚರಿಕಾ ಕ್ರಮ

■ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ ■ಶಾಂತ ರೀತಿ ಪ್ರತಿಭಟನೆಗೆ ಅವಕಾಶವಿದೆ; ಕಾನೂನು ಬಾಹಿರ ವರ್ತನೆ ಸಹಿಸಲ್ಲ



ಬೆಂಗಳೂರು, ಸೆ.22(ಕೆಎಂಶಿ)– ತಮಿಳುನಾಡಿಗೆ ಕಾವೇರಿ ನೀರು ಹರಿಸುವುದನ್ನು ವಿರೋಧಿಸಿ ಶನಿವಾರ ಕೆಲವೆಡೆ ಬಂದ್‌ಗೆ ಕರೆ ನೀಡಿರುವ ಹಿನ್ನಲೆಯಲ್ಲಿ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದ್ದು, ಬಿಗಿ ಬಂದೋಬಸ್ತ್ ಮಾಡಲಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯ ಸೇರಿದಂತೆ ಕೆಲವೆಡೆ ಬಂದ್‌ಗೆ ಕರೆ ನೀಡಲಾಗಿದೆ. ಮಂಡ್ಯದಲ್ಲಿ ಕ್ಷಿಪ್ರ ಕಾರ್ಯಾಚರಣೆ ಪಡೆ ನಿಯೋಜಿಸಲಾಗಿದೆ. ಸಾರ್ವಜನಿಕರ ಆಸ್ತಿ–ಪಾಸ್ತಿಗೆ ಹಾನಿ ಮಾಡುವುದು, ಸಾರ್ವಜನಿಕರಿಗೆ ತೊಂದರೆ ಕೊಡುವುದು, ಕಾನೂನು ಬಾಹಿರವಾಗಿ ನಡೆದುಕೊಂಡರೆ ಪೊಲೀಸರು ಕಾನೂನು ರೀತಿ ಕ್ರಮ ಜರುಗಿಸಲಿದ್ದಾರೆ ಎಂದರು.

ಪ್ರತಿಭಟನೆ ಮಾಡುವುದು ಅವರ ಹಕ್ಕಾಗಿದ್ದು, ಅದನ್ನು ತಡೆಯುವುದಿಲ್ಲ. ಆದರೆ, ಪ್ರತಿಭಟನೆ ಮಾಡುವಾಗ ಶಾಂತ ರೀತಿಯಲ್ಲಿ ವರ್ತಿಸಬೇಕು. ಕೆಲವು ಸಂಘಟನೆಗಳು ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ರಾಜ್ಯದ ರೈತರ ಹಿತ ಕಾಪಾಡಬೇಕು ಎಂದು ಆಗ್ರಹಿಸಿ ಪ್ರತಿಭಟನೆ ಮಾಡುತ್ತಿದ್ದು, ಕಾನೂನು ರೀತಿ ಏನೇನು ಕ್ರಮ ಕೈಗೊಳ್ಳಬೇಕೋ ಆ ಎಲ್ಲ ಎಚ್ಚರಿಕೆಯನ್ನು ವಹಿಸಿದ್ದೇವೆ. ಕೆಆರ್‌ಎಸ್‌ಗೆ 5 ಸಾವಿರ ಕ್ಯೂಸೆಕ್‌ನಷ್ಟು ನೀರು ಹರಿದು ಬರುತ್ತಿದ್ದರೂ ಜಲಾಶಯದ ನೀರಿನ ಮಟ್ಟ ಹೆಚ್ಚುತ್ತಿಲ್ಲ. ನಮ್ಮಲ್ಲಿ ನೀರಿಲ್ಲ ಎಂದು ಮನವರಿಕೆ ಮಾಡಿಕೊಟ್ಟರೂ ನ್ಯಾಯಾಲಯ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶ ಪಾಲಿಸುವಂತೆ ನಿರ್ದೇಶನ ನೀಡಿದೆ ಎಂದರು.

ಬಿಜೆಪಿಯವರು ಪ್ರತಿಭಟನೆ ಮಾಡಲು ನಮ್ಮ ತಕರಾರು ಇಲ್ಲ. ಆದರೆ ಕಾವೇರಿ ವಿಚಾರ ಮುಂದಿಟ್ಟುಕೊಂಡು ರಾಜಕೀಯ ಮಾಡಬಾರದು ಎಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

ವಿರೋಧ ಪಕ್ಷದವರಿಗೂ ಜವಾಬ್ದಾರಿ ಇದೆ. ಈ ವಿಚಾರದಲ್ಲಿ ರಾಜಕೀಯ ಮಾಡುವುದರಲ್ಲಿ ಅರ್ಥವಿಲ್ಲ. ಬೇರೆ ವಿಚಾರದಲ್ಲಿ ರಾಜಕೀಯ ಮಾಡಿಕೊಳ್ಳಲಿ. ಕಾವೇರಿ ವಿವಾದಕ್ಕೆ ಸಂಬಂಧಿಸಿದಂತೆ ನಾವು ಯಾವುದೇ ನಿರ್ಲಕ್ಷ್ಯ ಮಾಡಿಲ್ಲ. ಎಲ್ಲ ರೀತಿಯಲ್ಲೂ ಕ್ರಮ ಕೈಗೊಂಡಿದ್ದೇವೆ.

ಸರ್ವಪಕ್ಷ ಸಭೆ ನಡೆಸಿ ಎಲ್ಲ ವಿವರಣೆ ನೀಡಿದ್ದೇವೆ. ಎರಡು ಬಾರಿ ಸರ್ವಪಕ್ಷ ಸಭೆ ಕರೆಯಲಾಗಿದೆ. ಆ ಸಭೆಯಲ್ಲಿ ರಾಜ್ಯದ ಹಿತಾಸಕ್ತಿಗೆ ಸರ್ಕಾರ ಏನೇ ನಿರ್ಧಾರ ತೆಗೆದುಕೊಂಡರೂ ಬೆಂಬಲ ನೀಡುವುದಾಗಿ ವಿರೋಧಪಕ್ಷಗಳು ಹೇಳಿದ್ದವು. ನಾವು ಅದನ್ನೇ ನಿರೀಕ್ಷೆ ಮಾಡುತ್ತೇವೆ ಎಂದರು.

ರಂಗಾಯಣದ ಶ್ರೀರಂಗದಲ್ಲಿ ಕಥೆ ಕೇಳೋಣ ಬನ್ನಿ ಕಾರ್ಯ್ರಮ

ಮೈಸೂರು:ರಾಷ್ಟ್ರೀಯ ಮಕ್ಕಳ ರಂಗೋತ್ಸವದ ಅಂಗವಾಗಿ ಸೆ. 23, 24ರ ಶನಿವಾರ ಹಾಗೂ ಭಾನುವಾರ ಮಕ್ಕಳಿಗಾಗಿ ಕಥೆ ಕೇಳೋಣ ಬನ್ನಿ ಕಾರ್ಯಕ್ರಮವನ್ನು ರಂಗಾಯಣದ ಶ್ರೀರಂಗ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಶನಿವಾರ ಬೆಳಗ್ಗೆ 130ಕ್ಕೆ ಗೀತಾ ರಾಮಾನುಜನ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ರಾಮೇಶ್ವರಿ ವರ್ಮ ವಹಿಸಲಿದ್ದಾರೆ. 'ಕಥೆ ಕೇಳೋಣ ಬನ್ನಿ' ಕಾರ್ಯಕ್ರಮದಲ್ಲಿ ಹಲವಾರು ಕಲಾವಿದರು ಮಕ್ಕಳಿಗೆ ಕಥೆಯನ್ನು ಹೇಳಿ ಅವರನ್ನು ರಂಜಿಸಲಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: 9243581097

ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್‌ಗೆ ಮುತ್ತಿಗೆ ಹಾಕಲು ರೈತರ ಯತ್ನ
ಮೈಸೂರು ಜಿಪಂ ಕಚೇರಿ ಬಳಿ ಬಿಗುವಿನ ವಾತಾವರಣ

■ಗೇಟ್ ಹತ್ತಿ ಒಳ ನುಗ್ಗಲು ಯತ್ನ
■ಮಡಿಕೆ ಒಡೆದು ರೈತರ ಆಕ್ರೋಶ
■ಚಲನಚಿತ್ರ ನಟರ ಮೌನಕ್ಕೆ ಕಿಡಿ
■ರೈತರ ವಶಕ್ಕೆ ಪಡೆದ ಪೊಲೀಸರು







ಮೈಸೂರು, ಸೆ.22(ಬಿಎಲ್‌ಯು)– ಮೈಸೂರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅಧಿಕಾರಿಗಳ ಸಭೆ ನಡೆಸುತ್ತಿದ್ದಾಗ ರೈತರು ಜಿಲ್ಲಾ ಪಂಚಾಯತ್ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದ ಘಟನೆ ಇಂದು ನಡೆಯಿತು.

ಸುಪ್ರೀಂಕೋರ್ಟ್ ಆದೇಶದಂತೆ ತಮಿಳುನಾಡಿಗೆ ಕಾವೇರಿ ನೀರು ಬಿಡದಂತೆ ರಾಜ್ಯ ಕಬ್ಬು ಬೆಳಗಾರರ ಸಂಘದವರು ಜಿಲ್ಲಾ ಪಂಚಾಯತ್ ಮುಂದೆ ಮಡಿಕೆಗಳನ್ನು ಹೊತ್ತು ಪ್ರತಿಭಟನೆ ನಡೆಸಿದರು.

ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಸಭೆ ನಡೆಸಿದ ರೈತರು ತರುವಾಯ ದಿಢೀರನೆ ಮೈಸೂರು ಜಿಲ್ಲಾ ಪಂಚಾಯತ್ ಕಚೇರಿಗೆ ಆಗಮಿಸಿ ಮುತ್ತಿಗೆ ಹಾಕಿದರು. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶವನ್ನು ಚಾಚೂ ತಪ್ಪದೆ ಪಾಲಿಸಿರುವ ರಾಜ್ಯ ಸರ್ಕಾರ, ಪ್ರತಿ ದಿನ ಕಾವೇರಿ ನೀರು ಬಿಟ್ಟಿದೆ. ಈಗ ಕಾವೇರಿ ಜಲಾಯನ ಪ್ರದೇಶದ ಅಣೆಕಟ್ಟುಗಳಲ್ಲಿ ನೀರಿನ ಪ್ರಮಾಣ ಕುಸಿದಿರುವ ಕಾರಣ ನೀರು ಬಿಡುವಂತೆ ಆದೇಶಿಸಿರುವ ಸುಪ್ರೀಂಕೋರ್ಟ್ ಆದೇಶವನ್ನು ಯಾವುದೇ ಕಾರಣಕ್ಕೂ ಪಾಲಿಸಬಾರದು ಎಂದು ಒತ್ತಾಯಿಸಿದರು.

ನೈರುತ್ಯ ಮುಂಗಾರಿನಲ್ಲಿ ತಮಿಳುನಾಡಿಗೆ ಮಳೆ ಬಂದು ಅಲ್ಲಿನ ಜಲಾಶಯ ತುಂಬಲಿದೆ. ಆದರೆ ಮಳೆ ಇಲ್ಲದ ಕಾರಣ ಕಾವೇರಿ ಜಲಾಯನ ಪ್ರದೇಶದ ಅಣೆಕಟ್ಟುಗಳಲ್ಲಿ ನೀರು ಬರಿದಾಗುತ್ತಿದೆ. ಈ ಹಿನ್ನೆಲೆ ಯಾವುದೇ ಕಾರಣಕ್ಕೂ ನೀರು ಬಿಡುವುದಿಲ್ಲ ಎಂದು ರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ಗೆ ತಿಳಿಸಿ ಈಗ ನೀರು ಹರಿಸುವುದನ್ನು ನಿಲ್ಲಿಸಬೇಕು ಎಂದು ಕುರುಬೂರು ಶಾಂತಕುಮಾರ್ ಆಗ್ರಹಿಸಿದರು.

ಚಲನಚಿತ್ರ ನಟರು ಚುನಾವಣೆಯಲ್ಲಿ ರಾಜಕಾರಣಿಗಳ ಪರವಾಗಿ ಸ್ಪರ್ಧಾತ್ಮಕವಾಗಿ ಪ್ರಚಾರಕ್ಕೆ ಬರುತ್ತಾರೆ. ಆದರೆ ರೈತರಿಗೆ ಅನ್ಯಾಯವಾಗುತ್ತಿದ್ದರೂ ಈಗ ದನಿ ಎತ್ತದೆ ಮೌನವಾಗಿದ್ದಾರೆ ಎಂದು ಕುರುಬೂರು ಶಾಂತಕುಮಾರ್ ಕಿಡಿಕಾರಿದರು.

ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ತಮಿಳುನಾಡು ಮುಖ್ಯಮಂತ್ರಿ ಸ್ಟಾಲಿನ್ ವಿರುದ್ಧ ರೈತರು ಘೋಷಣೆ ಕೂಗಿದರು.

ತರುವಾಯ ಜಿಲ್ಲಾ ಪಂಚಾಯತ್ ಕಚೇರಿ ಗೇಟ್ ಹತ್ತಿ ಒಳಗೆ ನುಗ್ಗಿ ಭೈರತಿ ಸುರೇಶ್ ಅವರಿಗೆ ಮುತ್ತಿಗೆ ಹಾಕಲು ಯತ್ನಿಸಿದರು. ಈ ವೇಳೆ ಗೇಟ್ ಹತ್ತುತ್ತಿದ್ದ ರೈತರನ್ನು ಪೊಲೀಸರು ಕೆಳಗೆ ಇಳಿಸಿ ವ್ಯಾನ್‌ಗೆ ಎಳೆದೊಯ್ದರು. ಈ ಸಂದರ್ಭದಲ್ಲಿ ನೂಕು ನುಗ್ಗಲು ಉಂಟಾಗಿ ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು.

ಪೊಲೀಸರು ಎಳೆದೊಯ್ಯುವ ವೇಳೆ ರೈತರು ಮಡಿಕೆಗಳನ್ನು ಗೇಟ್ ಮುಂಭಾಗ ಒಡೆದು ಆಕ್ರೋಶ ವ್ಯಕ್ತಪಡಿಸಿದರು.

ರೈತ ಮುಖಂಡರಾದ ಅತ್ತಳ್ಳಿ ದೇವರಾಜ್, ಹಳ್ಳಿಕೆರೆಹುಂಡಿ ಭಾಗ್ಯರಾಜ್, ಬರಡನಪುರ ನಾಗರಾಜ್, ಕಿರಗಸೂರು ಶಂಕರ್, ಪಟೇಲ್ ಶಿವಮೂರ್ತಿ, ಕೆರೆಹುಂಡಿ ರಾಜಣ್ಣ ಸೇರಿದಂತೆ ಇತರರನ್ನು ಪೊಲೀಸರು ವಶಕ್ಕೆ ಪಡೆದರು.

ಡಿಎಂಕೆ ಜೊತೆಗಿನ ಮೈತ್ರಿ ಲಾಭಕ್ಕೆ ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ

ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಶಾಸಕ ಶ್ರೀವತ್ಸ ವಾಗ್ದಾಳಿ

● ತಮಿಳುನಾಡು ಕೇಳಿದಾಗಲೆಲ್ಲಾ ಧಾರಾಳವಾಗಿ ನೀರು ಬಿಡುಗಡೆ ● ಕರ್ನಾಟಕದ ಪರ ಇರುವ ವಕೀಲರು, ಅಧಿಕಾರಿಗಳು ಅಸಮರ್ಥರು ● ಸರಳ ದಸರಾದಿಂದ ವ್ಯಾಪಾರ ವಹಿವಾಟು ಕುಸಿತದ ಆತಂಕ ● ಸಿದ್ದರಾಮಯ್ಯ ವಿರುದ್ಧ ಹೈಕೋರ್ಟ್‌ನಲ್ಲಿ ಪ್ರಕರಣದ ಎಚ್ಚರಿಕೆ



ಮೈಸೂರು, ಸೆ.22(ಬಿಎಲ್‌ಯು)– ಡಿಎಂಕೆ ಜೊತೆಗಿನ ಮೈತ್ರಿ ಲಾಭಕ್ಕಾಗಿ ರಾಜ್ಯ ಕಾಂಗ್ರೆಸ್ ಸರ್ಕಾರ ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿದೆ ಎಂದು ಮೈಸೂರಿನ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಆರೋಪಿಸಿದ್ದಾರೆ.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಳೆ ಇಲ್ಲದೆ ಕಾವೇರಿ ಜಲಾಯನ ಪ್ರದೇಶದ ಅಣೆಕಟ್ಟುಗಳಲ್ಲಿ ನೀರು ಇಲ್ಲದಿದ್ದರೂ ತಮಿಳುನಾಡು ಸರ್ಕಾರ ಕೇಳಿದಾಗಲೆಲ್ಲಾ ರಾಜ್ಯ ಕಾಂಗ್ರೆಸ್ ಸರ್ಕಾರ ನೀರು ಬಿಟ್ಟಿದೆ. ಡಿಎಂಕೆ ಜೊತೆಗಿನ ಮೈತ್ರಿ ಲಾಭಕ್ಕೆ ಈ ನಿಲುವು ಕೈಗೊಂಡಿದೆ ಎಂದು ಆಪಾದಿಸಿದರು.

ಕಾವೇರಿ ನದಿ ನೀರು ಪ್ರಾಧಿಕಾರ ಹಾಗೂ ಸುಪ್ರೀಂಕೋರ್ಟ್ ಮುಂದೆ ಸಮರ್ಥ ವಾದ ಮಂಡಿಸುವಲ್ಲಿ ನಮ್ಮ ವಕೀಲರು ಹಾಗೂ ಅಧಿಕಾರಿಗಳು ಸಂಪೂರ್ಣ ವಿಫಲರಾಗಿದ್ದಾರೆ. ಇದರಿಂದ ಕರ್ನಾಟಕಕ್ಕೆ ಅನ್ಯಾಯವಾಗುತ್ತಿದೆ ಎಂದು ಶ್ರೀವತ್ಸ ದೂರಿದರು. ನಮ್ಮ ಅಣೆಕಟ್ಟುಗಳಲ್ಲಿ ನೀರು ಇಲ್ಲದ ಕಾರಣ ನೀರು ಬಿಡುವುದಿಲ್ಲ ಎಂದು ರಾಜ್ಯ ಸರ್ಕಾರ ಹೇಳುತ್ತಿದೆ. ಆದರೆ ಇದಕ್ಕೆ ಸರ್ಕಾರ ಬದ್ಧವಾಗಿರಬೇಕು. ಈ ರೀತಿಯ ನಿರ್ಧಾರ ಕೈಗೊಂಡರೆ ಸರ್ಕಾರಕ್ಕೆ ನಮ್ಮ ಬೆಂಬಲ ಇದ್ದೆ ಇರುತ್ತದೆ ಎಂದು ಸ್ಪಷ್ಟಪಡಿಸಿದರು.

ಈ ಬಾರಿ ಸರಳ ದಸರಾ ಆಚರಣೆ ಮಾಡಲಾಗುವುದು ಎಂದು ಸರ್ಕಾರ ಹೇಳುತ್ತಿದೆ. ಆದರೆ ಯಾವ ರೀತಿ ಸರಳತೆ ಇರುತ್ತದೆ ಎಂಬುವುದನ್ನು ಸ್ಪಷ್ಟಪಡಿಸಬೇಕು. ಸರಳ ದಸರಾ ಅಂದರೆ ಮೈಸೂರು ಅರಮನೆಗೆ ಮಾತ್ರ ಸೀಮಿತವಾಗಿರುತ್ತದೆಯೇ ಎಂಬುದನ್ನು ತಿಳಿಸಬೇಕು ಎಂದು ಶ್ರೀವತ್ಸ ಆಗ್ರಹಿಸಿದರು.

ದಸರಾ ವೇಳೆ ಮೈಸೂರಿನ ರಸ್ತೆಗಳು ದುರಸ್ತಿಯಾಗುತ್ತಿದ್ದವು. ಆದರೆ ಸರ್ಕಾರ ಈಗ ಸರಳ ದಸರಾ ಆಚರಣೆ ಮಾಡಲಾಗುವುದು ಎಂದು ಹೇಳುತ್ತಿರುವ ಕಾರಣ ರಸ್ತೆಗಳ ಅವ್ಯವಸ್ಥೆ ಹಾಗೆ ಇರುತ್ತದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದಸರಾ ಸಮಯದಲ್ಲಿ ಮೈಸೂರಿನಲ್ಲಿ ವ್ಯಾಪಾರ ವಹಿವಾಟು ಹೆಚ್ಚಾಗುತ್ತಿತ್ತು. ಬಹಳಷ್ಟು ಜನರಿಗೆ ವರ್ಷದ ಕೂಳು ಸಿಗುತ್ತಿತ್ತು ಆದರೆ ಈಗ ಸರಳವಾಗಿ ದಸರಾ ಆಚರಣೆ ಮಾಡುವುದರಿಂದ ಪ್ರವಾಸಿಗರ ಸಂಖ್ಯೆ ಸಹಜವಾಗಿಯೇ ಕಡಿಮೆ ಆಗಲಿದೆ. ಇದರಿಂದ ವ್ಯಾಪಾರದ ಮೇಲೆ ಪರಿಣಾಮ ಬೀರುತ್ತದೆ ಎಂದು ಶ್ರೀವತ್ಸ ಆತಂಕ ವ್ಯಕ್ತಪಡಿಸಿದರು.

ಸಿದ್ದರಾಮಯ್ಯ ಆಯ್ಕೆ ಅಸಿಂಧುಗೊಳಿಸಬೇಕು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸಭಾ ಚುನಾವಣೆಯಲ್ಲಿ ಕುಕ್ಕರ್, ಇಸ್ತ್ರಿ ಪೆಟ್ಟಿಗೆ ಹಂಚಿ ಅಕ್ರಮವಾಗಿ ಗೆಲುವು ಸಾಧಿಸಿದ್ದಾರೆ. ಇದನ್ನು ಸ್ವತಃ ಅವರ ಪುತ್ರ ಯತೀಂದ್ರ ಅವರೇ ಒಪ್ಪಿಕೊಂಡಿದ್ದಾರೆ. ಈ ಹಿನ್ನೆಲೆ ಚುನಾವಣಾ ಆಯೋಗ ಸಿದ್ದರಾಮಯ್ಯ ಅವರ ಆಯ್ಕೆಯನ್ನು ಅಸಿಂಧುಗೊಳಿಸಬೇಕು ಎಂದು ಒತ್ತಾಯಿಸಿದರು.

ಕಾಂಗ್ರೆಸ್ ಪಕ್ಷ ಗ್ಯಾರಂಟಿ ಕಾರ್ಡ್ ನೀಡಿ ಜನರನ್ನು ಮರಳು ಮಾಡಿ ಗೆಲುವು ಸಾಧಿಸಿದೆ. ಮತದಾರರಿಗೆ ಆಮಿಷ ವೊಡ್ಡಲಾಗಿತ್ತು ಎಂಬುದನ್ನು ಅವರ ಪುತ್ರನೇ ಬಹಿರಂಗವಾಗಿ ಒಪ್ಪಿಕೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಸಿದ್ದರಾಮಯ್ಯ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಬೇಕು. ಇಲ್ಲದಿದ್ದರೆ ಹೈಕೋರ್ಟ್‌ನಲ್ಲಿ ಪ್ರಕರಣ ದಾಖಲಿಸುತ್ತೇವೆ ಎಂದು ಶ್ರೀವತ್ಸ ಎಚ್ಚರಿಸಿದರು.

ದಸರಾ ಲಲಿತಕಲೆ, ಕರಕುಶಲ ಉಪ ಸಮಿತಿಯಿಂದ ಅ.17 ರಂದು ಚಿತ್ರಕಲಾ ಸ್ಪರ್ಧೆ


ಮೈಸೂರು.ಸೆ.22– ನಾಡಹಬ್ಬ ಮೈಸೂರು ದಸರಾ ಮಹೋತ್ಸವ–2023 ರಲ್ಲಿ ಲಲಿತಕಲೆ ಮತ್ತು ಕರಕುಶಲ ಉಪಸಮಿತಿ ವತಿಯಿಂದ ಅ.17 ರಂದು ಬೆಳಗ್ಗೆ 11 ಗಂಟೆಗೆ, ಕಲಾಮಂದಿರದಲ್ಲಿ 1ನೇ ರಿಂದ 4ನೇ ತರಗತಿ ವಿದ್ಯಾರ್ಥಿಗಳಿಗೆ ಪರಿಸರ, ಪ್ರಾಣಿ, ಪಕ್ಷಿಗಳು, ಮೈಸೂರು ದಸರಾ, 5 ರಿಂದ 7ನೇ ತರಗತಿ ವಿದ್ಯಾರ್ಥಿಗಳಿಗೆ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಭಾರತದ ಮೈಲಿಗಲ್ಲು ಹಾಗೂ 8 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಕರ್ನಾಟಕದ ವಿಶ್ವಪಾರಂಪರಿಕ ತಾಣಗಳು ಈ ವಿಷಯಗಳ ಮೇಲೆ ಮೂರು ವಿಭಾಗಗಳಲ್ಲಿ ಸ್ಥಳದಲ್ಲೇ ಚಿತ್ರ ಬಿಡಿಸುವ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವ ಶಾಲಾ ಮಕ್ಕಳು, ಅ.4 ರಿಂದ ಕಚೇರಿ ದಿನಗಳಲ್ಲಿ (ಕೆಲಸದ ಅವಧಿಯಲ್ಲಿ) ಸುಚಿತ್ರಾ ಕಲಾ ಗ್ಯಾಲರಿ, ಕಲಾಮಂದಿರದಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

ಶುದ್ಧ ಕುಡಿಯುವ ನೀರಿಗೆ ತ್ಯಾಜ್ಯ ನೀರು ಸೇರ್ಪಡೆ ಕಂಡು ಬಂದಲ್ಲಿ ಮಾಹಿತಿ ನೀಡಿ

ಮೈಸೂರು.ಸೆ.22– ಮೈಸೂರು ಮಹಾನಗರ ಪಾಲಿಕೆಯ ವಾಣಿ ವಿಲಾಸ ನೀರು ಸರಬರಾಜು ಮತ್ತು ಒಳಚರಂಡಿ ವಿಭಾಗದಿಂದ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಿಗೆ ವಿವಿಧ ಮೂಲ ಸ್ಥಾವರಗಳಿಂದ ಶುದ್ಧ ನೀರನ್ನು ಸರಬರಾಜು ಮಾಡಲಾಗುತ್ತಿದ್ದು, ಈ ಸಂಬಂಧ ಪಾಲಿಕೆಯು ಮುಂಜಾಗೃತಾ ಕ್ರಮವಹಿಸಲಾಗುತ್ತಿದೆ.

ಆದರೂ ಸಹ ಯಾವುದೇ ಇತರೆ ಕಾರಣಗಳಿಂದ ಕುಡಿಯುವ ನೀರಿಗೆ ತ್ಯಾಜ್ಯ ನೀರು ಸೇರಿ ಕಲುಷಿತಗೊಳ್ಳುತ್ತಿರುವುದು ಕಂಡುಬಂದಲ್ಲಿ ವಾಣಿವಿಲಾಸ ನೀರು ಸರಬರಾಜು ಮತ್ತು ಒಳಚರಂಡಿ ವಿಭಾಗದ ಕಚೇರಿಯ ಕಾರ್ಯಪಾಲಕ ಅಭಿಯಂತರರರಿಗೆ ಪತ್ರ, eevvww2012@gmail.com ಅಥವಾ ದೂ.ಸಂ: 0821–2418849/ 9449841196 ಮೂಲಕ ತಿಳಿಸಬಹುದಾಗಿದೆ ಎಂದು ಮೈಸೂರು ಮಹಾನಗರ ಪಾಲಿಕೆಯ ನೀರು ಸರಬರಾಜು ಮತ್ತು ಒಳಚರಂಡಿ (ಪಶ್ಚಿಮ) ವಿಭಾಗ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಾಸ್ತವ ಪರಿಸ್ಥಿತಿ ಆಧರಿಸಿ ಕಾವೇರಿ ನಿರ್ವಹಣಾ ಸಮಿತಿ ಆದೇಶ ನೀಡಬೇಕಿತ್ತು



ಮೈಸೂರು,ಸೆ.22(ಎಂಟಿವೈ)– ಕಾವೇರಿ ನೀರು ಹಂಚಿಕೆ ಕುರಿತಂತೆ ಆದೇಶ ನೀಡುವ ಮುನ್ನ ಕಾವೇರಿ ನೀರು ನಿರ್ವಹಣಾ ಸಮಿತಿ ಸದಸ್ಯರು ಉಭಯ ರಾಜ್ಯಗಳಿಗೆ ತೆರಳಿ ಮಳೆ, ಬರ ಹಾಗೂ ಜಲಾಶಯಗಳಲ್ಲಿನ ಪರಿಸ್ಥಿತಿ ಅವಲೋಕಿಸಬೇಕಾಗಿತ್ತು ಎಂದು ಪಶುಸಂಗೋಪನಾ ಸಚಿವ ಕೆವೆಂಕಟೇಶ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕಾವೇರಿ ನೀರು ನಿರ್ವಹಣಾ ಸಮಿತಿ ಯಾವುದೇ ತೀರ್ಪು ನೀಡುವ ಮುನ್ನ ವಾಸ್ತವ ಸ್ಥಿತಿ ಅರಿಯಲು ಎರಡೂ ರಾಜ್ಯಗಳಿಗೂ ಭೇಟಿ ನೀಡಿ ಪರಿಶೀಲಿಸಬೇಕಾಗಿತ್ತು. ಬರ ಹಾಗೂ ಸಂಕಷ್ಟದ ಪರಿಸ್ಥಿತಿಯಲ್ಲೂ ನೀರು ಬಿಡಿ ಎಂದು ಆದೇಶಿಸುವುದು ಸರಿಯಲ್ಲ ಎಂದು ಟೀಕಿಸಿದರು.

ಜವಾಬ್ದಾರಿ ಇಲ್ಲದ ನಾಯಕರು: ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ನೀರು ಹಂಚಿಕೆ ಕುರಿತಂತೆ ರಾಜ್ಯ ಸರ್ಕಾರದ ಮೇಲೆ ಗೂಬೆ ಕೂರಿಸುವ ಹೇಳಿಕೆ ನೀಡಿದ್ದಾರೆ. ನೀರು ಬಿಟ್ಟು ನಮ್ಮ ಬಳಿ ಬಂದಿದ್ದಾರೆ ಎಂಬ ಅವರ ಹೇಳಿಕೆ ಬೇಜವಾಬ್ದಾರಿಯಿಂದ ಕೂಡಿದೆ. ಪರಿಸ್ಥಿತಿ ಉಲ್ಬಣವಾಗುವ ಮುನ್ನ ಕಾವೇರಿ ನೀರು ನಿರ್ವಹಣಾ ಸಮಿತಿ ಆದೇಶ ಪಾಲಿಸದೆ, ತಮಿಳುನಾಡಿಗೆ ನೀರು ಬಿಡದೆ ನಮ್ಮ ಮುಂದೆ ಬನ್ನಿ, ನಾವು ರಾಜ್ಯಕ್ಕೆ ನ್ಯಾಯ ಒದಗಿಸುತ್ತೇವೆ ಎಂದು ಹೇಳಬಹುದಾಗಿತ್ತು. ಆದರೆ, ರಾಜ್ಯದ ಹಿತವನ್ನು ಕಾಪಾಡಲು ಬಿಜೆಪಿ ಸಂಸದರು ವಿಫಲರಾಗಿದ್ದಾರೆ ಎಂದು ಅಸಮಾದಾನ ವ್ಯಕ್ತಪಡಿಸಿದರು.

ಮೊದಲ ಒಳಗೆ, ಈಗ ಬಹಿರಂಗ: ಎನ್‌ಡಿಎ ಮೈತ್ರಿಕೂಟಕ್ಕೆ ಜೆಡಿಎಸ್ ಸೇರ್ಪಡೆಗೊಂಡ ವಿಚಾರಕ್ಕೆ ಪ್ರತಿಕ್ರಿಯಿಸಿದ ಸಚಿವ ಕೆ.ವೆಂಕಟೇಶ್ ರಾಜ್ಯದಲ್ಲಿ ಮೊದಲಿನಿಂದಲೂ ಬಿಜೆಪಿಯೊಂದಿಗೆ ಜೆಡಿಎಸ್ ಒಳಒಪ್ಪಂದ ಮಾಡಿಕೊಂಡೇ ಬಂದಿದೆ. ಈ ಮೊದಲು ಒಳಗೊಳಗೆ ಒಪ್ಪಂದ ಮಾಡಿಕೊಂಡು ಚುನಾವಣೆ ಎದುರಿಸುತ್ತಿದ್ದ ಜೆಡಿಎಸ್ ಈಗ ಬಹಿರಂಗವಾಗಿಯೇ ಮೈತ್ರಿ ಮಾಡಿಕೊಂಡಿದೆ. ರಾಜ್ಯದಲ್ಲಿ ಕಾಂಗ್ರೆಸ್‌ಗೆ ಜನ ಬೆಂಬಲ ನೀಡುವುದರಿಂದ ಎರಡೂ ಪಕ್ಷಗಳು ಸಹಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಅದಕ್ಕಾಗಿ ಎರಡೂ ಪಕ್ಷಗಳಿಗೂ ಮೈತ್ರಿ ಅವಶ್ಯಕತೆ ಇತ್ತು ಅದಕ್ಕಾಗಿ ಎರಡೂ ಪಕ್ಷಗಳು ಒಂದಾಗಿವೆ. ಇದರಿಂದ ಕಾಂಗ್ರೆಸ್ ಮೇಲೆ ಯಾವುದೇ ದುಷ್ಪರಿಣಾಮ ಬೀರುವುದಿಲ್ಲ. ಆದರೂ, ಲೋಕಸಭಾ ಚುನಾವಣೆಯಲ್ಲಿ ಕಾದು ನೋಡೋಣ ಎಂದರು.

ರಾಜಕೀಯ ಲೇಪ ಯಾಕೆ: ಮತ್ತೆ ಮೂವರ ಉಪಮುಖ್ಯಮಂತ್ರಿ ಮಾಡಬೇಕು ಎಂಬುದು ಸಚಿವ ಕೆ.ಎನ್.ರಾಜಣ್ಣ ಅವರ ವೈಯಕ್ತಿಕ ಹೇಳಿಕೆಯಾಗಿದೆ. ಇದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಗುರಿಯಾಗಿಸಿ ಹೇಳಿದ್ದಾರೆ ಎನ್ನುವ ರಾಜಕೀಯ ಲೇಪ ಹಚ್ಚುವುದು ಸರಿಯಲ್ಲ. ಡಿ.ಕೆ.ಶಿವಕುಮಾರ್ ಅವರು ನಮ್ಮ ಪಕ್ಷದ ನಾಯಕರಾಗಿದ್ದಾರೆ. ಅವರು ಸಿಎಂ ಆಗುವ ಆಕಾಂಕ್ಷೆ ಹೊಂದಿದ್ದಾರೆ. ಅದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು.

ಸೆ.26ರಂದು ಮೈಸೂರಲ್ಲಿ ಪಶುಸಖಿಯರಿಗೆ ತರಬೇತಿ; ಕಾಲುಬಾಯಿ ಜ್ವರದ ಲಸಿಕಾ ಕಾರ್ಯಕ್ರಮಕ್ಕೆ ಸಿಎಂ ಚಾಲನೆ

■ಸರ್ಕಾರಿ ಉತ್ತನಹಳ್ಳಿ ಗ್ರಾಮದಲ್ಲಿ ನೂತನ ಪಶುಚಿಕಿತ್ಸಾಲಯ ಉದ್ಘಾಟನೆ
■ಗಂಟು ರೋಗಕ್ಕೂ ಲಸಿಕೆ ಅಭಿಯಾನ; ಪಶು ಸಂಗೋಪನಾ ಸಚಿವ ವೆಂಕಟೇಶ್ ಮಾಹಿತಿ



ಮೈಸೂರು,ಸೆ.22(ಎಂಟಿವೈ)–ಮೈಸೂರು ತಾಲೂಕಿನ ಸರ್ಕಾರಿ ಉತ್ತನಹಳ್ಳಿಯಲ್ಲಿ ಸೆ.26 ರಂದು ಬೆಳಗ್ಗೆ 10.30ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೂತನ ಪಶು ಚಿಕಿತ್ಸಾಲಯ, ಪಶುಸಖಿಯರಿಗೆ ರಾಜ್ಯಮಟ್ಟದ ತರಬೇತಿ ಕಾರ್ಯಾಗಾರ ಹಾಗೂ 4ನೇ ಸುತ್ತಿನ ಕಾಲುಬಾಯಿ ಜ್ವರದ ಲಸಿಕಾ ವಿತರಣಾ ಅಭಿಯಾನ ಉದ್ಘಾಟಿಸಲಿದ್ದಾರೆ ಎಂದು ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ.

ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವರುಣಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಸರ್ಕಾರಿ ಉತ್ತನಹಳ್ಳಿಯಲ್ಲಿ ನೂತನವಾಗಿ ಪಶುಚಿಕಿತ್ಸಾಲಯ ನಿರ್ಮಿಸಲಾಗಿತ್ತು. ಅದನ್ನು ಸೆ.26ರಂದು ಬೆಳಗ್ಗೆ 10.30ಕ್ಕೆ ಆಯೋಜಿಸಿರುವ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಅಲ್ಲದೆ, ಆಶಾ ಕಾರ್ಯಕರ್ತೆಯರಂತೆ ಪ್ರತಿ ಗ್ರಾ.ಪಂ ಕಚೇರಿಯಲ್ಲಿ ತಲಾ ಒಬ್ಬೊಬ್ಬರಂತೆ ಪಶುಸಖಿಯರನ್ನು ನೇಮಿಸಲಾಗಿದ್ದು, ಅವರಿಗೆ ರಾಜ್ಯಮಟ್ಟದ ತರಬೇತಿ ಕಾರ್ಯಾಗಾರ ಹಾಗೂ ಜಾನುವಾರುಗಳಿಗೆ 4ನೇ ಸುತ್ತಿನ ಕಾಲುಬಾಯಿ ಜ್ವರದ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್, ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಸೇರಿದಂತೆ ಜಿಲ್ಲೆ ಶಾಸಕರು ಪಾಲ್ಗೊಳ್ಳಲಿದ್ದಾರೆ ಎಂದರು.

ರಾಜ್ಯದಲ್ಲಿ 4234 ವಿವಿಧ ಹಂತದ ಪಶುವೈದ್ಯಕೀಯ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಒಟ್ಟು 1.14.54.000 ಜಾನುವಾರು(ಹಸು, ಎಮ್ಮೆ) ಹಾಗೂ 1.72 ಕೋಟಿ ಕುರಿಗಳಿವೆ. ಹೈನುಗಾರಿಕೆಯಿಂದ 130 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದು, 80 ಲಕ್ಷ ಲೀಟರ್ ಕರ್ನಾಟಕ ಹಾಲು ಮಹಾಮಂಡಳಿಗೆ ನೀಡಲಾಗುತ್ತಿದೆ. ಈ ಹಿಂದೆ 2013ರಿಂದ 18ವರೆಗೆ ರಾಜ್ಯದಲ್ಲಿ ಅಧಿಕಾರದಲ್ಲಿದ್ದ ಕಾಂಗ್ರೆಸ್ ಸರ್ಕಾರ ವಿಮೆ ಮಾಡಿಸದೇ ಇರುವ ರಾಸುಗಳು ಸತ್ತರೂ 10 ಸಾವಿರ ರೂ., 6 ತಿಂಗಳ ಒಳಗಿನ ಕುರಿ, ಮೇಕೆ ಮರಿ ಮೃತಪಟ್ಟರೆ 2500 ರೂ. ಹಾಗೂ 6 ತಿಂಗಳು ಮೇಲ್ಪಟ್ಟ ಕುರಿ, ಮೇಕೆಗೆ 5 ಸಾವಿರ ರೂ. ಪರಿಹಾರ ನೀಡಲಾಗುತ್ತಿತ್ತು. ಅದನ್ನು ಬಿಜೆಪಿ ಸರ್ಕಾರ ಸ್ಥಗಿತಗೊಳಿಸಿತ್ತು. ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೃತಪಟ್ಟ ಜಾನು ವಾರುಗಳಿಗೆ ಮತ್ತೆ ಪರಿಹಾರ ನೀಡಲು ನಿರ್ಧ ರಿಸಿದ್ದಾರೆ ಎಂದು ತಿಳಿಸಿದರು.

ಪಶು ಸಖಿಯರು: ಕೇಂದ್ರ ಸರ್ಕಾರ ಪ್ರತಿ ಗ್ರಾ.ಪಂಗೆ ತಲಾ ಒಬ್ಬರಂತೆ ಪಶು ಸಖಿಯರನ್ನು ನೇಮಿಸುವ ಕಾರ್ಯಕ್ರಮ ಜಾರಿಗೊಳಿಸಿದೆ. ಈ ಕಾರ್ಯಕ್ರಮಕ್ಕಾಗಿ ನಿಯೋಜನೆಗೊಂಡಿರುವ ಪಶು ಸಖಿಯರಿಗೆ ರಾಜ್ಯ ಸರ್ಕಾರದ ವತಿಯಿಂದ ತರಬೇತಿ ನೀಡಲಾಗುತ್ತದೆ. 18 ದಿನಗಳ ಸಾಮಾನ್ಯ ತರಬೇತಿ ಹಾಗೂ 16 ದಿನಗಳ ವೈಜ್ಞಾನಿಕ ತರಬೇತಿ ನೀಡಿ, ಪಶುಗಳ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಯಾವ ರೀತಿ ಕಾರ್ಯನಿರ್ವಹಿಸಬೇಕು ಎಂದು ತರಬೇತಿ ನೀಡಲಾಗುತ್ತದೆ. ಈ ರಾಜ್ಯಮಟ್ಟದ ತರಬೇತಿಗೆ ಸಿಎಂ ಚಾಲನೆ ನೀಡಲಿದ್ದಾರೆ ಎಂದರು.

ಕಾಲುಬಾಯಿ ಜ್ವರ: ದೇಶದಲ್ಲಿ ಜಾನುವಾರುಗಳಿಗೆ ಕಾಲುಬಾಯಿ ಜ್ವರ ಕಾಡುತ್ತಿದೆ. ಇತರೆ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಕಾಲುಬಾಯಿ ಜ್ವರ ನಿಯಂತ್ರಣದಲ್ಲಿ ಮೊದಲ ಸ್ಥಾನ ಪಡೆದಿದೆ. ರಾಜ್ಯದಲ್ಲಿ ಈಗಾಗಲೇ ಎಲ್ಲಾ ಜಾನವಾರುಗಳಿಗೆ ಮೂರು ಸುತ್ತಿನ ಲಸಿಕೆ ಹಾಕಲಾಗಿದ್ದು, ಇದರಿಂದ ಜಾನುವಾರುಗಳನ್ನು ರಕ್ಷಿಸಲಾಗಿದೆ. ನಾಲ್ಕನೆ ಸುತ್ತಿನ ಅಭಿಯಾನದಲ್ಲಿ ರಾಜ್ಯದಲ್ಲಿ 84.69 ಲಕ್ಷ ಹಸು, 29.84 ಲಕ್ಷ ಎಮ್ಮೆಗಳಿಗೆ ಲಸಿಕೆ ಹಾಕಲು ನಿರ್ಧರಿಸಲಾಗಿದೆ. ಇದಕ್ಕಾಗಿ 114.54 ಲಕ್ಷ ಡೋಸ್‌ಗಳನ್ನು ಶೀಥಲೀಕರಣ ಯಂತ್ರದಲ್ಲಿ ದಾಸ್ತಾನು ಇಡಲಾಗಿದೆ ಎಂದು ತಿಳಿಸಿದರು. ರೇಬಿಸ್ ತಡೆಗೆ ಲಸಿಕೆ: ರಾಜ್ಯದಲ್ಲಿ ರೇಬಿಸ್ ರೋಗ ನಿರ್ಮೂಲನೆಗೆ ಈಗಾಗಲೇ ಲಸಿಕೆ ನೀಡುವ ಅಭಿಯಾನ ನಡೆಸಲಾಗಿದ್ದು, ರಾಜ್ಯದಾದ್ಯಂತ 290 ಸಂಚಾರಿ ಪಶುಚಿಕಿತ್ಸಾ ಘಟಕ ಕಾರ್ಯನಿರ್ವಹಿಸುತ್ತಿದೆ. ಅವುಗಳಲ್ಲಿ ಮೈಸೂರು ಜಿಲ್ಲೆಯಲ್ಲಿ 11 ಸಂಚಾರಿ ಘಟಕ ಸೇರಿದಂತೆ ಮೈಸೂರು ವಿಭಾಗದ 8 ಜಿಲ್ಲೆಗಳ ವ್ಯಾಪ್ತಿಯಲ್ಲಿ 63 ಸಂಚಾರಿ ಘಟಕ ಜಾನುವಾರುಗಳ ಹಿತಕಾಯಲು ಶ್ರಮಿಸುತ್ತಿದ್ದಾರೆ. ತುರ್ತು ಸಂದರ್ಭದಲ್ಲಿ 1962 ಸಹಾಯವಾಣಿ ಸಂಖ್ಯೆಗೆ ಜನ ಮಾಹಿತಿ ನೀಡಬಹುದಾಗಿದೆ ಎಂದು ಸಲಹೆ ನೀಡಿದರು.

ಬರದ ಹಿನ್ನೆಲೆ; ಹೊರ ರಾಜ್ಯಕ್ಕೆ ಮೇವು ಸಾಗಾಟಕ್ಕೆ ನಿರ್ಬಂಧ

ಮೈಸೂರು,ಸೆ.22(ಎಂಟಿವೈ)– ಬರಗಾಲದ ಹಿನ್ನೆಲೆಯಲ್ಲಿ ಜಾನುವಾರುಗಳ ಹಿತಕಾಯಲು ರಾಜ್ಯದಿಂದ ಹೊರ ರಾಜ್ಯಗಳಿಗೆ ಮೇವು ಸಾಗಾಣಿಕೆಗೆ ನಿರ್ಬಂಧ ಹೇರುವಂತೆ ಸೂಚನೆ ನೀಡುವುದಾಗಿ ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ.

ಮೈಸೂರಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಮಳೆ ಕೊರತೆ ಉಂಟಾಗಿದ್ದು, ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದೆ. ಜಾನುವಾರುಗಳ ಹಿತಕಾಯಲು ಸರ್ಕಾರ ಬದ್ಧವಾಗಿದೆ. ನಮ್ಮಲ್ಲಿ ಮುಂದಿನ 28 ವಾರಕ್ಕೆ ಬೇಕಾಗುವ ಮೇವು ದಾಸ್ತಾನು ಮಾಡಲಾಗಿದೆ. ಅಲ್ಲದೆ ಮುಂದಿನ ಎರಡು ತಿಂಗಳವರೆಗೂ ರೈತರ ಹೊಲ, ಗದ್ದೆಗಳಲ್ಲಿ ಬೆಳೆದಿರುವ ಫಸಲು ಜಾನುವಾರುಗಳಿಗೆ ಸಾಕಾಗುತ್ತದೆ. ಮಳೆ ಪರಿಸ್ಥಿತಿ ಹೀಗೆ ಮುಂದುವರೆದರೆ ಇನ್ನೆರಡು ತಿಂಗಳ ನಂತರ ಪರಿಸ್ಥಿತಿ ಬಿಗಡಾಯಿಸಬಹುದು. ಪರಿಸ್ಥಿತಿ ಸಮರ್ಥವಾಗಿ ನಿಭಾಯಿಸಲು ಸರ್ಕಾರ ಬದ್ಧವಾಗಿದೆ ಎಂದರು.

ಜಾನುವಾರುಗಳಿಗೆ ಮೇವು ಒದಗಿಸಲು ರೈತರಿಗೆ ಉಚಿತವಾಗಿ ಮೇವಿನ ಬೀಜ ನೀಡಲು ಉದ್ದೇಶಿಸಲಾಗಿದೆ. ಇದಕ್ಕೆ ಕೇಂದ್ರ ಸರ್ಕಾರ 48 ಕೋಟಿ ರೂ, ರಾಜ್ಯ ಸರ್ಕಾರ 20 ಕೋಟಿ ರೂ. ಹಣ ಮೀಸಲಿಟ್ಟಿದೆ. ಮೇವಿನ ಬೀಜವನ್ನು ರೈತರಿಗೆ ಉಚಿತವಾಗಿ ನೀಡುವುದರಿಂದ ಅವರ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗದಂತೆ ನೋಡಿಕೊಳ್ಳಲು ಸಹಕಾರಿಯಾಗಿದೆ ಎಂದರು.

ರಾಜ್ಯದಲ್ಲಿ ಪಶುಸಂಗೋಪನಾ ಇಲಾಖೆಯಲ್ಲಿ ವಿವಿಧ ಹಂತದ ಹುದ್ದೆ ಸೇರಿದಂತೆ ಒಟ್ಟು 18 ಸಾವಿರ ಹುದ್ದೆಗಳಿವೆ. ಅವುಗಳಲ್ಲಿ ಕೇವಲ 9 ಸಾವಿರ ಹುದ್ದೆಗಳು ಭರ್ತಿಯಾಗಿದ್ದು, ಇನ್ನು 9 ಸಾವಿರ ಹುದ್ದೆ ಖಾಲಿ ಇವೆ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ 400 ಪಶುವೈದ್ಯರನ್ನು, 250 ಇನ್ಸ್‌ಪೆಕ್ಟರ್‌ಗಳ ನೇಮಕ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ. ಹುದ್ದೆಗಳು ಖಾಲಿ ಇದ್ದರೂ ನಮ್ಮ ಸಿಬ್ಬಂದಿ ಜಾನುವಾರುಗಳಿಗೆ ಆರೋಗ್ಯ ಸೇವೆ ಒದಗಿಸುತ್ತಿದ್ದಾರೆ ಎಂದು ಶ್ಲಾಘಿಸಿದರು.

ಕೊಡವ ಭಾಷೆಯ 'ಬೊಳ್ಳಿ ಬಿಲ್' ಬಿಡುಗಡೆ

ಸಮಾಜದ ಅಂಕು-ಡೊಂಕು, ಪಿಡುಗುಗಳ ಮೇಲೆ ಬೆಳಕು ಚೆಲ್ಲುವ ಕೃತಿ



ಮಡಿಕೇರಿ,ಸೆ22– ಬರಹಗಾರ ಉಡುವೆರ ವಿಠಲ್ ತಿಮ್ಮಯ್ಯ ಅವರು ಬರೆದಿರುವ ಕೊಡವ ಮಕ್ಕಡ ಕೂಟದ 73ನೇ ಪುಸ್ತಕ ಕೊಡವ ಭಾಷೆಯ 'ಬೊಳ್ಳಿ ಬಿಲ್ಲ್' ಬಿಡುಗಡೆಗೊಂಡಿದೆ.

ನಗರದ ಪತ್ರಿಕಾ ಭವನದಲ್ಲಿ ಡಿಎಫ್‌ಓ ಅಜ್ಜಿಕುಟ್ಟಿರ ಪೂವಯ್ಯ ಅವರು ಪುಸ್ತಕ ಬಿಡುಗಡೆ ಮಾಡಿದರು. ನಂತರ ಮಾತನಾಡಿದ ಅವರು, ಸಾಹಿತ್ಯ ಕ್ಷೇತ್ರ ಬೇರೆ ಕ್ಷೇತ್ರಗಳಂತಲ್ಲ. ಇದೊಂದು ವಿಭಿನ್ನ ಕ್ಷೇತ್ರವಾಗಿದ್ದು, ಕಜ್ಜಿಣದ ಕಡಲೆ ಇದ್ದಂತೆ, ಇದಕ್ಕೆ ಸ್ವಯಂ ಪ್ರತಿಭೆ ಅಗತ್ಯ ಎಂದರು. ಒಂದು ಒಳ್ಳೆಯ ಪುಸ್ತಕ ಮನುಷ್ಯನ ಒಳ್ಳೆಯ ಸ್ನೇಹಿತ ಇದ್ದ ಹಾಗೆ. ಪುಸ್ತಕ ಓದುವುದರಿಂದ ಹೆಚ್ಚಿನ ಜ್ಞಾನ, ಉತ್ತಮ ಗುಣಗಳನ್ನು ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ. ಪುಸ್ತಕವು ಸಮಾಜದ ಅಂಕು–ಡೊಂಕು, ಪಿಡುಗುಗಳನ್ನು ಎತ್ತಿ ತೋರುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಹೆಚ್ಚು ಸಹಕಾರಿಯಾಗಿದೆ ಎಂದು ತಿಳಿಸಿದರು.

ಹೊಸ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವ ಮೂಲಕ ಕೊಡವ ಮಕ್ಕಡ ಕೂಟದ ಅಧ್ಯಕ್ಷ ಬೊಳ್ಳಜಿರ ಬಿ.ಅಯ್ಯಪ್ಪ ಅವರು ಕೊಡಗಿನ ಸಾಹಿತ್ಯದ ಹಿರಿಮೆಯನ್ನು ಹೆಚ್ಚಿಸುವ ಕೆಲಸ ಮಾಡುತ್ತಿರುವುದು ಶ್ಲಾಘನೀಯ ಎಂದರು.

'ಬೊಳ್ಳಿ ಬಿಲ್ಲ್' ಪುಸ್ತಕದ ಮೂಲಕ ಬರಹಗಾರ ಉಡುವೆರ ವಿಠಲ್ ತಿಮ್ಮಯ್ಯ ಅವರು, ಕೊಡಗಿನ ಸಂಸ್ಕೃತಿ, ಆಚಾರ, ವಿಚಾರದ ಬಗ್ಗೆ ಬೆಳಕು ಚೆಲ್ಲುವ ಕೆಲಸ ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಪುಸ್ತಕಗಳು ಹೊರ ತರುವಂತಾಗಲಿ ಎಂದು ಪೂವಯ್ಯ ಶುಭ ಹಾರೈಸಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಕೊಡವ ಮಕ್ಕಡ ಕೂಟದ ಅಧ್ಯಕ್ಷ ಬೊಳ್ಳಜಿರ ಬಿ.ಅಯ್ಯಪ್ಪ ಸಾಮಾಜಿಕ ಕಳಕಳಿ, ಕೊಡಗಿನ ಅಭ್ಯುದಯ, ಸಂಸ್ಕೃತಿ, ಸಾಹಿತ್ಯ ಬೆಳವಣಿಗೆಯ ಮೇಲಿನ ಆಸಕ್ತಿಯಿಂದ ನಿರಂತರ ಕಾರ್ಯನಿರ್ವಹಣೆಯಲ್ಲಿ ತೊಡಗಿರುವ ಕೊಡವ ಮಕ್ಕಡ ಕೂಟ ತನ್ನ ಅಧ್ಯಕ್ಷತೆಯಲ್ಲಿ ಈವರೆಗೆ ಜಿಲ್ಲೆಯ ಹಲವು ಬರಹಗಾರರು, ಸಾಹಿತಿಗಳು ಬರೆದ ಕೊಡವ, ಕನ್ನಡ, ಇಂಗ್ಲೀಷ್, ಹಿಂದಿ ಸೇರಿದಂತೆ ಒಟ್ಟು 72 ಕೃತಿಗಳನ್ನು ಬಿಡುಗಡೆ ಮಾಡಿದೆ. ಇದೀಗ 73ನೇ ಪುಸ್ತಕ 'ಬೊಳ್ಳಿ ಬಿಲ್ಲ್' ಅನ್ನು ಲೋಕಾರ್ಪಣೆ ಮಾಡಲಾಗಿದೆ ಎಂದರು.

ಕೊಡವ ಮಕ್ಕಡ ಕೂಟ ಪ್ರಕಟಿಸಿರುವ 72 ಪುಸ್ತಕಗಳಲ್ಲಿ ಐದು ಪುಸ್ತಕಗಳಿಗೆ ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಲಭಿಸಿದ್ದು, ಚಿಗುರೆಲೆಗಳು ಪುಸ್ತಕಕ್ಕೆ ರಾಜ್ಯ ಪ್ರಶಸ್ತಿ ಲಭಿಸಿದೆ. ನಾಲ್ಕು ಪುಸ್ತಕಗಳು ಕೊಡವ ಸಿನಿಮಾವಾಗಿದೆ ಇದೀಗ ಪತ್ರಕರ್ತ ಐತಿಚಂಡ ರಮೇಶ್ ಉತ್ತಪ್ಪ ಬರೆದ '1965ರ ಯುದ್ಧ ಹಾಗೂ ಕೊಡಗಿನ ಮಹಾವೀರ ಸ್ಕ್ವಾಲೀ ಅಜ್ಜಮಾಡ ದೇವಯ್ಯ' ಅವರ ಪುಸ್ತಕವು ಬಾಲಿವುಡ್ ಚಿತ್ರೀಕರಣಕ್ಕೆ ತಯಾರಿ ನಡೆಯುತ್ತಿದೆ ಬಾಲಿವುಡ್‌ನ ನಿರ್ದೇಶಕ ಸಂದೀಪ್ ಚಿತ್ರ ನಿರ್ದೇಶನಕ್ಕೆ ಕೊಡವ ಮಕ್ಕಡ ಕೂಟದ ವತಿಯಿಂದ ಎನ್‌ಓಸಿ ಪಡೆದುಕೊಂಡಿದೆ. ಅಲ್ಲದೇ ಸ್ಕ್ವಾ.ಲೀ.ಅಜ್ಜಮಾಡ ದೇವಯ್ಯ ಅವರ ಪತ್ನಿ ಸುಂದರಿ ದೇವಯ್ಯ ಮತ್ತು ಮಕ್ಕಳಿಂದ ಅನುಮತಿ ಪಡೆದಿದ್ದಾರೆ ಎಂದು ಮಾಹಿತಿ ನೀಡಿದರು.

ಹಲವು ದಾಖಲೀಕರಣ ಪುಸ್ತಕ, ಸಾಧಕರ ವಿವರದ ಪುಸ್ತಕ ಕೊಡಗಿನ ಹಾಗೂ ಕೊಡವ ಆಚಾರ, ವಿಚಾರ ಸಂಬಂಧಪಟ್ಟಂತ ಪುಸ್ತಕ, ಕೊಡಗಿನ ಎರಡು ಮಹಾವೀರ ಚಕ್ರ ಪುರಸ್ಕೃತ ವೀರ ಯೋಧರ ಪುಸ್ತಕಗಳನ್ನು ಲೋಕಾರ್ಪಣೆ ಮಾಡುವ ಮೂಲಕ ಸಾಹಿತ್ಯ ಕ್ಷೇತ್ರಕ್ಕೆ ಕೊಡುಗೆಯಾಗಿ ನೀಡಿದೆ. ಅಲ್ಲದೇ ಹೊಸ ಬರಹಗಾರರನ್ನು ಪ್ರೋತ್ಸಾಹಿಸುತ್ತ ಬಂದಿದೆ ಎಂದರು. ಮುಂದಿನ ದಿನಗಳಲ್ಲೂ ಬರಹಗಾರರ ಪ್ರಯತ್ನಕ್ಕೆ ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಬೊಳ್ಳಿ ಬಿಲ್ಲ್ ಪುಸ್ತಕದ ಬರಹಗಾರ ಉಡುವೆರ ವಿಠಲ್ ತಿಮ್ಮಯ್ಯ ಮಾತನಾಡಿ, 'ಬೊಳ್ಳಿ ಬಿಲ್ಲ್' ಪುಸ್ತಕವು ಕೊಡವ ಪದ್ಧತಿ, ಸಂಸ್ಕೃತಿ, ಮರ ಗಿಡ, ವಾತಾವರಣ, ಹಬ್ಬ ಹರಿದಿನ, ಕೊಡಗಿನ ಪ್ರಕೃತಿ, ಔಷಧಿ ಗಿಡ ಮೂಲಿಕೆ ಬಗ್ಗೆ ಮಾಹಿತಿ ಇರುವ ಸಂಗ್ರಹ ಪುಸ್ತಕವಾಗಿದ್ದು, ಇದು ಮೊದಲ ಕೃತಿಯಾಗಿದೆ ಎಂದರು. ಬಾಲ್ಯದಿಂದಲೇ ಓದುವ ಹಾವ್ಯಸ ಇದ್ದರಿಂದ ಸಣ್ಣ ಸಣ್ಣ ಕಥೆ, ಚುಟುಕು ಬರೆಯುತ್ತಿದ್ದು, ಇದೀಗ ಪುಸ್ತಕ ಬರೆಯಲು ಸಹಕಾರಿಯಾಗಿದೆ ಎಂದ ಅವರು, ಪುಸ್ತಕ ಬರೆಯಲು ಸಹಕರಿಸಿದ ಎಲ್ಲರಿಗೂ ಇದೇ ಸಂದರ್ಭ ಅಭಿನಂದನೆ ಸಲ್ಲಿಸಿದರು.

ಸಮಾಜ ಸೇವಕರಾದ ತೆಕ್ಕಬೊಟ್ಟೋಳಂಡ ಗಣೇಶ್, ಅಡ್ಡಂಡ ಚಂಗಪ್ಪ ಹಾಗೂ ಕೋಟೇರ ತಾರಾ ನಂಜಪ್ಪ ಉಪಸ್ಥಿತರಿದ್ದರು.

ಮಡಿಕೇರಿ ದಸರಾಗೆ 2 ಕೋಟಿ ರೂ.ಗೆ ಬೇಡಿಕೆ

ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದ ದಸರಾ ಸಮಿತಿ



ಮಡಿಕೇರಿ,ಸೆ.22– ಮಡಿಕೇರಿ ದಸರಾ ಸಮಿತಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ದಸರಾ ಆಚರಣೆಗೆ 2 ಕೋಟಿ ರೂ.ಗಳನ್ನು ಬಿಡುಗಡೆಗೊಳಿಸುವಂತೆ ಮನವಿ ಮಾಡಿತು. ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ ಹಾಗೂ ಮಡಿಕೇರಿ ಕ್ಷೇತ್ರದ ಶಾಸಕ ಡಾ.ಮಂತರ್ ಗೌಡ ಅವರ ನೇತೃತ್ವದ ನಿಯೋಗ ಮುಖ್ಯಮಂತ್ರಿಗಳನ್ನು ಭೇಟಿಯಾಗಿ ದಸರಾ ಜನೋತ್ಸವದ ಕುರಿತು ಚರ್ಚಿಸಿತು. 2 ಕೋಟಿ ರೂ. ಅನುದಾನ ನೀಡಿ ಸಹಕರಿಸುವಂತೆ ಕೋರಿಕೊಂಡಿತು.

ಮಡಿಕೇರಿ ದಸರಾ ಸಮಿತಿ ಅಧ್ಯಕ್ಷೆ ಹಾಗೂ ನಗರಸಭಾ ಅಧ್ಯಕ್ಷೆಯೂ ಆದ ಅನಿತಾ ಪೂವಯ್ಯ, ಕಾರ್ಯಾಧ್ಯಕ್ಷ ಪ್ರಕಾಶ್ ಆಚಾರ್ಯ, ಪ್ರಧಾನ ಕಾರ್ಯದರ್ಶಿ ಬಿ.ವೈ.ರಾಜೇಶ್, ಪ್ರಮುಖರಾದ ಟಿ.ಪಿ.ರಮೇಶ್, ನಗರ ಸಭಾ ಸದಸ್ಯ ಅರುಣ್ ಶೆಟ್ಟಿ ಮತ್ತಿತರರು ಈ ಸಂದರ್ಭ ಹಾಜರಿದ್ದರು.

ಅನುದಾನದ ವಿಶ್ವಾಸ: ಮುಖ್ಯಮಂತ್ರಿಗಳನ್ನು ಭೇಟಿಯಾದ ಕುರಿತು ಮಾತನಾಡಿದ ಕಾರ್ಯಾಧ್ಯಕ್ಷ ಪ್ರಕಾಶ್ ಆಚಾರ್ಯ, ಕಾವೇರಿ ವಿವಾದ ಮತ್ತು ಬರದ ಪರಿಸ್ಥಿತಿಯ ಒತ್ತಡದ ನಡುವೆಯೂ ಮುಖ್ಯಮಂತ್ರಿಗಳು ನಮ್ಮ ಮನವಿಗೆ ಉತ್ತಮ ರೀತಿಯಲ್ಲಿ ಸ್ಪಂದಿಸಿದ್ದಾರೆ. ಸಂಭ್ರಮದ ದಸರಾ ಆಚರಣೆಗೆ ಹೆಚ್ಚಿನ ಅನುದಾನ ನೀಡುತ್ತಾರೆ ಎನ್ನುವ ವಿಶ್ವಾಸವಿದೆ ಎಂದರು.

ದೊಡ್ಡತ್ತೂರಲ್ಲಿ ಹಾವು ಕಚ್ಚಿ ಯುವಕ ಸಾವು

ಕುಶಾಲನಗರ, ಸೆ.22– ಸಮೀಪದ ಕೂಡುಮಂಗಳೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ದೊಡ್ಡತ್ತೂರು ಗ್ರಾಮದಲ್ಲಿ ಹಾವು ಕಚ್ಚಿ ಯುವಕ ಮೃತಪಟ್ಟಿರುವ ಘಟನೆ ಶುಕ್ರವಾರ ನಡೆದಿದೆ.



ಪಿರಿಯಾಪಟ್ಟಣ ಮೂಲದವನಾದ ಬೆಂಡೆಬೆಟ್ಟ ಸಂಬಂಧಿಕರ ಮನೆಯಲ್ಲಿ ವಾಸವಿದ್ದ ರಕ್ಷಿತ್ (24) ಮೃತಪಟ್ಟ ದುರ್ದೈವಿಯಾಗಿದ್ದಾನೆ. ಜಮೀನಿನ ಕೆಲಸದಲ್ಲಿ ಮಾಡುತ್ತಿದ್ದ ಸಂದರ್ಭ ಹಾವು ಕಚ್ಚಿದೆ. ಕೂಡಲೇ ಆಸ್ಪತ್ರೆಗೆ ಕರೆತರುತ್ತಿರುವ ವೇಳೆ ಆತ ಮೃತಪಟ್ಟಿದ್ದಾನೆ. ವಿಷಯ ತಿಳಿದು ಶಾಸಕ ಮಂಥರ್ ಗೌಡ ಮೃತನ ಕುಟುಂಬಕ್ಕೆ ಸಾಂತ್ವನ ಹೇಳಿದರು. ದೂರವಾಣಿ ಮೂಲಕ ಕುಟುಂಬದವರಿಗೆ ಧೈರ್ಯ ತುಂಬಿದ ಶಾಸಕರು ಮಾನವೀತೆ ಮೆರೆಯುವ ಮೂಲಕ ಸರ್ಕಾರದಿಂದ ಅಗತ್ಯ ಪರಿಹಾರ ಒದಗಿಸಲು ಕ್ರಮಕೈಗೊಳ್ಳುವ ಭರವಸೆ ನೀಡಿದರು.

ಅಕ್ರಮವಾಗಿ ಶ್ರೀಗಂಧ ಸಾಗಿಸುತ್ತಿದ್ದ ಇಬ್ಬರ ಬಂಧನ



ಕುಶಾಲನಗರ, ಸೆ.22– ಸಮೀಪದ ಹೆಬ್ಬಾಲೆ ವಲಯದ ಜೇನುಕಲ್ಲುಬೆಟ್ಟ ಮೀಸಲು ಅರಣ್ಯ ಪ್ರದೇಶ ವ್ಯಾಪ್ತಿಯ ಚಿಕ್ಕನಾಯಕನ ಹೊಸಳ್ಳಿಯಲ್ಲಿ ಕಾನೂನು ಬಾಹಿರವಾಗಿ ಶ್ರೀಗಂಧದ ಮರದ ತುಂಡುಗಳನ್ನು ಸಾಗಿಸುತ್ತಿದ್ದ ವೇಳೆ ಅರಣ್ಯ ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿ ಮಾಲು ಸಮೇತ ಇಬ್ಬರು ಆರೋಪಿಗಳನ್ನು ಬಂಧಿಸಿರುವ ಘಟನೆ ನಡೆದಿದೆ.

ಶಿರಂಗಾಲ ಗ್ರಾಮದ ಬಿ.ಕೆ.ವಿಜಯ ಮತ್ತು ಎಸ್.ಪಿ.ಗಣೇಶ್ ಬಂಧಿತ ವ್ಯಕ್ತಿಗಳಾಗಿದ್ದಾರೆ. ಮತ್ತೋರ್ವ ರಾಘವ ಎಂಬ ವ್ಯಕ್ತಿ ತಲೆಮರೆಸಿಕೊಂಡಿದ್ದು ಪತ್ತೆಗೆ ಅರಣ್ಯ ಇಲಾಖೆ ಕ್ರಮ ಕೈಗೊಳ್ಳಲಾಗಿದೆ.

ಡಿಎಫ್‌ಓ ಕೆ.ಟಿ.ಪೂವಯ್ಯ ಮತ್ತು ಎಸಿಎಫ್ ಗೋಪಾಲ್ ಮಾರ್ಗದರ್ಶನದಲ್ಲಿ ಸೋಮವಾರಪೇಟೆ ವಲಯ ಅರಣ್ಯಾಧಿಕಾರಿ ಎಚ್.ಪಿ.ಚೇತನ್ ಸೂಚನೆ ಮೇರೆಗೆ ಹೆಬ್ಬಾಲೆ ಶಾಖೆಯ ಉಪ ವಲಯ ಅರಣ್ಯಾಧಿಕಾರಿ ಎಂ.ಕೆ.ಭರತ್ ನೇತೃತ್ವದಲ್ಲಿ ಸಿಬ್ಬಂದಿಗಳು ಚಿಕ್ಕನಾಯಕನಹೊಸಳ್ಳಿ ಎಂಬ ಗ್ರಾಮದ ಸರ್ವೆ ನಂಬರ್ 25 ರಲ್ಲಿ ಶ್ರೀಗಂದದ ಮರವನ್ನು ಕಡಿದು ತುಂಡುಗಳಾಗಿ ಮಾಡಿಕೊಂಡು ಸಾಗಿಸುತ್ತಿರುವ ವೇಳೆ ಕಾರ್ಯಾಚರಣೆ ನಡೆಸಿ ಮಾಲು ಸಮೇತ ಆರೋಪಿಗಳನ್ನು ವಶಕ್ಕೆ ಪಡೆದರು. ಆರೋಪಿಗಳ ವಿರುದ್ಧ ಅರಣ್ಯ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ನ್ಯಾಯಾಲಯಕ್ಕೆ ಹಾಜರು ಪಡಿಸಲಾಯಿತು. ಕಾರ್ಯಾಚರಣೆಯಲ್ಲಿ ಅರಣ್ಯ ಪಾಲಕ ಎಚ್.ಎಸ್.ಲೋಕೇಶ್, ಅರಣ್ಯ ವೀಕ್ಷಕ ರಾಜಪ್ಪ ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಕಾಡಿಗೆ ಆನೆಗಳನ್ನು ಓಡಿಸುವ ಕಾರ್ಯಾಚರಣೆ ಆರಂಭ

ವಿ.ಪೇಟೆ ಕಾಫಿ ತೋಟಗಳಲ್ಲಿ ಬೀಡುಬಿಟ್ಟಿದ್ದ ಕಾಡಾನೆಗಳು



ವಿರಾಜಪೇಟೆ, ಸೆ.22– ವಿರಾಜಪೇಟೆ ತಾಲೂಕಿನ ಅನೇಕ ಕಾಫಿ ತೋಟಗಳಲ್ಲಿ ಬೀಡುಬಿಟ್ಟಿರುವ ಕಾಡಾನೆಗಳನ್ನು ಕಾಡಿಗೆ ಅಟ್ಟುವ ಕಾರ್ಯಾಚರಣೆಯನ್ನು ಅರಣ್ಯ ಸಿಬ್ಬಂದಿಗಳು ಆರಂಭಿಸಿದ್ದಾರೆ.

ಗ್ರಾಮಸ್ಥರ ಮನವಿಗೆ ಸ್ಪಂದಿಸಿದ ಅರಣ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಗ್ರಾಮಸ್ಥರ ಸಹಕಾರದೊಂದಿಗೆ ಕಾಡಾನೆಗಳನ್ನು ಕಾಡಿಗೆ ಅಟ್ಟುವ ಕಾರ್ಯಾಚರಣೆಯನ್ನು ಆರಂಭಿಸಿದ್ದಾರೆ.

ತಾಲೂಕಿನ ನಾಂಗಾಲ ಗ್ರಾಮ ಮತ್ತು ಒಂದನೇ ರುದ್ರುಗುಪ್ಪೆ ಹಾಗೂ ಇತರ ಕಾಫಿ ತೋಟಗಳಲ್ಲಿ ಕಾಡಾನೆಗಳ ಹಿಂಡು ಬೀಡುಬಿಟ್ಟಿದ್ದು, ಕಾಫಿ ತೋಟದಲ್ಲಿ ಬಾಳೆ ಮತ್ತು ಅಡಿಕೆ ಗಿಡ ಸೇರಿದಂತೆ ಫಸಲಿಗೆ ಬಂದ ಕಾಫಿ ಗಿಡಗಳನ್ನು ಧ್ವಂಸಗೊಳಿಸಿದ್ದು, ಸ್ಥಳಿಯ ತೋಟದ ಮಾಲಿಕರು ಹಾಗೂ ಗ್ರಾಮಸ್ಥರು ಆನೆಗಳನ್ನು ಕಾಡಿಗೆ ಓಡಿಸುವಂತೆ ಮನವಿ ಮಾಡಿದ ಮೇರೆ ವಿರಾಜಪೇಟೆ ಅರಣ್ಯ ಇಲಾಖೆಯ ಆನೆ ಕಾರ್ಯಪಡೆ ಮತ್ತು ಮಾಕುಟ್ಟ ವನ್ಯಜೀವಿ ವಲಯ ಅರಣ್ಯ ಹಿರಿಯ ಅಧಿಕಾರಿ ದೇಚಮ್ಮ ಅವರ ನೇತೃತ್ವದಲ್ಲಿ ಸಿಬ್ಬಂದಿಗಳು ಕಾರ್ಯಾಚರಣೆ ಆರಂಭಿಸಿದರು.

ಕಾಫಿ ತೋಟದಲ್ಲಿದ್ದ ಮರಿ ಆನೆ ಸೇರಿದಂತೆ ಒಟ್ಟು 6 ಆನೆಗಳನ್ನು ಕಾಡಿಗೆ ಅಟ್ಟುವ ಕಾರ್ಯ ಕೈಗೊಳ್ಳಲಾಗಿತ್ತು. ಈ ಸಂದರ್ಭ ಗ್ರಾಮಸ್ಥರಾದ ಪಿ.ಬಿ.ಸೋಮಯ್ಯ ಮಾತನಾಡಿ, ಕಾಡಾನೆಗಳ ಹಾವಳಿ ಮಿತಿಮೀರಿದ್ದು ಗ್ರಾಮಸ್ಥರು ಭಯದಿಂದ ಓಡಾಡುವಂತಾಗಿದೆ ಮತ್ತು ಬೆಳೆಗಾರರು ಬೆಳೆ ನಷ್ಟದಿಂದ ಕಂಗಲಾಗಿದ್ದಾರೆ. ಆದ್ದರಿಂದ ಸರಕಾರ ಆನೆಗಳನ್ನು ನಿಯಂತ್ರಿಸುವ ಮೂಲಕ ಬೆಳೆ ಪರಿಹಾರ ನೀಡುವಂತೆ ಗ್ರಾಮಸ್ಥರ ಪರವಾಗಿ ತಿಳಿಸಿದರು.

ಕಂದಾಯ ಇಲಾಖೆ ಅಧಿಕಾರಿಗಳ ಮೇಲೆ ಹೆಜ್ಜೇನು ದಾಳಿ



ಮಡಿಕೇರಿ,ಸೆ.22– ಕೆರೆ ಸರ್ವೆಗೆ ಎಂದು ತೆರಳಿದ್ದ ಕಂದಾಯ ಇಲಾಖೆ ಅಧಿಕಾರಿಗಳ ಮೇಲೆ ಹೆಜ್ಜೇನು ಹಿಂಡು ದಾಳಿ ನಡೆಸಿದ ಘಟನೆ ಸೋಮವಾರಪೇಟೆ ತಾಲೂಕಿನ ಕೊಡ್ಲಿಪೇಟೆ ಹೋಬಳಿಯಲ್ಲಿ ನಡೆದಿದೆ. ಹಂಡ್ಲಿ ಪಂಚಾಯತ್ ವ್ಯಾಪ್ತಿಯ ಬೆಳ್ಳಾರಳ್ಳಿ ಗ್ರಾಮಕ್ಕೆ ಕಂದಾಯ ಇಲಾಖೆ ಅಧಿಕಾರಿಗಳಾದ ಮಾದೇಗೌಡ ಮತ್ತು ಸಹಾಯಕ ಸಂತೋಷ್, ಹಂಡ್ಲಿ ವೃತ್ತದ ಗ್ರಾಮ ಆಡಳಿತಾಧಿಕಾರಿ ಶ್ವೇತಾಶ್ರಿ, ಗ್ರಾಮ ಸಹಾಯಕ ರಾಜು ಅವರು ಕೆರೆ ಸರ್ವೆಗೆ ತೆರಳಿದ್ದರು. ಈ ವೇಳೆ ಹೆಜ್ಜೇನು ಹಿಂಡು ಏಕಾಏಕಿ ದಾಳಿ ನಡೆಸಿವೆ.

ಈ ಘಟನೆಯಲ್ಲಿ ಶ್ವೇತಾಶ್ರೀ ಅವರ ಸ್ಥಿತಿ ಗಂಭೀರವಾಗಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ಹಾಸನ ಆಸ್ಪತ್ರೆಗೆ ದಾಖಲಿಸಲಾಗಿದೆ. ಮಾದೇಗೌಡ ಅವರನ್ನು ಮೊದಲಿಗೆ ಕುಶಾಲನಗರ ಸರಕಾರಿ ಆಸ್ಪತ್ರೆಗೆ ದಾಖಲಿಸಿ ಪ್ರಥಮ ಚಿಕಿತ್ಸೆ ನೀಡಲಾಗಿದೆ. ಬಳಿಕ ವೈದ್ಯರ ಶಿಫಾರಸಿನಂತೆ ಮೈಸೂರು ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ.

ಕಾವೇರಿ ಕಿಚ್ಚು: ಬಿಎಸ್‌ಎನ್‌ಎಲ್ ಕಚೇರಿಗೆ ಕರ್ನಾಟಕ ಸೇನಾ ಪಡೆ ಮುತ್ತಿಗೆ



ಚಾಮರಾಜನಗರ, ಸೆ.22– ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಿ ಕಾವೇರಿ ವಿವಾದ ಬಗೆಹರಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ನಗರದಲ್ಲಿ ಬಿಎಸ್‌ಎನ್‌ಎಲ್ ಕಚೇರಿಗೆ ಶುಕ್ರವಾರ ಮುತ್ತಿಗೆ ಹಾಕಲಾಯಿತು.

ನಗರದ ಬ್ರಹ್ಮದೇವ ಬುಕ್ ಡಿಪೋ ಮುಂಭಾಗ ಜಮಾಯಿಸಿದ ಪ್ರತಿಭಟನಾನಿರತರು ಅಲ್ಲಿಂದ ಮೆರವಣಿಗೆ ಹೊರಟು ಬಿಎಸ್‌ಎನ್‌ಎಲ್ ಕಚೇರಿಗೆ ತೆರಳಿ ಮುತ್ತಿಗೆ ಹಾಕಿ ಕೇಂದ್ರ, ತಮಿಳುನಾಡು ಸರ್ಕಾರ, ಕಾವೇರಿ ನಿರ್ವಹಣಾ ಮಂಡಳಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮುಖಂಡ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ರಾಜ್ಯದ ಜನತೆಗೆ ಕುಡಿಯಲು ನೀರಿಲ್ಲ. ಆದರೆ ತಮಿಳುನಾಡು 3ನೇ ಬೆಳೆಗೆ ನೀರು ಕೇಳುತ್ತಿದೆ. ಸರ್ಕಾರ ಯಾವುದೇ ಕಾರಣಕ್ಕೂ ತಮಿಳುನಾಡಿಗೆ ನೀರನ್ನು ಹರಿಸಬಾರದು. ತಮಿಳುನಾಡು ಇದೇ ರೀತಿ ಕ್ಯಾತೆ ತೆಗೆಯುತ್ತಿದ್ದರೇ ತಮಿಳು ಚಿತ್ರ, ತಮಿಳು ವಾಹನಗಳಿಗೆ ನಿರ್ಬಂಧ ಹೇರುತ್ತೇವೆ ಎಂದು ಕಿಡಿಕಾರಿದರು.

ಕಾವೇರಿ ವಿಚಾರದಲ್ಲಿ ಕರ್ನಾಟಕಕ್ಕೆ ಇಷ್ಟೆಲ್ಲಾ ಅನ್ಯಾಯವಾದರೂ ಕೇಂದ್ರ ಸರ್ಕಾರ ಮೌನ ವಹಿಸಿರುವುದು ಸರಿಯಲ್ಲ. ಕೂಡಲೇ ಮಧ್ಯಪ್ರವೇಶಿಸಿ ವಿವಾದ ಇತ್ಯರ್ಥ ಮಾಡಬೇಕು. ಸರ್ಕಾರದಿಂದ ರಾಜ್ಯದ ರೈತರಿಗೆ, ಜನರಿಗೆ ಅನ್ಯಾಯವಾಗುತ್ತಿದೆ. ಇದನ್ನು ಸಹಿಸುದಿಲ್ಲ. ಕೂಡಲೇ ಕೇಂದ್ರ ಸರ್ಕಾರ ಮಧ್ಯ ಪ್ರವೇಶ ಮಾಡಬೇಕೆಂದು ಒತ್ತಾಯಿಸಿದರು.

ಕರ್ನಾಟಕದಿಂದ 25 ಮಂದಿ ಸಂಸದರನ್ನು ಆಯ್ಕೆ ಮಾಡಿದ್ದರೂ ಕೂಡ ಕೇಂದ್ರ ಸರ್ಕಾರ ಸಂಕಷ್ಟ ಸೂತ್ರ ಪಾಲಿಸಲು ಆದೇಶ ಮಾಡದಿರುವುದು ಅತ್ಯಂತ ಖಂಡನೀಯ ಎಂದರು.

ಕೇಂದ್ರ ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ಕರ್ನಾಟಕಕ್ಕೆ ನ್ಯಾಯ ಒದಗಿಸಿಕೊಡಬೇಕು. ಕರ್ನಾಟಕ ಸರ್ಕಾರ ತಮಿಳನಾಡಿಗೆ ಹರಿಸುತ್ತಿರುವ ನೀರನ್ನು ತಕ್ಷಣವೇ ಸ್ಥಗಿತಗೊಳಿಸಿ ರಾಜ್ಯ ಜನತೆಯ ಹಿತ ಕಾಪಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಶಾ.ಮುರಳಿ, ಚಾ.ವೆಂ.ರಾಜ್‌ಗೋಪಾಲ್, ಗು.ಪುರುಷೋತ್ತಮ್, ನಿಜಧ್ವನಿ ಗೋವಿಂದರಾಜು, ಮಹೇಶ್, ಚಾ.ಹ.ರಾಮು, ಚಾ.ರಾ.ಕುಮಾರ್, ಚಾ.ಸಿ.ಸಿದ್ದರಾಜು, ತಾಂಡವಮೂರ್ತಿ, ಸುರೇಶ್ ವಾಜಪೇಯಿ, ನಂಜುಂಡಸ್ವಾಮಿ, ಸಾಗರ್ ರಾವತ್ ಇತರರಿದ್ದರು.

ಕುರಟ್ಟಿ ಹೊಸೂರು, ಭದ್ರಯ್ಯನಹಳ್ಳಿಗೆ ಆರೋಗ್ಯ ಸಚಿವರ ಭೇಟಿ

ವಿರಳ ಚರ್ಮ ರೋಗದಿಂದ ಬಳಲುತ್ತಿರುವವರ ಆರೋಗ್ಯ ವಿಚಾರಣೆ

ಚಾಮರಾಜನಗರ, ಸೆ22– ವಿರಳ ಚರ್ಮ ರೋಗ ಪತ್ತೆಯಾಗಿರುವ ಹನೂರು ತಾಲೂಕಿನ ಕುರಟ್ಟಿ ಹೊಸೂರು ಹಾಗೂ ಭದ್ರಯ್ಯನಹಳ್ಳಿ ಗ್ರಾಮಗಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಶುಕ್ರವಾರ ಭೇಟಿ ನೀಡಿ ಚರ್ಮ ರೋಗದಿಂದ ಬಳಲುತ್ತಿರುವವರ ಆರೋಗ್ಯ ವಿಚಾರಿಸಿದರು.

ಭದ್ರಯ್ಯನಹಳ್ಳಿ ಗ್ರಾಮದಲ್ಲಿ ಚರ್ಮ ರೋಗದಿಂದ ಬಳಲುತ್ತಿರುವ ಮಗುವಿನ ಮನೆಗೆ ಭೇಟಿ ನೀಡಿದ ಸಚಿವರು, ಎಷ್ಟು ದಿನದಿಂದ ತೊಂದರೆ ಕಾಣಿಸಿಕೊಂಡಿದೆ. ಯಾವ ಚಿಕಿತ್ಸೆ ನೀಡಲಾಗುತ್ತಿದೆ. ಯಾವ ಔಷಧಗಳನ್ನು ನೀಡಲಾಗುತ್ತಿದೆ ಎಂಬ ಬಗ್ಗೆ ಮಾಹಿತಿ ಪಡೆದರು.

ಕುರಟ್ಟಿ ಹೊಸೂರು ಗ್ರಾಮಕ್ಕೆ ಭೇಟಿ ನೀಡಿ ಚರ್ಮ ರೋಗದಿಂದ ಬಳಲುತ್ತಿರುವ ಬಾಲಕಿ ಮನೆಗೆ ತೆರಳಿ ಅಲ್ಲಿಯೂ ಆರೋಗ್ಯ ವಿಚಾರಿಸಿ ವಿವರ ಪಡೆದರು. ನೀಡಲಾಗುತ್ತಿರುವ ಔಷಧಗಳು, ಚಿಕಿತ್ಸೆ, ಆರೈಕೆ ಬಗ್ಗೆ ವೈದ್ಯಾಧಿಕಾರಿಗಳಿಂದ ಮಾಹಿತಿ ಪಡೆದರು.

ಇದೇ ವೇಳೆ ಕುಟುಂಬಸ್ಥರಿಗೆ ಹೆಚ್ಚಿನ ನೆರವು, ಪರಿಹಾರ ನೀಡಬೇಕೆಂದು ಸ್ಥಳೀಯರು ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಸಚಿವರು ಚಿಕಿತ್ಸೆ, ಔಷಧಗಳನ್ನು ಅಗತ್ಯಕ್ಕೆ ಅನುಗುಣವಾಗಿ ನೀಡಲಾಗುವುದು. ಪರಿಹಾರ ಕೊಡಿಸುವ ನಿಟ್ಟಿನಲ್ಲಿಯೂ ಅಗತ್ಯ ಕ್ರಮ ವಹಿಸಲಾಗುವುದು ಎಂದರು.

ಇದೇ ವೇಳೆ ವಿಶೇಷ ಪ್ರಕರಣ ಎಂದು ಪರಿಗಣಿಸಿ ಪಿಂಚಣಿ ನೀಡುವ ಆದೇಶ ಪತ್ರವನ್ನು ಸಚಿವರು ಪೋಷಕರಿಗೆ ವಿತರಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ದಿನೇಶ್ ಗುಂಡೂರಾವ್, ಹನೂರು ತಾಲೂಕಿನ ಎರಡೂರು ಗ್ರಾಮಗಳಲ್ಲಿ ವಿರಳ ಚರ್ಮರೋಗ ಕಂಡು ಬಂದ ಹಿನ್ನೆಲೆಯಲ್ಲಿ ಆರೋಗ್ಯಾಧಿಕಾರಿಗಳ ತಂಡವನ್ನು ಕಳುಹಿಸಿಕೊಡಲಾಗಿತ್ತು. ತಾವೂ ಸಹ ಈ ಬಗ್ಗೆ ಸಂಪೂರ್ಣ ವಿವರ ಪಡೆದುಕೊಂಡಿದ್ದೇನೆ. ಅಪರೂಪದ ಈ ರೋಗ ಇತರೆ ಜಿಲ್ಲೆಯ ಕೆಲವೆಡೆ ಕಂಡು ಬಂದಿರುವ ಮಾಹಿತಿ ಇದೆ. ಇದರ ನಿಯಂತ್ರಣ ಹಾಗೂ ನಿರ್ಮೂಲನೆಗೆ ವಿಶೇಷ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದರು.



ರೋಗ ಬಾಧಿತರಿಗೆ ಔಷಧ, ಪೌಷ್ಠಿಕಾಂಶವುಳ್ಳ ಆಹಾರ ಒದಗಿಸುವ ನಿಟ್ಟಿನಲ್ಲಿ ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಚಿಕ್ಕ ವಯಸ್ಸಿನಲ್ಲೇ ವಿರಳ ಚರ್ಮ ರೋಗ ಕಾಣಿಸಿಕೊಂಡಿರುವುದು ನೋವಿನ ಸಂಗತಿಯಾಗಿದೆ. ಸಂಕಷ್ಟದಲ್ಲಿರುವ ಕುಟುಂಬಕ್ಕೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಬೆಂಗಳೂರಿಗೆ ತೆರಳಿದ ನಂತರ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದರು.

ಗಂಭೀರವಾಗಿರುವ ಈ ಚರ್ಮ ರೋಗ ಬರದಂತೆ ತಡೆಯಲು ಅನುಸರಿಸಬೇಕಿರುವ ವಿಧಾನ ಹಾಗೂ ಪರೀಕ್ಷೆಗಳ ಬಗ್ಗೆ ತಿಳಿವಳಿಕೆ ನೀಡಲಾಗುತ್ತಿದೆ. ಗರ್ಭಾವಸ್ಥೆಯಲ್ಲಿಯೇ ರೋಗ ಪತ್ತೆಗೆ ಅವಕಾಶವಿದೆ. ಅಂತಹ ಸಂದರ್ಭಗಳಲ್ಲಿ ಅನುಸರಿಸಬೇಕಾದ ವೈದ್ಯಕೀಯ ಕ್ರಮಗಳ ಬಗ್ಗೆಯೂ ತಿಳಿಸಲಾಗುತ್ತಿದೆ. ರೋಗ ಕಂಡು ಬಂದಿರುವ ಪ್ರದೇಶ ಹಾಗೂ ಕುಟುಂಬಗಳಲ್ಲಿ ವಿಶೇಷವಾಗಿ ಮದುವೆ ವಯಸ್ಸಿನ ಗಂಡು ಹಾಗೂ ಹೆಣ್ಣು ಮಕ್ಕಳಲ್ಲಿ ಪರೀಕ್ಷೆ ನಡೆಸಿ ರೋಗ ಬರದಂತೆ ತಡೆಯುವ ಕ್ರಮಗಳಿಗೂ ಮುಂದಾಗಲಿದ್ದೇವೆ ಎಂದರು.

ಬಳಿಕ ಕೊಳ್ಳೇಗಾಲ ಪ್ರವಾಸಿ ಮಂದಿರದಲ್ಲಿ ಸಿಕಲ್‌ಸೆಲ್ ಅನಿಮಿಯಾ ರೋಗದಿಂದ ಬಳಲುತ್ತಿರುವವರು ಹಾಗೂ ಅವರ ಕುಟುಂಬದವರನ್ನು ಭೇಟಿ ಮಾಡಿ ಸಚಿವರು ಆರೋಗ್ಯ ವಿಚಾರಿಸಿದರು. ಶಾಸಕರಾದ ಎಂ.ಆರ್.ಮಂಜುನಾಥ್, ಮಾಜಿ ಶಾಸಕರಾದ ಆರ್.ನರೇಂದ್ರ, ರುದೀಪ್, ಜಿಪಂ ಸಿಇಓ ಆನಂದ್ ಪ್ರಕಾಶ್ ಮೀನಾ, ಎಡಿಸಿ ಗೀತಾ ಹುಡೇದ, ಎಸಿ ಮಹೇಶ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಚಿದಂಬರ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಪ್ರಕಾಶ್, ತಹಸೀಲ್ದಾರ್ ಗುರುಪ್ರಸಾದ್, ತಾಪಂ ಇಓ ಆರ್.ಉಮೇಶ್, ತಾಲೂಕು ಆರೋಗ್ಯಾಧಿಕಾರಿ ಡಾ.ಪ್ರಕಾಶ್, ಡಾ.ಗೋಪಾಲ್ ಇತರರಿದ್ದರು.

ಪಶು ಆಸ್ಪತ್ರೆ ನಿರ್ಮಾಣಕ್ಕೆ ಭೂಮಿ ಪೂಜೆ




ಚಾ.ನಗರ, ಸೆ.22– ನಗರದ ಗಾಳೀಪುರ ಬಳಿಯ ವರ್ತುಲ ರಸ್ತೆಯಲ್ಲಿ 1 ಕೋಟಿ ರೂ. ವೆಚ್ಚದ ಜಿಲ್ಲಾ ಪಾಲಿಕ್ಲಿನಿಕ್ ಮತ್ತು ಪಶು ಆಸ್ಪತ್ರೆ ನಿರ್ಮಾಣಕ್ಕೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಭೂಮಿ ಪೂಜೆ ನೆರವೇರಿಸಿದರು. ಬಳಿಕ ಮಾತನಾಡಿದ ಶಾಸಕರು, ಸುಸಜ್ಜಿತ ಪಶು ವೈದ್ಯಕೀಯ ಆಸ್ಪತ್ರೆ ನಿರ್ಮಾಣಕ್ಕೆ ಮಂಜೂರಾತಿ ದೊರೆತಿದ್ದು, ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಿ, ಲೋಕಾರ್ಪಣೆಗೊಳಿಸಲಾಗುವುದು ಎಂದ ಅವರು ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳಬೇಕು. ಪಶುಪಾಲನಾ ಇಲಾಖೆ ಅಧಿಕಾರಿಗಳು ಕಾಮಗಾರಿಯನ್ನು ಆಗ್ಗಾಗೆ ಪರಿಶೀಲಿಸಬೇಕು ಎಂದರು.

ಚಾಮರಾಜನಗರ ಜಿಲ್ಲೆ ಹೆಚ್ಚು ಗ್ರಾಮೀಣ ಪ್ರದೇಶಗಳಿಂದ ಕೂಡಿದ್ದು, ಹೈನುಗಾರಿಕೆ ಮೂಲಕ ಬಹುತೇಕ ಕುಟುಂಬಗಳು ಬದುಕು ಕಟ್ಟಿಕೊಂಡಿದ್ದಾರೆ. ಹೀಗಾಗಿ ರಾಸುಗಳಿಗೆ ತೊಂದರೆಯಾದರೇ ಕುಟುಂಬದ ಆಧಾರವೇ ಕಳಚಿ ಬೀಳುವಂತಾಗುತ್ತದೆ. ಹಾಗಾಗಿ ಗ್ರಾಮಸ್ಥರು ಸತತ ಪ್ರಯತ್ನ ಮಾಡಿದ್ದರ ಫಲವಾಗಿ ನೂತನ ಪಶು ವೈದ್ಯಕೀಯ ಆಸ್ಪತ್ರೆ ಮತ್ತು ಕಟ್ಟಡ ಮಂಜೂರಾತಿ ದೊರೆತಿದೆ ಎಂದರು.

ಈ ವೇಳೆ ಚಾಮರಾಜನಗರ ಜಿಲ್ಲಾ ನೋಡಲ್ ಅಧಿಕಾರಿ ಹಾಗೂ ಕೆಸಿಪಿಎಫ್ ವ್ಯವಸ್ಥಾಪಕ ನಿರ್ದೇಶಕ ಡಾ.ಪ್ರಕಾಶ್, ಉಪ ನಿರ್ದೇಶಕ ಡಾ.ಹನುಮೇಗೌಡ, ಜಿಲ್ಲಾ ಪಾಲಿಕ್ಲಿನಿಕ್ ಉಪನಿರ್ದೇಶಕ ಡಾ.ರಾಜಣ್ಣ, ಮುಖ್ಯ ಪಶುವೈದ್ಯಾಧಿಕಾರಿಗಳಾದ ಡಾ.ಶಿವಣ್ಣ, ಡಾ.ಮೂರ್ತಿ ಪಿ.ಎಂ, ಡಾ.ಸಿಂಧು, ಪಶುವೈದ್ಯಾಧಿಕಾರಿ ಡಾ.ಲಕ್ಷ್ಮಿಸಾಗರ್, ಸಿಬ್ಬಂದಿವರ್ಗ ಹಾಜರಿತ್ತು.

ಹುಲಿ ದಾಳಿಗೆ ಮೂರು ಹಸುಗಳು ಬಲಿ



ಗುಂಡ್ಲುಪೇಟೆ, ಸೆ22– ಹುಲಿ ದಾಳಿಗೆ ಮೂರು ಹಸುಗಳು ಬಲಿಯಾಗಿರುವ ಘಟನೆ ತಾಲೂಕಿನ ಮಲ್ಲಮ್ಮನಹುಂಡಿ ಗ್ರಾಮದಲ್ಲಿ ಶುಕ್ರವಾರ ಬೆಳಗ್ಗೆ ನಡೆದಿದೆ.

ಗ್ರಾಮದ ನಿವಾಸಿ ಗುರುಸಿದ್ದಪ್ಪ ಎಂಬುವರಿಗೆ ಸೇರಿದ ಹಸುಗಳು ಸಾವನ್ನಪ್ಪಿರುವುದು. ಇಂದಿನಂತೆ ಬೆಳಗ್ಗೆ ಗುರುಸಿದ್ದಪ್ಪನವರು ತಮ್ಮ ಹಸುಗಳನ್ನು ಮೇಯಿಸಲು ಜಮೀನಿನತ್ತ ಕರೆದೊಯ್ಯುವ ವೇಳೆ ಗ್ರಾಮದ ಬಳಿ ಹುಲಿ ದಾಳಿ ನಡೆಸಿದೆ ಈ ವೇಳೆ ಗ್ರಾಮಸ್ಥರು ಜೋರಾಗಿ ಕೂಗಿಕೊಳ್ಳುತ್ತಿದ್ದಂತೆ ಹುಲಿ ಪೊದೆಗಳತ್ತ ಓಡಿ ಹೋಗಿದೆ. ಘಟನೆಯಲ್ಲಿ ತೀವ್ರ ಗಾಯಗೊಂಡ 3 ಹಸುಗಳು ಸಾವನ್ನಪ್ಪಿದೆ.

ವಿಷಯ ತಿಳಿದು ಬಂಡೀಪುರ ರಾಷ್ಟ್ರೀಯ ಉದ್ಯಾನವನ ವಲಯದ ಅರಣ್ಯ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ಬಳಿಕ ಎಸ್‌ಟಿಪಿಎಫ್‌ನ 3 ತಂಡಗಳನ್ನು ರಚಿಸಿ ಸಮೀಪದ ತೋಪಿನ ಬಳಿ ಕೂಂಬಿಂಗ್ ನಡೆಸಿದರೂ ಹುಲಿ ಜಾಡು ಪತ್ತೆಯಾಗಲಿಲ್ಲ. ಆದ್ದರಿಂದ ಸ್ಥಳದಲ್ಲಿ ಕ್ಯಾಮೆರಾ ಹಾಗೂ ಬೋನು ಇರಿಸಿ ಪತ್ತೆ ಕಾರ್ಯ ಕೈಗೊಳ್ಳಲಾಗಿದೆ. ಇದೇ ವೇಳೆ ಆರ್‌ಎಫ್‌ಓ ಎನ್.ಪಿ. ನವೀನ್ ಕುಮಾರ್ ಜಾನುವಾರು ಕಳೆದುಕೊಂಡ ರೈತನಿಗೆ ಇಲಾಖೆಯಿಂದ ಸೂಕ್ತ ಪರಿಹಾರ ನೀಡುವುದಾಗಿ ಭರವಸೆ ನೀಡಿದರು.

ರಾತ್ರಿ ವೇಳೆ ರೈತರು ತಮ್ಮ ಬೆಳೆ ಕಾವಲಿಗೆ ಹೋಗಲು ಹಾಗೂ ಜಮೀನಿಗೆ ಜಾನುವಾರುಗಳನ್ನು ಕರೆದೊಯ್ಯಲು ಹೆದರುತ್ತಿದ್ದಾರೆ. ಕೂಲಿ ಕೆಲಸಕ್ಕೆ ಜಮೀನುಗಳಿಗೆ ಹೋಗಲು ಕಾರ್ಮಿಕರು ನಿರಾಕರಿಸುತ್ತಿದ್ದಾರೆ. ಗ್ರಾಮಗಳಲ್ಲಿ ಸಾಕು ಪ್ರಾಣಿಗಳನ್ನು ಕೊಲ್ಲುತ್ತಿರುವ ವನ್ಯಜೀವಿಗಳ ಸೆರೆಗೆ ಅರಣ್ಯ ಇಲಾಖೆ ಮುಂದಾಗಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

ಇಂದು ವಿದ್ಯುತ್ ವ್ಯತ್ಯಯ

ಚಾಮರಾಜನಗರ, ಸೆ.22– ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಚಾಮರಾಜನಗರ ಉಪವಿಭಾಗ ವ್ಯಾಪ್ತಿಯ ದೊಡ್ಡರಾಯಪೇಟೆ ಉಪಕೇಂದ್ರದಿಂದ ಹೊರ ಹೊಮ್ಮುವ 11 ಕೆವಿ ಫೀಡರ್‌ನಲ್ಲಿ ತುರ್ತು ಕಾರ್ಯ ಹಮ್ಮಿಕೊಂಡಿರುವುದರಿಂದ ಸೆ.23ರಂದು ಬೆಳಗ್ಗೆ 10 ರಿಂದ ಸಂಜೆ 5 ರವರೆಗೆ ಸೋಮವಾರಪೇಟೆ, ಮೂಡ್ಲುಪುರ, ಗಾಳಿಪುರ, ಯಡಪುರ, ಚಾಮರಾಜನಗರ ಪಟ್ಟಣ, ಜಿಲ್ಲಾಧಿಕಾರಿ ಕಚೇರಿ, ಭ್ರಮರಾಂಬ ಬಡಾವಣೆ, ರಾಮಸಮುದ್ರ, ಹೌಸಿಂಗ್ ಬೋರ್ಡ್, ಕರಿನಂಜನಪುರ, ಶಂಕರಪುರ, ಬಿ.ರಾಚಯ್ಯ ಜೋಡಿರಸ್ತೆ, ನ್ಯಾಯಾಲಯ ರಸ್ತೆ, ಟಿ.ಕೆ. ಮೋಳೆ, ಹರದನಹಳ್ಳಿ, ಬ್ಯಾಡಮೂಡಲು, ಚಿಕ್ಕಹೊಳೆ, ದೊಡ್ಡಮೋಳೆ, ಡೊಳ್ಳಿಪುರ, ಚಂದುಕಟ್ಟೆ ಮೋಳೆ, ಹರದನಹಳ್ಳಿ ಹಾಗೂ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಿಎಂ ಸಿದ್ದರಾಮಯ್ಯರನ್ನು ಅದ್ದೂರಿಯಾಗಿ ಸ್ವಾಗತಿಸಿ: ಆರ್.ನರೇಂದ್ರ

ಹನೂರು, ಸೆ.22– ಮುಖ್ಯಮಂತ್ರಿಯಾದ ಬಳಿಕ ಮೊದಲ ಬಾರಿಗೆ ಹನೂರು ಕ್ಷೇತ್ರಕ್ಕೆ ಆಗಮಿಸುತ್ತಿರುವ ಸಿದ್ದರಾಮಯ್ಯ ಅವರನ್ನು ಅದ್ದೂರಿಯಾಗಿ ಬರಮಾಡಿಕೊಳ್ಳಬೇಕು ಎಂದು ಮಾಜಿ ಶಾಸಕ ಆರ್.ನರೇಂದ್ರ ತಿಳಿಸಿದರು.



